ಕನ್ನಡ ದಿನಪತ್ರಿಕೆ
13 ಫೆಬ್ರುವರಿ I ಮಂಗಳವಾರ
13 February 2024

ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹ 4 ಸಂಪುಟ – 4 ಸಂಚಿಕೆ – 313 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | ✉ NEWSBELAGAVI@GMAIL.COM | ☎ 9900332089 | REG.NO G-2/PMG/KA/NK/BM/139/2024-26

ನಾರಾಯಣಸಾ ಭಾಂಡಗೆ ರಾಜ್ಯಸಭಾ ಟಿಕೆಟ್ ನೀಡಿದ ಬಿಜೆಪಿ

ಬೆಂಗಳೂರು: ಫೆ. 27 ರಂದು ನಡೆಯಲಿರುವ ರಾಜ್ಯಸಭಾ ಚುನಾವಣೆಗೆ ಬಿಜೆಪಿ ಭಾನುವಾರ ಸಂಜೆ ಅಭ್ಯರ್ಥಿಗಳ ಹೆಸರನ್ನು ಬಿಡುಗಡೆ ಮಾಡಿದೆ. ಕೇಂದ್ರ ಸಚಿವ ರಾಜೀವ್ ಚಂದ್ರಶೇಖರ್ ಬದಲಿಗೆ ಬಿಜೆಪಿ ಹೊಸ ಮುಖವನ್ನು ಕಣಕ್ಕಿಳಿಸಿದೆ. ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್ಎಸ್ಎಸ್) ಮುಖಂಡ ನಾರಾಯಣಸಾ ಕೆ ಭಾಂಡಗೆ ಅವರನ್ನು ಕರ್ನಾಟಕದಿಂದ ತನ್ನ ಅಭ್ಯರ್ಥಿಯಾಗಿ ಪಕ್ಷ ಘೋಷಿಸಿದೆ.

ರಾಜೀವ್ ಚಂದ್ರಶೇಖರ್ ಅವರು ಪಕ್ಷದ ಸ್ವಯಂಚಾಲಿತ ಆಯ್ಕೆಯಾಗಬಹುದು ಎಂದು ನಿರೀಕ್ಷಿಸಿದ್ದರಿಂದ ಈ ನಿರ್ಧಾರವು ಅನೇಕರಿಗೆ ಆಶ್ಚರ್ಯವನ್ನುಂಟು ಮಾಡಿದೆ. ಈ ಮಧ್ಯೆ, ಕರ್ನಾಟಕದಿಂದ ರಾಜ್ಯಸಭಾ ಸ್ಥಾನವನ್ನು ಬಯಸಿದ್ದ ಮಾಜಿ ಸಚಿವ ವಿ. ಸೋಮಣ್ಣ ಅವರನ್ನೂ ಕಡೆಗಣಿಸಲಾಗಿದೆ.

ನಾರಾಯಣಸಾ ಭಾಂಡಗೆ ಯಾರು?: ನಾರಾಯಣಸಾ ಅವರು ದೀರ್ಘಕಾಲದ ಆರ್ಎಸ್ಎಸ್ ಮತ್ತು ಬಿಜೆಪಿ ಕಾರ್ಯಕರ್ತರಾಗಿದ್ದು, ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ ಸೇರಿದಂತೆ ಹಲವಾರು ಆಂದೋಲನಗಳಲ್ಲಿ ಭಾಗವಹಿಸಿದ್ದಾರೆ. ಹಿಂದುತ್ವ ನಾಯಕ ಬಾಗಲಕೋಟೆಯಲ್ಲಿ ಕೇವಲ 17 ನೇ ವಯಸ್ಸಿನಲ್ಲಿ ಆರ್ಎಸ್ಎಸ್ಗೆ ಸೇರಿದರು.

ಸಾರಿಗೆ ಬಸ್ ಡಿಕ್ಕಿ: ಬೈಕ್ ಸವಾರ ದಾರುಣ ಸಾವು

ಬೆಂಗಳೂರು: ಸಿಲಿಕಾನ್ ಸಿಟಿಯಲ್ಲಿ ಕಿಲ್ಲರ್ ಬಿಎಂಟಿಸಿಯ ಬಳಿಕ ಕೆಎಸ್ಆರ್ಟಿಸಿಯ ಸರದಿ ಆರಂಭವಾಗಿದೆ. ಯಶವಂತಪುರ ಮೆಟ್ರೋ ನಿಲ್ದಾಣದ ಬಳಿ KSRTC ಬಸ್ ಬೈಕ್ ಸವಾರನಿಗೆ ಡಿಕ್ಕಿ ಹೊಡೆದಿದೆ.

ರಸ್ತೆಯ ಎಡಬದಿಯಲ್ಲಿ ಬರ್ತಿದ್ದ ಬೈಕ್ಗೆ ಕೆಎಸ್ಆರ್ಟಿಸಿ ಬಸ್ ಡಿಕ್ಕಿ ಹೊಡೆದಿದ್ದು ಬೈಕ್ ಸವಾರ ಹಿಂಬದಿ ಚಕ್ರಕ್ಕೆ ಸಿಲುಕಿ ಸಾವನ್ನಪ್ಪಿದ್ದಾರೆ. ತಲೆ ಮೇಲೆ ಬಸ್ ಹರಿದ ಪರಿಣಾಮ ರಾಜೇಂದ್ರ ಎಂಬ ವ್ಯಕ್ತಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಮೃತಪಟ್ಟ ಬೈಕ್ ಸವಾರನನ್ನು 45 ವರ್ಷದ ನಾಗಸಂದ್ರ ಏರಿಯಾದ ರಾಜೇಂದ್ರ ಎಂದು ಗುರುತಿಸಲಾಗಿದೆ. ಯಶವಂತಪುರ ಸಂಚಾರಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಯಮುನಾ ಎಕ್ಸ್‌ಪ್ರೆಸ್‌ವೇನಲ್ಲಿ ಭೀಕರ ಅಪಘಾತ : ಐದು ಮಂದಿ ಸಜೀವ ದಹನ

ಲಕ್ನೋ: ಉತ್ತರ ಪ್ರದೇಶದ ಮಥುರಾದ ಯಮುನಾ ಎಕ್ಸ್‌ಪ್ರೆಸ್‌ವೇಯಲ್ಲಿ ಕಾರ್-ಬಸ್ ನಡುವೆ ಡಿಕ್ಕಿಯಾಗಿ ಕನಿಷ್ಠ ಐವರು ಸಜೀವ ದಹನ ದಹನವಾಗಿರುವ ಘಟನೆ ನಡೆದಿದೆ ಎಂದು ಅಧಿಕಾರಿಗಳು ಸೋಮವಾರ ತಿಳಿಸಿದ್ದಾರೆ.

ಮಥುರಾದ ಮಹಾವನದಲ್ಲಿ ಚಾಲಕನ ನಿಯಂತ್ರಣ ತಪ್ಪಿ ಡಿವೈಡರ್‌ಗೆ ಡಿಕ್ಕಿ ಹೊಡೆದ ಕಾರು, ನಂತರ ಅದೇ ಮಾರ್ಗವಾಗಿ ಬರುತ್ತಿದ್ದ ಬಸ್‌ಗೆ ಡಿಕ್ಕಿ ಹೊಡೆದಿದೆ. ಈ ವೇಳೆ ಕಾರಿನಲ್ಲಿದ್ದ ಐವರು ಸುಟ್ಟು ಕರಕಲಾಗಿದ್ದಾರೆ. ಆದ್ರೆ ಬಸ್ಸಿನಲ್ಲಿದ್ದ ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಅಪಘಾತ ಸಂಭವಿಸುತ್ತಿದ್ದಂತೆ ಬೆಂಕಿ ಹೊತ್ತಿಕೊಂಡಿದ್ದು, ಎರಡೂ ವಾಹನಗಳು ಅಗ್ನಿಗೆ ಆಹುತಿಯಾಗಿವೆ. ಬೆಂಕಿ ನಂದಿಸಲು ಅಗ್ನಿಶಾಮಕ ದಳ ಸ್ಥಳಕ್ಕೆ ದೌಡಾಯಿಸಿದೆ.

ಅಪಘಾತಕ್ಕೀಡಾದ ಬಸ್ ಆಗ್ರಾದಿಂದ ನೋಯ್ಡಾಗೆ ತೆರಳುತ್ತಿತ್ತು.

ಪೂನಂ ಪಾಂಡೆಗೆ ಕಂಟಕ: 100 ಕೋಟಿ ರೂ. ಮಾನನಷ್ಟ ದೂರು ಸಲ್ಲಿಕೆ

ಬೆಂಗಳೂರು: ಗರ್ಭಕಂಠ ಕ್ಯಾನ್ಸರ್ ಕುರಿತಂತೆ ಸಾವಿನ ನಾಟಕವಾಡಿದ್ದ ಬಾಲಿವುಡ್ ನಟಿ ಪೂನಂ ಪಾಂಡೆಗೆ ಮಾನನಷ್ಟ ಸಂಕಷ್ಟ ಎದುರಾಗಿದೆ. ಈಕೆ ಮಾಡಿದ ನಾಟಕದಿಂದಾಗಿ ಬಾಲಿವುಡ್ ನಟ ನಟಿಯರ, ಮಾಡೆಲ್ ಗಳನ್ನು ಅನುಮಾನದಿಂದ ನೋಡುವಂತಾಗಿದೆ ಎಂದು ಫೈಜರ್ ಅನ್ಸಾರಿ ಎನ್ನುವವರು ಕಾನ್ಪುರ ಪೊಲೀಸ್ ಕಮಿಷ್ನರ್ ಗೆ ದೂರು ಸಲ್ಲಿಸಿದ್ದಾರೆ. ಇದಷ್ಟೇ ಅಲ್ಲದೇ, ಮೊನ್ನೆಯಷ್ಟೇ ಪೂನಂ ಪಾಂಡೆ ಮೇಲೆ ಎಫ್.ಐ.ಆರ್ ದಾಖಲಾಗಿದೆ. ಅಲಿ ಕಾಶಿಫ್ ಅನ್ನೋ ವಕೀಲರು ದೂರು ನೀಡಿದ್ದರು. ಈ ದೂರಿನ ಆಧಾರದ ಮೇಲೆ ಪೂನಂ ಮತ್ತು ಆಕೆಯ ಮ್ಯಾನೇಜರ್ ಮೇಲೆ ಎಫ್.ಐ.ಆರ್ ದಾಖಲಾಗಿದೆ. ಈ ಪ್ರಕರಣದ ಕುರಿತಂತೆ ಪೂನಂ ಮೇಲೆ ಸಾಕಷ್ಟು ಆರೋಪಗಳು ಕೇಳಿ ಬಂದಿವೆ. ಔಷಧಿ ಕಂಪನಿಗಳು ಈಕೆಗೆ ಹಣ ನೀಡಿ, ಈ ರೀತಿ ನಾಟಕವಾಡುವಂತೆ ಮಾಡಿವೆ ಎನ್ನುವ ಆರೋಪವಿತ್ತು. ಈ ಕುರಿತಂತೆ ಸ್ವತಃ ಪೂನಂ ಸ್ಪಷ್ಟನೆ ನೀಡಿದ್ದಾರೆ. ತಾವು ಸತ್ತಿರುವುದಾಗಿ ಹೇಳಿಕೊಂಡಿದ್ದರ ಹಿಂದೆ ನಿಜವಾದ ಕಾಳಜಿ ಇತ್ತು. ಯಾವುದೇ ಔಷಧಿ ಕಂಪನಿಗಳು ತಮಗೆ ಹಣ ನೀಡಿಲ್ಲ ಎಂದು ಇನ್ಸ್ಟಾದಲ್ಲಿ ಪೋಸ್ಟ್ ಮಾಡಿದ್ದಾರೆ.

ತನ್ನ ತಾಯಿ ಕೂಡ ಗಂಟಲು ಕ್ಯಾನ್ಸರ್ ನಿಂದ ಬಳಲುತ್ತಿದ್ದಾರೆ. ಕ್ಯಾನ್ಸರ್ ರೋಗಿಗಳು ಹೇಗೆ ನರಳುತ್ತಾರೆ ಎನ್ನುವುದನ್ನು ಸ್ವತಃ ನಾನು ನೋಡಿದ್ದೇನೆ. ಸದ್ಯ ತಾಯಿ ಆರೋಗ್ಯವಾಗಿದ್ದಾರೆ. ಅವರ ನೋವನ್ನು ನೋಡಿಯೇ ನಾನು ಗರ್ಭಕಂಠ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸಬೇಕು ಅಂತ ನಿರ್ಧಾರ ಮಾಡಿದ್ದು. ನೀವು ಟೀಕೆಗಳನ್ನು ಮಾಡುತ್ತಿದ್ದೀರಿ. ಆದರೆ, ನಾನು ಮಾಡಿದ್ದರ ಹಿಂದಿನ ಪರಿಣಾಮವನ್ನೂ ನೀವು ಗಮನಿಸಬೇಕು ಎಂದು ಅವರು ಪೋಸ್ಟ್ ಮಾಡಿದ್ದಾರೆ.

ವಿಧಾನಮಂಡಲ ಅಧಿವೇಶನ: ಸದನದಲ್ಲಿ ಕೇಸರಿ ಶಾಲು ಧರಿಸಿ ಜೈ ಶ್ರೀರಾಮ್ ಘೋಷಣೆ ಕೂಗಿದ ಬಿಜೆಪಿ, ಜೈ ಭೀಮ್ ಎಂದ ಕಾಂಗ್ರೆಸ್ ನಾಯಕರು

ಬೆಂಗಳೂರು: ರಾಜ್ಯ ವಿಧಾನಮಂಡಲ ಅಧಿವೇಶನ ಸೋಮವಾರ ಆರಂಭವಾಗಿದ್ದು, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಭಾಷಣ ಮುಗಿಸುತ್ತಿದ್ದಂತೆ ಬಿಜೆಪಿ ಶಾಸಕರು ಜೈ ಶ್ರೀ ರಾಮ್ ಎಂದು ಕೂಗಿದ್ದು, ಇದಕ್ಕೆ ಪ್ರತಿಯಾಗಿ ಕಾಂಗ್ರೆಸ್ ಶಾಸಕರು ಜೈ ಭೀಮ್ ಎಂದು ಘೋಷಣೆ ಕೂಗಿದ ಘಟನೆ ನಡೆದಿದೆ.

ಅದಲ್ಲದೆ ಬಿಜೆಪಿ ಶಾಸಕರು ಕೇಸರಿ ಶಾಲು ಧರಿಸಿ ಕಲಾಪದಲ್ಲಿ ಪಾಲ್ಗೊಂಡಿದ್ದು ವಿಶೇಷವಾಗಿತ್ತು. ಸದನ ಆರಂಭಕ್ಕೂ ಮುನ್ನವೇ ಸದನದ ಒಳಗೆ ಕೇಸರಿ ಶಾಲು ಹಾಕಿಕೊಂಡು ಬಂದ ವಿಧಾನಸಭೆ ಸದಸ್ಯರು ಹಾಗೂ ವಿಧಾನ ಪರಿಷತ್ ಸದಸ್ಯರು ಜೈ ಶ್ರೀ ರಾಮ್ ಘೋಷಣೆ ಕೂಗಿದರು.

ಅಧಿವೇಶನದ ಮೊದಲ ದಿನದವಾದ ಇಂದು ರಾಜ್ಯಪಾಲರು ಸದನವನ್ನು ಉದ್ದೇಶಿಸಿ ಭಾಷಣ ಮಾಡಿದರು. ಭಾಷಣ ಮುಗಿಸಿ ರಾಜ್ಯಪಾಲರು ಜೈ ಹಿಂದ್, ಜೈ ಕರ್ನಾಟಕ, ಧನ್ಯವಾದ ಎಂದು ಹೇಳುತ್ತಿದ್ದಂತೆ ಬಿಜೆಪಿ ಸದಸ್ಯರು ಜೈ ಶ್ರೀ ರಾಮ್ ಎಂದು ಘೋಷಣೆ ಕೂಗಿದರು. ಅಷ್ಟರಲ್ಲಿ ರಾಷ್ಟ್ರಗೀತೆ ಮೊಳಗಿತು. ರಾಷ್ಟ್ರಗೀತೆ ಮುಗಿಯುತ್ತಿದ್ದಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ವಿಧಾನಸಭೆ ಅಧ್ಯಕ್ಷ ಯು.ಟಿ.ಖಾದರ್, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾನೂನು ಸಚಿವ ಎಚ್. ಕೆ.ಪಾಟೀಲ್ ಅವರು ಸಭೆಯಿಂದ ನಿರ್ಗಮಿಸಿದರು.

ರಾಜ್ಯಪಾಲರು ತೆರಳುವವರೆಗೂ ಬಿಜೆಪಿ ಸದಸ್ಯರು ಜೈ ಶ್ರೀರಾಮ್ ಘೋಷಣೆ ಕೂಗುತ್ತಿದ್ದರು. ಇದಕ್ಕೆ ಪ್ರತಿಯಾಗಿ ಸಚಿವರಾದ ಸಂತೋಷ್ ಲಾಡ್, ಬೈರತಿ ಸುರೇಶ್, ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್ ಸೇರಿದಂತೆ ಇತರ ಕಾಂಗ್ರೆಸ್ ಶಾಸಕರು 'ಜೈ ಭೀಮ್, ಜೈ ಸಂವಿಧಾನ' ಎಂದು ಘೋಷಣೆ ಕೂಗಿದರು.

ಇನ್ನು ಎನ್ ಡಿ ಎ ಮೈತ್ರಿ ಜೆಡಿಎಸ್ ಸದಸ್ಯರು ಯಾವುದೇ ಘೋಷಣೆ ಕೂಗದೆ ತಟಸ್ಥವಾಗಿ ಉಳಿದರು.

ಮಂಡ್ಯದಲ್ಲಿ ಕೆರಗೋಡು ಪ್ರತಿಭಟನೆಯ ಸಂದರ್ಭದಲ್ಲಿ ಮಾಜಿ ಸಿಎಂ ಎಚ್ ಡಿ ಕುಮಾರಸ್ವಾಮಿ ಕೇಸರಿ ತೊಟ್ಟದ್ದು ಚರ್ಚೆಗೆ ಗ್ರಾಮವಾಗಿತ್ತು. ಈ ವೇಳೆ ಜೆಡಿಎಸ್ ವರಿಷ್ಠರೂ ಅಗಿರುವ ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡ ಅವರು ಕೇಸರಿ ಶಾಲು ಧರಿಸಿದ್ದಕ್ಕೆ ಆಕ್ಷೇಪ ವ್ಯಕ್ತಪಡಿಸಿತ್ತು.

ಆ ಬಳಿಕ ಜೆಡಿಎಸ್ ಕೂಡ ಕೇಸರಿ ಶಾಲು ವಿವಾದದಿಂದ ದೂರ ಉಳಿದಿತ್ತು. ಸೋಮವಾರ ಸಹ ವಿಧಾನಸಭೆಯಲ್ಲಿ ಬಿಜೆಪಿ ಸದಸ್ಯರು ಕೇಸರಿ ತೊಟ್ಟರೂ ಜೆಡಿಎಸ್ ಸದಸ್ಯರು ಕೇಸರಿಯಿಂದ ಅಂತರ ಕಾಯ್ದುಕೊಂಡಿರುವುದು ಕಂಡು ಬಂದಿತ್ತು.

ಇದಕ್ಕೂ ಮುನ್ನ ವಿಧಾನ ಮಂಡಲದ ಜಂಟಿ ಅವೇಶನ ಉದ್ದೇಶಿಸಿ ಭಾಷಣ ಮಾಡಲು ಆಗಮಿಸಿದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಸಂಪ್ರದಾಯದಂತೆ ಸ್ವಾಗತಿಸಲಾಯಿತು.

ರಾಜಭವನದಿಂದ ವಿಶೇಷ ವಾಹನದಲ್ಲಿ ಆಗಮಿಸಿದ ಅವರನ್ನು ಶಿಷ್ಟಾಚಾರದಂತೆ ಶಾಸಕರ ಭವನ ಪ್ರವೇಶಿಸುವ ಗೇಟ್ ಬಳಿ ಅಶ್ವದಳದ ಮೂಲಕ ಬರಮಾಡಿಕೊಳ್ಳಲಾಯಿತು.

ನಂತರ ವಿಧಾನಸೌಧ ಮುಂಭಾಗ ಆಗಮಿಸಿದ ರಾಜ್ಯಪಾಲರನ್ನು ವಿಧಾನಸಭೆಯ ಸಭಾಧ್ಯಕ್ಷ ಯು.ಟಿ.ಖಾದರ್, ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ಹೂಗುಚ್ಛ ನೀಡಿ ಬರಮಾಡಿಕೊಂಡರು.

ಬಳಿಕ ವಿಧಾನಸಭೆ ಪ್ರಾಂಗಣ ಪ್ರವೇಶಿಸುತ್ತಿದ್ದಂತೆ ಸಂಪ್ರದಾಯದಂತೆ ಪೊಲೀಸ್ ಬ್ಯಾಂಡ್ ಮೂಲಕ ಸ್ವಾಗತ ಕೋರಲಾಯಿತು. ಬಳಿಕ ಸದನದ ಸದಸ್ಯರೆಲ್ಲರೂ ಎದ್ದು ನಿಂತು ರಾಜ್ಯಪಾಲರಿಗೆ ಸ್ವಾಗತ ಕೋರಿದರು.

ದಿಲ್ಲಿಗೆ ಹೊರಟಿದ್ದ ಹುಬ್ಬಳ್ಳಿ ರೈತರ ಸೆರೆ: ಸಿಎಂ ಸಿದ್ದರಾಮಯ್ಯ ಕಿಡಿ

ಬೆಂಗಳೂರು: ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆಗೆಂದು ದೆಹಲಿಗೆ ಹೊರಟ್ಟಿದ್ದ ಹುಬ್ಬಳ್ಳಿಯ ರೈತರನ್ನು ಭೂಪಾಲ್ ಪೊಲೀಸರು ಬಂಧಿಸಿದ್ದಾರೆ. ಇದಕ್ಕೆ ಸಿಎಂ ಸಿದ್ದರಾಮಯ್ಯ ಅವರು ಮಧ್ಯಪ್ರದೇಶ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ.

ಈ ಬಗ್ಗೆ ಟ್ವೀಟ್ ಮಾಡಿರುವ ಸಿದ್ದರಾಮಯ್ಯ, ದೆಹಲಿಯಲ್ಲಿ ನಡೆಯಲಿರುವ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲು ಹೋಗುತ್ತಿದ್ದ ಹುಬ್ಬಳ್ಳಿಯ ರೈತರನ್ನು ಭೋಪಾಲ್‌ನಲ್ಲಿ ಬಂಧಿಸಿರುವ ಮಧ್ಯಪ್ರದೇಶ ಸರ್ಕಾರದ ಕ್ರಮ ಅತ್ಯಂತ ಖಂಡನೀಯ ಎಂದು ಭೂಪಾಲ್ ಪೊಲೀಸರ ನಡೆಯನ್ನು ಖಂಡಿಸಿದ್ದಾರೆ.

ಬಂಧಿಸಲಾದ ರಾಜ್ಯದ ನಮ್ಮ ಎಲ್ಲ ರೈತರನ್ನು ತಕ್ಷಣ ಬಿಡುಗಡೆಗೊಳಿಸಿ ನಾಳೆ ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆಯಲಿರುವ ಪ್ರತಿಭಟನೆಯಲ್ಲಿ ಭಾಗವಹಿಸಲು ಕಳಿಸಿಕೊಡಬೇಕು ಎಂದು ಮಧ್ಯಪ್ರದೇಶ ಸರ್ಕಾರವನ್ನು ಒತ್ತಾಯಿ ಸುತ್ತಿದ್ದೇನೆ. ಬಂಧಿಸಿರುವುದು ಮಧ್ಯಪ್ರದೇಶದ ಸರ್ಕಾರವಾದರೂ ಈ ದುಷ್ಕೃತ್ಯದ ಹಿಂದಿನ ಕ್ರಿಮಿನಲ್ ಮೆದುಳು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಬಿಜೆಪಿ ಸರ್ಕಾರ ಎನ್ನುವುದು ಸ್ಪಷ್ಟ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ರೀತಿ ಬಂಧಿಸಿ, ಬೆದರಿಸಿ ರೈತರ ಹೋರಾಟವನ್ನು ಹತ್ತಿಕ್ಕಲಾಗದು. ಇಂತಹ ದಬ್ಬಾಳಿಕೆಯಿಂದ ರೈತರು ಬೀದಿಗಿಳಿಯಬಹುದೇ ಹೊರತು ಮಣ್ಣಿನ ಮಕ್ಕಳ ಹೋರಾಟ ನಿಲ್ಲದು. ಶಾಂತಿ-ಸುವ್ಯವಸ್ಥೆಯ ಕಾಳಜಿಯನ್ನು ಕೇಂದ್ರ ಸರ್ಕಾರ ಹೊಂದಿದ್ದರೆ ತಕ್ಷಣ ರೈತರ ಬೇಡಿಕೆಗಳನ್ನು ಈಡೇರಿಸಿ ಸಮಸ್ಯೆ ಬಗೆಹರಿಸಬೇಕೇ ಹೊರತು ಈ ರೀತಿ ದಮನ-ದೌರ್ಜನ್ಯ ನಡೆಸಿ ರೈತರ ಬಾಯಿ ಮುಚ್ಚಿಸುವುದಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ.

ಕೇಂದ್ರದಲ್ಲಿ ಇರಲಿ, ರಾಜ್ಯಗಳಲ್ಲಿ ಇರಲಿ ಬಿಜೆಪಿ ಕೈಗೆ ಅಧಿಕಾರ ಬಂದ ಕೂಡಲೇ ಅವರು ಮೊದಲು ದಂಡ ಪ್ರಯೋಗ ಮಾಡುವುದು ಅನ್ನದಾತರ ಮೇಲೆ ಎನ್ನುವುದಕ್ಕೆ ಇತಿಹಾಸ ಸಾಕ್ಷಿ. ಕರ್ನಾಟಕದಲ್ಲಿ ಮೊದಲ ಬಾರಿ ಅಧಿಕಾರಕ್ಕೆ ಬಂದಿದ್ದ ಬಿಜೆಪಿ ಗೊಬ್ಬರ ಕೇಳಿದ್ದ ರೈತರನ್ನು ನಿರ್ದಯವಾಗಿ ಬಿ.ಎಸ್. ಯಡಿಯೂರಪ್ಪ ನೇತೃತ್ವದ ಸರ್ಕಾರ ಗುಂಡಿಕ್ಕಿ ಕೊಂದಿತ್ತು. ಕೇಂದ್ರದ ನರೇಂದ್ರ ಮೋದಿಯವರ ಸರ್ಕಾರ ದೆಹಲಿ ಮತ್ತು ಉತ್ತರ ಪ್ರದೇಶಲ್ಲಿ ಪ್ರತಿಭಟನಾನಿರತ ರೈತರ ಮೇಲೆ ನಡೆಸಿದ್ದ ದೌರ್ಜನ್ಯದಲ್ಲಿ ಹಲವಾರು ರೈತರು ಸಾವಿಗೀಡಾಗಿದ್ದರು ಎಂದು ಕಿಡಿಕಾರಿದ್ದಾರೆ.

ನರೇಂದ್ರ ಮೋದಿ ಅವರ ಸರ್ಕಾರದ ಈಗಿನ ಕ್ರಮಗಳನ್ನು ನೋಡಿದರೆ ರೈತರನ್ನು ಬೆದರಿಸಿ ತಲೆ ಎತ್ತದಂತೆ ಮಾಡುವುದೇ ಮುಖ್ಯ ಉದ್ದೇಶವಿದ್ದಂತೆ ಕಾಣುತ್ತಿದೆ. ಜೈ ಕಿಸಾನ್” ಎಂದು ಸಿಎಂ ಸಿದ್ದರಾಮಯ್ಯ ಅವರು ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ.

30 ಸಾವಿರ ರೂ. ಬೈಕ್ ಗೆ, 3 ಲಕ್ಷ ದಂಡ: ಬೈಕ್ ಬೇಡವೆಂದು ಬಿಟ್ಟು ಹೋದ ಸವಾರ

ಬೆಂಗಳೂರು: ಸಂಚಾರಿ ನಿಯಮ ಉಲ್ಲಂಘಿಸಿದ್ದಕ್ಕೆ ಸಿಲಿಕಾನ್ ಸಿಟಿಯ ಬೈಕ್‌ವೊಂದರ ಮೇಲೆ ಬರೋಬ್ಬರಿ 300 ಪ್ರಕರಣ ದಾಖಲಾಗಿದ್ದು, ಒಟ್ಟು 3 ಲಕ್ಷ ರೂ. ದಂಡ ಬಿದ್ದಿದೆ. ಬೆಂಗಳೂರಲ್ಲಿ ಅತಿ ಹೆಚ್ಚು ಸಂಚಾರಿ ನಿಯಮ ಉಲ್ಲಂಘಿಸಿದ ಬೈಕ್ ಇದು ಎಂಬ ಕುಖ್ಯಾತಿಯನ್ನೂ ಪಡೆದಿದೆ.

ಬೈಕ್ ಬೆಲೆ 30,000 ರೂ., ಆದರೆ ನಗರದಲ್ಲಿ ಸಂಚಾರಿ ನಿಯಮ ಉಲ್ಲಂಘನೆ ಮಾಡಿರೋದರಲ್ಲಿ ಬೆಂಗಳೂರಿಗೆ ಮೊದಲನೇಯವರು ಸುಧಾಮ ನಗರದ ವೆಂಕಟರಮನ್. ಇವರ, ಎಂ05ಎಈ7969 ನಂಬರಿನ ಆಕ್ಟಿವಾ ಹೊಂಡಾ ಬೈಕ್‌ನ ಮೇಲೆ ಬರೋಬ್ಬರಿ 300 ಕೇಸ್‌ಗಳು ದಾಖಲಾಗಿದೆ.

ಸಂಚಾರಿ ನಿಯಮ ಉಲ್ಲಂಘನೆ ಮಾಡಿ 300 ಕೇಸ್ ಹಾಕಿಸಿಕೊಂಡಿರುವ ವೆಂಕಟರಮನ್ ನಗರದಲ್ಲಿ ನಂಬರ್ ಒನ್ ಸಂಚಾರಿ ನಿಯಮ ಉಲ್ಲಂಘನೆ ಮಾಡಿರೋ ಅಪಖ್ಯಾತಿಗೆ ಒಳಾಗಿದ್ದಾರೆ. ಒನ್ ವೇ ಸಂಚಾರ, ಸಿಗ್ನಲ್ ಜಂಪ್, ಮೊಬೈಲ್‌ನಲ್ಲಿ ಮಾತನಾಡುತ್ತಾ ವಾಹನ ಚಲಾವಣೆ, ಫುಟ್‌ಪಾಥ್ ರೈಡಿಂಗ್.. ಪೊಲೀಸ್ ಮ್ಯಾನ್ಯೂವಲ್‌ನಲ್ಲಿ ಯಾವ್ಯಾವ ಕಾನೂನುಗಳು ಉಲ್ಲಂಘನೆ ಎಂದು ಎನಿಸಿಕೊಳ್ಳುತ್ತೋ ಅದೆಲ್ಲಾ ಈ ವೆಂಕಟರಾಮನ್ ಮಾಡಿಬಿಟ್ಟಿದ್ದಾರೆ.

ಎಸ್.ಆರ್ ನಗರ, ವಿಲ್ಸನ್ ಗಾರ್ಡನ್ ಸೇರಿದಂತೆ ಹಲವೆಡೆ ಸಂಚಾರ ನಿಯಮ ಉಲ್ಲಂಘನೆ ಮಾಡಿರೋದು ಸಿಗ್ನಲ್‌ನಲ್ಲಿರೋ ಕ್ಯಾಮೆರಾಗಳಲ್ಲಿ ಸೆರೆಯಾಗಿದೆ. ವೆಂಕಟರಮನ್ ಬೈಕ್ ಮೇಲೆ 300 ಕೇಸ್‌ಗಳಿಂದ ಒಟ್ಟು ದಂಡದ ಮೊತ್ತ 3,20,000 ರೂ. ಇದೆ. ಬೈಕ್ ಮೇಲಿರುವ ಕೇಸ್ ಪರಿಶೀಲನೆ ಮಾಡಿ, ವಿಲ್ಸನ್ ಗಾರ್ಡನ್‌ನ ಸುಧಾಮ ನಗರದಲ್ಲಿರುವ ವೆಂಕಟರಮನ್ ಮನೆಗೆ ಸಂಚಾರಿ ಪೊಲೀಸರು ನೋಟಿಸ್ ನೀಡಿದ್ದಾರೆ.

ಬಿಯರ್ ಬೆಲೆ ಹೆಚ್ಚಿಸಿದ್ದ ಸರ್ಕಾರಕ್ಕೇ ಶಾಕ್ ಕೊಟ್ಟ ಮದ್ಯಪ್ರಿಯರು

ಬೆಂಗಳೂರು: ಸರ್ಕಾರ ಬಿಯರ್ ಮೇಲಿನ ಹೆಚ್ಚುವರಿ ಅಬಕಾರಿ ಸುಂಕವನ್ನು ಶೇ.185 ರಿಂದ 195 ಕ್ಕೆ ಹೆಚ್ಚಳ ಮಾಡಿರುವುದರಿಂದ ಬಿಯರ್ ದರ ಫೆ 1 ರಿಂದ ಪ್ರತಿ ಬಾಟಲ್‌ಗೆ 5 ರೂಪಾಯಿಗಳಿಂದ 12 ರೂಪಾಯಿವರೆಗೂ ಹೆಚ್ಚಳವಾಗಲಿದೆ ಎಂದು ಈ ಹಿಂದೆ ವರದಿಯಾಗಿತ್ತು. ಆದರೆ ಬಿಯರ್ ಬೆಲೆ ಏರಿಕೆಯಾಗಿದ್ದರಿಂದ ಮದ್ಯಪ್ರಿಯರು ಬಿಯರ್ ಖರೀದಿಗೆ ಹಿಂದೇಟು ಹಾಕಿದ್ದರಿಂದ ರಾಜ್ಯಾದ್ಯಂತ ಫೆ.1ರಿಂದಲೂ ಬಿಯರ್ ಮಾರಾಟ ಕುಸಿಯುತ್ತಲೇ ಸಾಗಿದೆ ಎನ್ನಲಾಗಿದೆ. ರಾಜ್ಯದಲ್ಲಿ ಕಳೆದ ವರ್ಷ ಫೆಬ್ರವರಿ 1 ರಿಂದ 7 ರವರೆಗೆ ಏಳು ದಿನಗಳಲ್ಲಿ 7.26 ಲಕ್ಷ ಬಾಕ್ಸ್ ಬಿಯರ್ ಮಾರಾಟವಾಗಿತ್ತು. ಈ ವರ್ಷ ಇದೇ ಅವಧಿಯಲ್ಲಿ 6.46 ಲಕ್ಷ ಬಾಕ್ಸ್ ಬಿಯರ್ ಮಾರಾಟವಾಗಿದೆ. ಬಿಯರ್ ಮಾರಾಟ ಕುಸಿದಿರುವ ಕಾರಣ, ರಾಜ್ಯ ಪಾನೀಯ ನಿಗಮಕ್ಕೆ ಬಿಯರ್‌ಗಾಗಿ ಸಲ್ಲಿಸುವ ಖರೀದಿ ಬೇಡಿಕೆ ಕೂಡ ಇಳಿಕೆಯಾಗಿದೆ. ಆದರೆ ದೇಸಿ ಮದ್ಯದ ವಹಿವಾಟಿನಲ್ಲಿ ಹೆಚ್ಚಿನ ಏರಿಳಿತವಾಗಿಲ್ಲ. ಒಟ್ಟಾರೆ ಬಿಯರ್ ಮಾರಾಟ ಕುಸಿತಕ್ಕೆ ತೆರಿಗೆ ಹೆಚ್ಚಳವೇ ಪ್ರಮುಖ ಕಾರಣ. ಆದರೆ ಮಾರಾಟ ಕುಸಿತ ಕಂಡಿದ್ದರೂ ಸರಕಾರದ ಬೊಕ್ಕಸಕ್ಕೆ ನಷ್ಟವಿಲ್ಲ. ತೆರಿಗೆ ಹೆಚ್ಚಳ ಮಾಡಿರುವುದರಿಂದ ನಿರೀಕ್ಷೆಯಂತೆಯೇ ಆದಾಯ ಹೆಚ್ಚಾಗಲಿದೆ. ಈ ಹಿನ್ನೆಲೆಯಲ್ಲಿ ಮದ್ಯಪ್ರಿಯರು ಕಡಿಮೆ ಬೆಲೆಯ ಬಿಯರ್ ಬ್ರ್ಯಾಂಡ್ ಖರೀದಿ ಮಾಡುತ್ತಿದ್ದು, ಕಡಿಮೆ ಬೆಲೆಯ ಬಿಯರ್‌ಗೆ ಡಿಮಾಂಡ್ ಜಾಸ್ತಿಯಾಗಿದೆ. ಕಾಂಗ್ರೆಸ್ ಸರಕಾರ ಬಂದ ನಂತರ ಮೂರು ಬಾರಿ ಬಿಯರ್ ದರ ಹೆಚ್ಚಳವಾಗಿದೆ. ಇತ್ತ ಕಡೆ ಬಿಯರ್ ಉತ್ಪಾದನಾ ಕಂಪನಿಗಳು ಬಾಟಲ್ ಮೇಲೆ ಕನಿಷ್ಠ 10 ರೂ.ವರೆಗೆ ದರ ಹೆಚ್ಚಿಸಿದ್ದವು. ಇದೀಗ ಮತ್ತೆ ಬಿಯರ್ ದರ ಹೆಚ್ಚಳವಾಗಿದ್ದು, ಆರೇಳು ತಿಂಗಳ ಅವಧಿಯಲ್ಲಿ ಬಿಯರ್ ಬೆಲೆ ಪ್ರತಿ ಬಾಟಲ್‌ಗೆ ಸುಮಾರು 40 ರೂ.ವರೆಗೆ ಹೆಚ್ಚಳವಾದಂತಾಗಿದೆ.

ಕೇರಳ ಸಿಎಂ ಪುತ್ರಿ ಕಂಪನಿಗೆ ಅಕ್ರಮ ಹಣ ಸಂದಾಯ: ಬಂಧನ ಮಾಡದಂತೆ ಹೈಕೋರ್ಟ್ ಸೂಚನೆ

ಬೆಂಗಳೂರು: ಅಕ್ರಮ ಹಣ ಸಂದಾಯ ಪ್ರಕರಣ ಸಂಬಂಧ ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಪುತ್ರಿಯೂ ಆಗಿರುವ ಎಕ್ಸಲಾಜಿಕ್ ಸಲ್ಯೂಷನ್ಸ್ ಪ್ರೈ.ಲಿ. ನಿರ್ದೇಶಕಿ ಟಿ. ವೀಣಾ ಅವರ ವಿರುದ್ಧ ಬಲವಂತದ ಬಂಧನದಂತಹ ಕ್ರಮಗಳನ್ನು ಕೈಗೊಳ್ಳದಂತೆ ಕೇಂದ್ರ ಸರ್ಕಾರದ ತನಿಖಾ ದಳ ಎಸ್ಎಫ್ಐಒಗೆ ಕರ್ನಾಟಕ ಹೈಕೋರ್ಟ್ ಸೂಚನೆ ನೀಡಿದೆ.

ಅಲ್ಲದೆ, ಪ್ರಕರಣ ಸಂಬಂಧ ತನಿಖಾ ದಳಕ್ಕೆ ದಾಖಲೆಗಳನ್ನು ನೀಡುವಂತೆ ಸೂಚನೆ ನೀಡಿದೆ. ಯಾವುದೇ ಸೇವೆ ನೀಡದಿದ್ದರೂ ಕೊಚ್ಚಿನ್ ಮಿನರಲ್ಸ್‌ನಿಂದ ಕೇರಳದ ರಾಜಕೀಯ ವ್ಯಕ್ತಿಗಳಿಗೆ 135 ಕೋಟಿ ರೂಪಾಯಿ ನೀಡಲಾಗಿದೆ ಎಂಬ ಅಂಶ ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ನಡೆಸಿದ ದಾಳಿ ವೇಳೆ ತಿಳಿದು ಬಂದಿತ್ತು. ಅಲ್ಲದೆ, ಈ ಹಣದ ಪೈಕಿ 1.72 ಕೋಟಿ ರೂಪಾಯಿಗಳನ್ನು ಟಿ. ವೀಣಾ ನಿರ್ದೇಶಕಿಯಾಗಿರುವ ಕರ್ನಾಟಕದಲ್ಲಿರುವ ಎಕ್ಸಲಾಜಿಕ್ ಸಲ್ಯೂಷನ್ಸ್ ಪ್ರೈ.ಲಿ.ಗೆ ವರ್ಗಾವಣೆಯಾಗಿರುವುದು ಕಂಡು ಬಂದಿತ್ತು.

ಯಾವುದೇ ಸೇವೆ ನೀಡದಿದ್ದರೂ ಹಣ ಸಂದಾಯ ಮಾಡಿದ ಪ್ರಕರಣ ಸಂಬಂಧ ಐಟಿ ಅಧಿಕಾರಿಗಳು ಎಸ್ಎಫ್ಐಒ ಗಮನಕ್ಕೆ ತಂದಿತ್ತು. ಅದರಂತೆ ಪ್ರಕರಣ ದಾಖಲಿಸಿಕೊಂಡ ಎಸ್ಎಫ್ಐಒ ತನಿಖೆ ನಡೆಸುತ್ತಿದೆ.

ಇದರ ವಿರುದ್ಧ ವೀಣಾ ಅವರು ಹೈಕೋರ್ಟ್ ಮೆಟ್ಟಿಲೇರಿದ್ದರು. ಅರ್ಜಿ ವಿಚಾರಣೆ ನಡೆಸಿದ ನ್ಯಾ.ಎಂ. ನಾಗಪ್ರಸನ್ನ ಅವರಿದ್ದ ಹೈಕೋರ್ಟ್ ಏಕಸದಸ್ಯ ಪೀಠ, ತನಿಖಾದಳಕ್ಕೆ ಕಂಪನಿ ದಾಖಲೆಗಳನ್ನು ಒದಗಿಸಬೇಕು ಎಂದು ಸೂಚನೆ ನೀಡಿತು.

ಅಲ್ಲದೆ, ಯಾವುದೇ ಬಂಧನದಂತಹ ಬಲವಂತದ ಕ್ರಮ ಕೈಗೊಳ್ಳದಂತೆ ಎಸ್ಎಫ್ಐಒ ಸೂಚನೆ ನೀಡಿತು. ಸಿಎಂ ವಿಜಯನ್ ಪುತ್ರಿ ಟಿ.ವೀಣಾರ ಕಂಪನಿಗೆ ಕೊಚ್ಚಿನ್ ಮಿನರಲ್ಸ್ ಹಣ ಸಂದಾಯ ಮಾಡಿದೆ. ಮಾಹಿತಿ ಕೇಳಿದರೆ ಜಿಎಸ್‌ಟಿ ಪಾವತಿಸಿರುವುದಾಗಿ ಕಂಪನಿ ಹೇಳುತ್ತಿದೆ.

ಹಲವು ವ್ಯವಹಾರಗಳು ಅನುಮಾನಾಸ್ಪದವಾಗಿವೆ ಎಂದು ಹೆಚ್ಚುವರಿ ಸಾಲಿಸಿಟರ್ ಜನರಲ್ ಅರವಿಂದ್ ಕಾಮತ್ ವಾದಮಂಡನೆ ಮಾಡಿದರು. ವ್ಯವಹಾರದ ಮಾಹಿತಿ ನೀಡದಿರುವುದು ವಂಚನೆಯಾಗುವುದಿಲ್ಲ. ಯಾವುದೇ ಅಪರಾಧವೆಸಗದಿದ್ದರೂ ತನಿಖೆ ಕಾನೂನು ಬಾಹಿರ ಎಂದು ಟಿ.ವೀಣಾ ಪರ ವಕೀಲರು ವಾದಮಂಡನೆ ಮಾಡಿದರು. ವಾದ ಪ್ರತಿವಾದ ಆಲಿಸಿದ ಪೀಠ, ಆದೇಶ ಕಾಯ್ದಿರಿಸಿದೆ.

ಶ್ರೀರಾಮನಿಗೆ ಅವಹೇಳನ: ಶಾಲಾ ಶಿಕ್ಷಕಿ ಅಮಾನತು



ಮಂಗಳೂರು: ಶ್ರೀರಾಮನಿಗೆ ಅವಹೇಳನ ಮಾಡಿದ ಆರೋಪ ಸಂಬಂಧ ಸಂತ ಜೆರೋಸಾ ಶಾಲೆಯ ಶಿಕ್ಷಕಿ ಸಿಸ್ಟರ್ ಪ್ರಭಾ ಅವರನ್ನು ಆಡಳಿತ ಮಂಡಳಿ ಅಮಾನತು ಮಾಡಿದೆ.

ಹಿಂದೂಗಳ ಅಸ್ಮಿತೆ ಶ್ರೀರಾಮನ ಅವಹೇಳನ ಖಂಡಿಸಿ ಬಿಜೆಪಿ ಶಾಸಕ ವೇದವ್ಯಾಸ್ ಕಾಮತ್ ನೇತೃತ್ವದಲ್ಲಿ ಇಂದು ಪೋಷಕರು ಶಾಲೆಗೆ ಮುತ್ತಿಗೆ ಹಾಕಲು ಯತ್ನಿಸಿದರು. ಈ ವೇಳೆ ಸ್ಥಳಕ್ಕಾಗಮಿಸಿದ ಆಡಳಿತ ಮಂಡಳಿ ಸದಸ್ಯರು, ತನಿಖೆ ಪೂರ್ಣಗೊಳ್ಳುವವರೆಗೂ ಶಿಕ್ಷಕಿಯನ್ನು ಅಮಾನತು ಮಾಡಿದ್ದಾಗಿ ತಿಳಿಸಿದ್ದಾರೆ.

ಶಾಲೆಯ ಏಳನೇ ತರಗತಿ ಶಿಕ್ಷಕಿ ಪ್ರಭಾ ವಿರುದ್ಧ ಧರ್ಮ ನಿಂದನೆಯ ಕಿಚ್ಚು ಜೋರಾಗಿದ್ದು, ಶಾಲೆಯ ಮುಂಭಾಗ ನೂರಾರು ಸಂಖ್ಯೆಯಲ್ಲಿ ಪೋಷಕರು, ಹಿಂದೂ ಕಾರ್ಯಕರ್ತರು ಜಮಾವಣೆಗೊಂಡಿದ್ದರು. ಪೋಷಕರೊಂದಿಗೆ ಶಾಸಕ ವೇದವ್ಯಾಸ್ ಕಾಮತ್ ಕೂಡ ಆಗಮಿಸಿದ್ದು, ಶಾಲೆಗೆ ಮುತ್ತಿಗೆ ಹಾಕಲು ಯತ್ನಿಸಿದರು. ಆದರೆ ಈ ವೇಳೆ ಪೊಲೀಸರು ಶಾಲೆ ಗೇಟ್ ಮುಂಭಾಗ ಶಾಸಕ ಹಾಗೂ ಪೋಷಕರನ್ನು ತಡೆದಿದ್ದರು.

ಆಡಳಿತ ಮಂಡಳಿಯ ಸದಸ್ಯರು ಅಧಿಕೃತವಾಗಿ ಲಿಖಿತವಾಗಿ ಶಾಲೆಯ ಲೆಟರ್ ಹೆಡ್ನಲ್ಲಿ ಶಿಕ್ಷಕಿಯನ್ನು ಅಮಾನತ್ತು ಮಾಡಿರುವ ಬಗ್ಗೆ ಸ್ಪಷ್ಟನೆ ನೀಡಿದರು. ಮುಂದೆ ಶಿಕ್ಷಣ ಇಲಾಖೆ ಪ್ರಕರಣದ ಆಂತರಿಕ ತನಿಖೆ ನಡೆಸಲಿದೆ. ಶಿಕ್ಷಣ ಇಲಾಖೆ ತನಿಖಾ ವರದಿ ಆಧಾರದ ಮೇಲೆ ಪೊಲೀಸರು ಕಾನೂನು ಕ್ರಮ ಕೈಗೊಳ್ಳಲಿದ್ದಾರೆ.

ಫೆಬ್ರವರಿ 8ರಂದು ‘ಫಾಡಿಇ ೧ ತಿಂಢುಖಿ’ ಎಂಬ ವಿಷಯ ಬಗ್ಗೆ ಪಾಠ ಮಾಡಿದ್ದ ಶಿಕ್ಷಕಿ ಸಿಸ್ಟರ್ ಪ್ರಭಾ ಅಯೋಧ್ಯೆ ರಾಮಮಂದಿರ ಹಾಗೂ ಪ್ರಭು ಶ್ರೀರಾಮನ ಬಗ್ಗೆ ಅವಹೇಳನ ಮಾಡಿದ್ದಾರೆ ಎಂದು ವಿದ್ಯಾರ್ಥಿಗಳು ತಮ್ಮ ಪೋಷಕರ ಬಳಿ ಹೇಳಿಕೊಂಡಿದ್ದರು. ನಂತರ ಪೋಷಕರು ಮತ್ತು ಹಿಂದೂ ಕಾರ್ಯಕರ್ತರು ಶಿಕ್ಷಕಿ ವಿರುದ್ಧ ಆಕ್ರೋಶ ಹೊರಹಾಕಿದ್ದರು.

ಪತಿಗೆ ಥಳಿಸಿ ಮಹಿಳೆ ಮೇಲೆ ಅತ್ಯಾಚಾರ; 6 ಮಂದಿ ಬಂಧನ

ಕೊಪ್ಪಳ: ವಿವಾಹಿತ ಮಹಿಳೆ ಮೇಲೆ ಅತ್ಯಾಚಾರವೆಸಗಿ ಆಕೆಯ ಪತಿಗೆ ಆರು ಮಂದಿ ಥಳಿಸಿರುವ ಆಘಾತಕಾರಿ ಘಟನೆ ಕೊಪ್ಪಳ ಜಿಲ್ಲೆಯ ಗಂಗಾವತಿಯಲ್ಲಿ ನಡೆದಿದ್ದು, ಎಲ್ಲಾ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಫೆಬ್ರವರಿ 8 ರಂದು ಕೊಪ್ಪಳ ಜಿಲ್ಲೆಯ ಗಂಗಾವತಿಯ ಬಸ್ ನಿಲ್ದಾಣ ಬಳಿಯ ಉದ್ಯಾನವನದಲ್ಲಿ ಈ ಘಟನೆ ನಡೆದಿದ್ದು, ಸಂತ್ರಸ್ತ ಮಹಿಳೆ ನೀಡಿದ ದೂರಿನ ಆಧಾರದ ಮೇಲೆ ಆರೋಪಿಗಳನ್ನು ಬಂಧಿಸಲಾಗಿದೆ. ಸಂತ್ರಸ್ತೆ ಮತ್ತು ಆಕೆಯ ಪತಿ ಕೌಟುಂಬಿಕ ವಿಚಾರಕ್ಕೆ ಸಂಬಂಧಿಸಿದಂತೆ ಬಸ್ ನಿಲ್ದಾಣದಲ್ಲಿ ಜಗಳವಾಡುತ್ತಿದ್ದರು ಮತ್ತು ಜಗಳ ತೀವ್ರವಾಗುತ್ತಿದ್ದಂತೆ, ಆರು ಜನ ಮಧ್ಯಪ್ರವೇಶಿಸಿ ಸಂತ್ರಸ್ತೆಯ ಪತಿಗೆ ಥಳಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಆಕೆಯ ಪತಿಯನ್ನು ಥಳಿಸಿದ್ದು, ಆರೋಪಿಗಳಲ್ಲಿ ಒಬ್ಬನಾದ ಲಿಂಗರಾಜ ಮಹಿಳೆಯನ್ನು ಎಳೆದೊಯ್ದು ಆಕೆಯ ಮೇಲೆ ಅತ್ಯಾಚಾರವೆಸಗಿದ್ದಾನೆ ಎಂದು ಗಂಗಾವತಿ ಪೊಲೀಸ್ ಉಪಾಧೀಕ್ಷಕ ಸಿದ್ದಲಿಂಗಪ್ಪಗೌಡ ಪಾಟೀಲ್ ಅವರು ಹೇಳಿದ್ದಾರೆ. “ಅತ್ಯಾಚಾರದ ನಂತರ, ಗ್ಯಾಂಗ್ ಸಂತ್ರಸ್ತೆಯನ್ನು ನಿಂದಿಸಿ ಕಿರುಕುಳ ನೀಡಿದೆ” ಎಂದು ಡಿಸಿಪಿ ತಿಳಿಸಿದ್ದಾರೆ.

ಆರೋಪಿಗಳಾದ ಲಿಂಗರಾಜ, ಮೌಲಾ ಹುಸೇನ್, ಶಿವಕುಮಾರ್ ಸ್ವಾಮಿ, ಪ್ರಶಾಂತ, ಮಹೇಶ್ ಮತ್ತು ಮಾದೇಶ್ ಅವರನ್ನು ಪೊಲೀಸರು ಬಂಧಿಸಿದ್ದಾರೆ ಎಂದು ಅವರು ಹೇಳಿದ್ದಾರೆ.

ಅಗ್ನಿವೀರ ಪರೀಕ್ಷಾಪೂರ್ವ ಉಚಿತ ತರಬೇತಿ: ಫೆ.13 ರಿಂದ 17 ವರೆಗೆ

ಬೆಳಗಾವಿ: ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ವತಿಯಿಂದ ಸ್ಟಡಿ ಸರ್ಕಲ್ ಯೋಜನೆಯಡಿ ಫೆ. 13 ರಿಂದ ಫೆ.17 ವರೆಗೆ ಬೆಳಗ್ಗೆ 10.30 ರಿಂದ ಸಂಜೆ 5 ಗಂಟೆಯವರೆಗೆ ಅಗ್ನಿವೀರ್ ಹುದ್ದೆಗಳಿಗೆ ಪೂರ್ವಭಾವಿ ಪರೀಕ್ಷಾಪೂರ್ವ ಉಚಿತ ತರಬೇತಿ ಕಾರ್ಯಕ್ರಮವನ್ನು ಶೆಟ್ಟಿ ಗಲ್ಲಿಯ ಟಾರ್ಗೆಟ್ ಕೋಚಿಂಗ್ ಸೆಂಟರ್‌ನಲ್ಲಿ ಆಯೋಜಿಸಲಾಗಿದೆ. ತರಬೇತಿ ಉಚಿತವಾಗಿದ್ದು, ಅರ್ಹ ಮತ್ತು ಆಸ್ತಕ ಅಭ್ಯರ್ಥಿಗಳು **https://forms.gle/udXHM-fhpRmQuT5db8** ವೆಬ್‌ಸೈಟ್‌ನಲ್ಲಿ ಹೆಸರನ್ನು ನೋಂದಾಣಿ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಕಚೇರಿಗೆ ಖುದ್ದಾಗಿ ಅಥವಾ ದೂರವಾಣಿ 9108088577, 7975856566 ಸಂಖ್ಯೆಯನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

15ರಂದು ಲೋಕಾಯುಕ್ತ ಜನಸಂಪರ್ಕ ಸಭೆ

ಮಂಗಳೂರು: ಲೋಕಾಯುಕ್ತ ಮಂಗಳೂರು ವಿಭಾಗದ ಅಧಿಕಾರಿಗಳು ಫೆಬ್ರವರಿ 15ರಂದು ಬೆಳಿಗ್ಗೆ 11 ಗಂಟೆಯಿಂದ ಮೂಡಬಿದ್ರೆಯ ತಾಲೂಕು ಕಚೇರಿಯಲ್ಲಿ ಲೋಕಾಯುಕ್ತ ಜನಸಂಪರ್ಕ ಸಭೆಯನ್ನು ಹಮ್ಮಿಕೊಂಡಿದ್ದಾರೆ. ಸರ್ಕಾರಿ ಕಚೇರಿಗಳಲ್ಲಿ ಅಧಿಕೃತ ಕೆಲಸಗಳಲ್ಲಿ ವಿಳಂಬ ಮತ್ತು ಇನ್ನಿತರೆ ತೊಂದರೆ ನೀಡುತ್ತಿರುವ ಸರ್ಕಾರಿ ಅಧಿಕಾರಿ ಅಥವಾ ನೌಕರರ ವಿರುದ್ಧ ಈ ಸಭೆಯಲ್ಲಿ ದೂರು ನೀಡಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಪೊಲೀಸ್ ಅಧೀಕ್ಷಕರ ಕಚೇರಿ:0824–2950997, 9364062517, ಪೊಲೀಸ್ ಉಪಾಧಿಕ್ಷಕರ ಕಚೇರಿ–1: 0824–2453420, 9364062579, ಪೊಲೀಸ್ ಉಪಾಧೀಕ್ಷಕರ ಕಚೇರಿ–2: 0824–2453420. ಪೊಲೀಸ್ ನಿರೀಕ್ಷಕರ ಕಚೇರಿ:0824–2427237 ಸಂಖ್ಯೆಗಳನ್ನು ಸಂಪರ್ಕಿಸುವಂತೆ ಕರ್ನಾಟಕ ಲೋಕಾಯುಕ್ತ ಮಂಗಳೂರು ವಿಭಾಗದ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಫೆ.14 ರಂದು ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆ

ಮಂಗಳೂರು: ಕೇಂದ್ರ ಕಾರ್ಯಕ್ರಮಗಳ ಅನುಗಣ್ಣನದ ಬಗ್ಗೆ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ(ದಿಶಾ) ಸಭೆ ಫೆಬ್ರವರಿ 14ರಂದು ಬೆಳಿಗ್ಗೆ 10.30ಕ್ಕೆ ದ.ಕ ಜಿಲ್ಲಾ ಪಂಚಾಯತ್ ನೇತ್ರಾವತಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಲೋಕಸಭಾ ಸದಸ್ಯ ನಳಿನ್ ಕುಮಾರ್ ಕಟೀಲ್ ಅವರು ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಫೆ.16 ರಂದು ನರಿಕೊಂಬು ಗ್ರಾಮ ಸಭೆ

ಮಂಗಳೂರು: ಬಂಟ್ವಾಳ ತಾಲೂಕು, ನರಿಕೊಂಬು ಗ್ರಾಮ ಪಂಚಾಯತ್ ದ್ವಿತೀಯ ಸುತ್ತಿನ ಗ್ರಾಮ ಸಭೆ ಫೆಬ್ರವರಿ 16ರಂದು ಶುಕ್ರವಾರ ಬೆಳಿಗ್ಗೆ 10.30 ಕ್ಕೆ ನರಿಕೊಂಬು ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆಯಲಿದೆ ಎಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಫೆ.22 ರಂದು ಮುತ್ತೂರು ಗ್ರಾಮ ಸಭೆ

ಮಂಗಳೂರು: ಮಂಗಳೂರು ತಾಲೂಕು ಮುತ್ತೂರು ಗ್ರಾಮ ಪಂಚಾಯತ್ನ 2023–24ನೇ ಸಾಲಿನ ದ್ವಿತೀಯ ಹಂತದ ಗ್ರಾಮ ಸಭೆ ಫೆಬ್ರವರಿ 22ರ ಗುರುವಾರ ಬೆಳಿಗ್ಗೆ 11 ಗಂಟೆಗೆ ಶ್ರೀ ನಾರಾಯಣ ಗುರು ಸಮುದಾಯ ಭವನ ಕೊಳವೂರಿನಲ್ಲಿ ನಡೆಯಲಿದೆ ಎಂದು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಡಲಾಚೆಯ ಪರಿಶೋಧನೆ: ವಿಚಾರ ಸಂಕಿರಣ

ಮಂಗಳೂರು: ಭಾರತ ಸರ್ಕಾರದ ಗಣಿ ಇಲಾಖೆ ಅಧೀನದ ಭಾರತೀಯ ಭೂವೈಜ್ಞಾನಿಕ ಸರ್ವೆ, ಮಂಗಳೂರು ವಿಭಾಗದ ವತಿಯಿಂದ, ಕಡಲಾಚೆಯ ಪರಿಶೋಧನೆ (Offshore Exploration: synergies and opportunties) ಕುರಿತ ವಿಚಾರ ಸಂಕಿರಣ ನಗರದಲ್ಲಿ ಫೆಬ್ರವರಿ 15ರಂದು ಬೆಳಿಗ್ಗೆ 10 ಗಂಟೆಗೆ ನಡೆಯಲಿದೆ. ನಗರದ ಹೋಟೆಲ್ ಓಷಿಯನ್ ಪರ್ಲ್ ಸಭಾಂಗಣದಲ್ಲಿ ನಡೆಯುವ ಕಾರ್ಯಾಗಾರವನ್ನು ಭಾರತ ಸರ್ಕಾರದ ಗಣಿ ಇಲಾಖೆ ಕಾರ್ಯದರ್ಶಿ ವಿ.ಎಲ್. ಕಾಂತಾ ರಾವ್ ಉದ್ಘಾಟಿಸಲಿದ್ದಾರೆ. ಕಾರ್ಯಗಾರದಲ್ಲಿ ವಿವಿಧ ವಿಷಯಗಳ ತಜ್ಞರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಮರಗಳ ಕಟಾವಣೆ ಮಾಹಿತಿ

ಧಾರವಾಡ: ಸಹಾಯಕ ಕಾರ್ಯನಿರ್ವಾಹಕ, ಇಂಜೀನಿಯರ ಲೋಕೊಪಯೋಗಿ ಇಲಾಖೆ ಉಪ ವಿಭಾಗ ಧಾರವಾಡರವರು ಮಂಗಸೂಳಿ–ಲಕ್ಷ್ಮೇಶ್ವರ ರಾಜ್ಯ ಹೆದ್ದಾರಿ ರಸ್ತೆ ಅಭಿವೃದ್ಧಿ ರಸ್ತೆ ಅಗಲೀಕರಣ ಕಾಮಗಾರಿಗೆ ಅಡತಡೆಯಾಗಿರುವ ಮರಗಳ ಕಟಾವಣೆಯ ಅನುಮತಿಗಾಗಿ ವಿನಂತಿಸಿ ಅರಣ್ಯ ಇಲಾಖೆಗೆ ಅರ್ಜಿ ಸಲ್ಲಿಸಿರುತ್ತಾರೆ. ಮರ ಸಂರಕ್ಷಣಾ ಕಾಯ್ದೆ 1976 ರ ಸೆಕ್ಷನ್ 8 (3)(VII) ರಲ್ಲಿ ಅಗತ್ಯ ಪಡಿಸಿರುವಂತೆ, ಈ ಬಗ್ಗೆ ತಕರಾರು ಸಲ್ಲಿಸಬಯಸುವರು ತಮ್ಮ ತಕರಾರನ್ನು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಧಾರವಾಡ ಉಪ ವಿಭಾಗ ಧಾರವಾಡ ಹಾಗೂ ಮರ ಅಧಿಕಾರಿ, ಅರಣ್ಯ ಸಂಕೀರ್ಣ ಕೆ.ಸಿ.ಪಾರ್ಕ ಎದುರು ಧಾರವಾಡ ಇವರ ಕಛೇರಿಯಲ್ಲಿ ಫೆಬ್ರವರಿ 16, 2024 ರಂದು ಬೆಳಿಗ್ಗೆ 11 ಗಂಟೆಗೆ ಸಾರ್ವಜನಿಕ ವಿಚಾರಣೆ ಹಮ್ಮಿಕೋಳ್ಳಲಾಗಿದೆ. ಆದ್ದರಿಂದ ಫೆಬ್ರವರಿ 16, 2024 ರಂದು ಸಾರ್ವಜನಿಕರ ತಂಟೆ ತಕರಾರು ಇದ್ದಲ್ಲಿ, ಖುದ್ದು ಹಾಜರಾಗಿ ಈ ಕಛೇರಿಗೆ ಸಲ್ಲಿಸಲು ತಿಳಿಸಲಾಗಿದೆ ನಂತರ ಬಂದ ತಕರಾರುಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಧಾರವಾಡ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂಗನ್ನು ಹೀಗೆ ಬಳಸಿ ನೋಡಿ

ಇಂಗು ತೆಂಗು ಇದ್ದರೆ ಮಂಗ ಸಹ ಒಳ್ಳೆಯ ಅಡುಗೆ ಮಾಡುತ್ತೆ ಅನ್ನೋಗಾದೆ ಮಾತಿದೆ. ಅಡುಗೆಯಲ್ಲಿ ಇಂಗಿನ ಮಹತ್ವ ಅಂಥದ್ದು. ಇಂಗು ಅಡುಗೆಗೆ ಪರಿಮಳ ಅಷ್ಟೇ ಅಲ್ಲ, ಆರೋಗ್ಯಕ್ಕೂ ಸಹಕಾರಿ. ಪ್ರತಿ ನಿತ್ಯ ಸಾರಿನ ಒಗ್ಗರಣೆಗೆ ಇಂಗು ಹಾಕುವುದರಿಂದ ಹುಳಿ ತೇಗು ಬರುವುದಿಲ್ಲ.

ಆಹಾರ ಚೆನ್ನಾಗಿ ಜೀರ್ಣವಾಗುತ್ತದೆ. ಹುಳಿ ಬರದ ಮಜ್ಜಿಗೆಗೆ ಇಂಗಿನ ಒಗ್ಗರಣೆ ಹಾಕಿ, ಸ್ವಲ್ಪ ಹಸಿ ಶುಂಠಿ ತುರಿ ಹಾಗೂ ಕೊತ್ತಂಬರಿ ಬಳಸಿ ಕುಡಿದರೆ ಹೊಟ್ಟೆ ಉಬ್ಬರ, ಗ್ಯಾಸ್ಟ್ರಿಕ್ ಶಮನವಾಗಿ ದೇಹಕ್ಕೆ ಹಿತವಾಗುತ್ತದೆ.

ಬೇಸಿಗೆಯಲ್ಲಿ ದಣಿವು ತಣಿಸುವ ಬಗೆ ಬಗೆ ಪಾನೀಯ

ಬೇಸಿಗೆ ಶುರುವಾಗಿದೆ. ಬಿಸಿಲ ಧಗೆ ನೆತ್ತಿ ಸುಡುತ್ತಿದೆ. ಬಿಸಿಲಿನ ಝಳಕ್ಕೆ ದೇಹದಲ್ಲಿ ನೀರಿನ ಅಂಶ ಕಡಿಮೆಯಾಗಿ, ದೇಹ ನಿರ್ಜಲೀಕರಣವಾಗುತ್ತದೆ. ನೀರಿನಂಶದ ಜೊತೆಗೆ ಲವಣಾಂಶವೂ ಕಡಿಮೆಯಾಗುತ್ತದೆ. ಇದು ಬೇರೆ ಬೇರೆ ಆರೋಗ್ಯ ಸಮಸ್ಯೆಗಳು ತಲೆದೋರಲು ಕಾರಣವಾಗುತ್ತದೆ.

ಇಂಥ ಸಮಯದಲ್ಲಿ ದೇಹಕ್ಕೆ 'ಸಿ' ವಿಟಮಿನ್ ಅಂಶ ಅಗತ್ಯವಾಗಿ ಬೇಕು. ಇಂಥ ಅಂಶವಿರುವ ತಿನಿಸುಗಳನ್ನು ಸೇವಿಸಬೇಕು. ಅದರಲ್ಲೂ ದ್ರವ ಪದಾರ್ಥಗಳು ದಣಿದ ದೇಹಕ್ಕೆ ಬೇಗ ಶಕ್ತಿ ತುಂಬುತ್ತವೆ. ಅಂಥ ಶಕ್ತಿಯುತ ಪೇಯಗಳ ರೆಸಿಪಿಗಳನ್ನು ಇಲ್ಲಿ ಪರಿಚಯಿಸಿದ್ದಾರೆ ಕೆ.ಬಿ.ಶುಭ. ಈ ಪಾನೀಯಗಳು, ದೇಹದ ಬಳಲಿಕೆ ನೀಗಿಸುವ ಜೊತೆಗೆ, ಆರೋಗ್ಯವನ್ನು ರಕ್ಷಿಸುತ್ತವೆ.

ಮೆಂತ್ಯೆ ಜ್ಯೂಸ್: ಮೆಂತ್ಯೆ ಕಾಳನ್ನು 3–4 ತಾಸು ಅಥವಾ ರಾತ್ರಿ ನೆನಸಿ ಬೆಳಿಗ್ಗೆ ರುಬ್ಬಿ ಅದಕ್ಕೆ ಬೆಲ್ಲ ಬೆರಸಿ ಸೇವಿಸಬಹುದು. ಒಂದು ದೊಡ್ಡ ಲೋಟ ಜ್ಯೂಸ್‌ಗೆ ಒಂದೂವರೆ ಚಮಚ ಮೆಂತ್ಯೆ ಸಾಕು.

ಹೆಸರುಕಾಳು ಜ್ಯೂಸ್: ಹೆಸರು ಕಾಳನ್ನು ನೆನಸಿ ರುಬ್ಬಿ ಸೋಸಿ ಅದಕ್ಕೆ ಬೆಲ್ಲ ಸೇರಿಸಿ ಕುಡಿಯಬಹುದು. ಒಂದು ಲೋಟ ಜ್ಯೂಸ್‌ಗೆ ಒಂದು ಮುಷ್ಠಿ ಕಾಳು ನೆನಸಿ ನುಣ್ಣಗೆ ರುಬ್ಬಬೇಕು. ಇದೇ ರೀತಿ ಹೆಸರು ಬೇಳೆಯ ಜ್ಯೂಸ್ ಅನ್ನು ಮಾಡಿಕೊಳ್ಳಬಹುದು.

ಬಾರ್ಲಿ ನೀರು: ಬಾರ್ಲಿ ಕಾಳು ಅಥವಾ ಪುಡಿ ಎರಡೂ ದೊರೆಯುತ್ತದೆ. ಬಾರ್ಲಿ ಕಾಳಾದರೆ ಕುಕ್ಕರಿನಲ್ಲಿ ಬೇಯಿಸಿಬೇಕಾಗುತ್ತದೆ. ಬಾರ್ಲಿಯ ಕಾಳನ್ನೇ ತರಿತರಿಯಾಗಿ ಪುಡಿ ಮಾಡಿಟ್ಟುಕೊಂಡು ಅದನ್ನು ಒಂದು ಲೋಟ ನೀರಿಗೆ ಒಂದೂವರೆ ಚಮಚ ಪುಡಿ ಸೇರಿಸಿ ಚೆನ್ನಾಗಿ ಕುದಿಸಿ, ಉಪ್ಪು ಅಥವಾ ಬೆಲ್ಲ ಬೆರಿಸಿ ಬಾರ್ಲಿ ನೀರು ಸಿದ್ಧಮಾಡಿಕೊಳ್ಳಬಹುದು. ಸಂಜೆ ಕಾಫಿ/ ಟೀ ಬದಲು ಇದನ್ನು ಬಿಸಿ ಬಿಸಿ ಆಗಿ ಸೇವಿಸಬಹುದು.

ಕೊತ್ತಂಬರಿ ನೀರು: 2 ಲೋಟ ನೀರಿಗೆ ಒಂದೂವರೆ ಚಮಚ ಕೊತ್ತಂಬರಿ ಬೀಜವನ್ನು ಸೇರಿಸಿ ಸ್ವಲ್ಪ ನೀರು ಬತ್ತುವವರೆಗೆ ಚೆನ್ನಾಗಿ ಕುದಿಸಿ. ನೀರನ್ನು ಸೇವಿಸುವುದು ಆರೋಗ್ಯಕ್ಕೆ ಹಿತ.

ರಾಗಿ ಜ್ಯೂಸ್: ರಾಗಿ ಕಾಳನ್ನು ರಾತ್ರಿ ನೆನಸಿ ಬೆಳಗ್ಗೆ ರುಬ್ಬಿ, ಕಾಯಿ ಹಾಲು ತೆಗೆದಂತೆ ಸೋಸಿ ರುಚಿಗೆ ತಕ್ಕಷ್ಟು ಬೆಲ್ಲ ಬೆರೆಸಿ ಸೇವಿಸಬಹುದು. ಇದೇ ರೀತಿ ರಾಗಿ ಹಿಟ್ಟನ್ನು ನೆನಸಿ ಬೆಲ್ಲ ಬೆರಸಿ ಸವಿಯಬಹುದು. ಆದರೆ ಇದು ಹೆಚ್ಚು ರುಚಿ ನೀಡುವುದಿಲ್ಲ. ಒಂದು ಲೋಟ ಜ್ಯೂಸ್‌ಗೆ ಒಂದು ಮುಷ್ಠಿ ರಾಗಿ ನೆನಸಬೇಕಾಗುತ್ತದೆ.

ಮುರುಗಲ ಹುಳಿ/ ಪುನರ್‌ಪುಳಿ ಜ್ಯೂಸ್: ಮುರುಗಲ ಹುಳಿಯನ್ನು ಒಂದೆರಡು ಗಂಟೆ ನೆನಸಿ ಚೆನ್ನಾಗಿ ಹಿಂಡಿ, ಆ ನೀರಿಗೆ ಬೆಲ್ಲ ಅಥವಾ ಕಲ್ಲುಸಕ್ಕರೆ ಬೆರೆಸಿ ಸೇವಿಸಬಹುದು. ಪಿತ್ತ ಶಮನಕಾರಿ, ರಕ್ತ ಶುದ್ಧಿ, ಜೀರ್ಣಕ್ರಿಯೆಗೆ ಸಹಕಾರಿಯಾಗಿರುವ ಮುರುಗಲ ಹುಳಿ ಸಾರನ್ನೂ ಮಾಡಿ ಸವಿಯಬಹುದು. ಮುರುಗಲ ಹುಳಿ ನೆನಸಿದ ನೀರಿಗೆ ಜೀರಿಗೆ, ಸಾಸಿವೆ, ಒಣಮೆಣಸಿನ ತುಪ್ಪದ ಒಗ್ಗರಣೆ ಜೊತೆ ಸಣ್ಣಗೆ ಕತ್ತರಿಸಿದ ಹಸಿ ಈರುಳ್ಳಿ ಹಾಕಿದರೆ ಸಾರು ಸಿದ್ಧ.

ಕಡೆದ ಮಜ್ಜಿಗೆ: ಮೊಸರಿಗಿಂತ ಮಜ್ಜಿಗೆ ದೇಹಕ್ಕೆ ಹಿತ. ಕಡೆದು ಬೆಣ್ಣೆ ತೆಗೆದ ಮಜ್ಜಿಗೆಯನ್ನು ಹಾಗೇ ಸೇವಿಸ ಬಹುದು ಅಥವಾ ಸ್ವಲ್ಪ ಕೊತ್ತಂಬರಿ ಸೊಪ್ಪು, ಒಂದಿಚು ಶುಂಠಿ, ಬೇಕಿದ್ದರೆ ಒಂದು ಹಸಿಮೆಣಸು, ರುಚಿಗೆ ತಕ್ಕಷ್ಟು ಉಪ್ಪು ಮಿಕ್ಸಿ ಮಾಡಿ ಮಜ್ಜಿಗೆಗೆ ಬೆರಸಿ ಸೇವಿಸಬಹುದು. ಮಜ್ಜಿಗೆಗೆ ಇಂಗನ್ನೂ ಬೆರೆಸಿ ಕುಡಿಯಬಹುದು.

ಬೇಲದ ಹಣ್ಣಿನ ಜ್ಯೂಸ್: ಪಿತ್ತಶಮನಕಾರಿಯಾಗಿರುವ ಬೇಲದ ಹಣ್ಣಿಗೆ ಬೆಲ್ಲವನ್ನು ಬೆರೆಸಿ ಹಾಗೇ ಸೇವಿಸಬಹುದು ಅಥವಾ ಜ್ಯೂಸ್ ಮಾಡಿಯೂ ಸೇವಿಸಬಹುದು.

ಸೌತೆಕಾಯಿ ಹಾಗೂ ಪುದೀನ ಜ್ಯೂಸ್: ಒಂದು ಮುಷ್ಠಿ ಪುದೀನ ಸೊಪ್ಪಿನ ಜೊತೆ ಒಂದು ಸಣ್ಣ ಗಾತ್ರದ ಸೌತೆಕಾಯಿಯನ್ನು ಕತ್ತರಿಸಿ, ಒಂದೆರಡು ಮೆಣಸಿನ ಕಾಳು, ಸಕ್ಕರೆಯನ್ನು ಮಿಕ್ಸಿಯಲ್ಲಿ ರುಬ್ಬಿ, (ಅಗತ್ಯವೆನಿಸಿದರೆ ಸೋಸಬಹುದು) ಅದಕ್ಕೆ ರುಚಿಗೆ ತಕ್ಕಷ್ಟು ನಿಂಬೆಹಣ್ಣಿನ ರಸ ಬೆರೆಸಿ, ನೀರಾದ ಜ್ಯೂಸ್ ಮಾಡಿ ಕುಡಿಯಬಹುದು.

ಬೆಲ್ಲ, ನೀರು: ಬಿಸಿಲಿನಿಂದ ಬಂದವರಿಗೆ ಮೊದಲೆಲ್ಲಾ ಒಂದು ಸಣ್ಣ ನೆಲ್ಲಿಕಾಯಿ ಗಾತ್ರದ ಬೆಲ್ಲದ ಜೊತೆ ನೀರನ್ನು ಕೊಡಲಾಗುತ್ತಿತ್ತು. ನೀರು, ಬೆಲ್ಲ ದೇಹಕ್ಕೆ ಶೀಘ್ರವಾಗಿ ಶಕ್ತಿ ನೀಡುತ್ತವೆ. ಅಲ್ಲದೇ ನಿಶ್ಯಕ್ತಿಯನ್ನು ದೂರ ಮಾಡುತ್ತವೆ.

ಎಳನೀರು: ಬೇಸಿಗೆ ಕಾಲದಲ್ಲಿ ಎಳನೀರಿಗೆ ಎಲ್ಲಿಲ್ಲದ ಬೇಡಿಕೆ. ಎಳನೀರನ್ನು ಕಾಲಿ ಹೊಟ್ಟೆಯಲ್ಲಿ ಕುಡಿದರೆ ದೇಹದ ಉಷ್ಣತೆ ಕಡಿಮೆಯಾಗುತ್ತದೆ ಎನ್ನುತ್ತಾರೆ. ಅದೇ ರೀತಿ ಎಳನೀರಿಗೆ ನಿಂಬೆಹಣ್ಣನ್ನು ಬೆರೆಸಿ ಕುಡಿಯುವುದೂ ಇತ್ತೀಚಿನ ದಿನಗಳಲ್ಲಿ ಕಾಣಬಹುದು. ಆದರೆ, ಇದನ್ನು ವೈದ್ಯರ ಮಾರ್ಗದರ್ಶನ ಪಡೆದು ಅಥವಾ ನಿಖರವಾದ ಕಾಯಿಲೆಗೆ ವೈದ್ಯರು ಸೂಚಿಸಿದಾಗ ಮಾತ್ರ ಸೇವಿಸುವುದು ಸೂಕ್ತ.

ಶರಬತ್ತುಗಳು: ಸೊಗದೇಬೇರು, ನಲ್ಲಿಕಾಯಿ ಶರಬತ್ತು, ರೋಸ್ ಶರಬತ್ತುಗಳ ರೆಡಿಮೆಡ್ ರಸಗಳ ಜ್ಯೂಸ್ ಅನ್ನೂ ಮಾಡಿ ಕುಡಿಯಬಹುದು. ಒಂದು ಲೋಟಕ್ಕೆ 1 ರಿಂದ 2 ಚಮಚ ಶರಬತ್ತು ಬೆರೆಸಿ ಜ್ಯೂಸ್ ಮಾಡಿಕೊಳ್ಳ ಬಹುದು.

ಬೇಸಿಗೆಯಲ್ಲಿ ಸೇವಿಸಬೇಕಾದ ಹಣ್ಣು–ತರಕಾರಿಗಳು

* ಹಣ್ಣುಗಳು: ಕಲ್ಲಂಗಡಿ, ಕಿತ್ತಳೆ, ಮೂಸಂಬಿ, ಬೆಣ್ಣೆಹಣ್ಣು, ಕರ್ಬೂಜ, ಬೆರ್ರಿ, ಸೇಬು, ಪಿಯರ್ಸ್, ಅಂಜೂರ, ಸ್ಟ್ರಾಬೆರಿ, ಬಾಳೆಹಣ್ಣು
* ತರಕಾರಿಗಳು: ಸೌತೆಕಾಯಿ, ಬೀನ್ಸ್, ಕ್ಯಾರೆಟ್, ಬೀಟ್‌ರೂಟ್, ಹಸಿರು ಸೊಪ್ಪು, ನಿಂಬೆಹಣ್ಣು, ಜೋಳ, ಸೋರೆಕಾಯಿ, ಕುಂಬಳಕಾಯಿ
* ಇವುಗಳ ಜೊತೆಗೆ ಯೋಗರ್ಟ್, ಸಣ್ಣ ಟೊಮೆಟೊ ಸಲಾಡ್, ಸೌತೆಕಾಯಿಯನ್ನೇ ಹೋಲುವ ಬೇಬಿ ಮರ್ರೊ ತರಕಾರಿಯನ್ನೂ ಬಳಸಬಹುದು.

ತುಂಬೆ ಗಿಡದ ತುಂಬೆಲ್ಲ ತುಂಬಿದೆ ಔಷಧಿಗುಣ

ತುಂಬೆ ಗಿಡ ಮೂರ್ತಿ ಚಿಕ್ಕದಾದರೂ ಕೀರ್ತಿ ದೊಡ್ಡದು ಎಂಬ ಗುಣ ಹೊಂದಿದೆ. ಅಂದರೆ ಅದರಲ್ಲಿ ಅಗಾಧ ಔಷಧಿಗುಣ ಅಡಕವಾಗಿದೆ. ಹಳ್ಳಿಗಳಲ್ಲಿ ಸರ್ವೇಸಾಮಾನ್ಯವಾಗಿ ಇದರ ಪರಿಚಯದ ಜೊತೆಗೆ ಇದರ ಔಷಧಿ ಗುಣಗಳನ್ನು ಕಂಡುಕೊಂಡಿರುತ್ತಾರೆ. ಹಾಗಿದ್ದರೇ ಈ ಸಸ್ಯ ಯಾವ ಯಾವ ರೋಗಕ್ಕೆ ಮದ್ದಾಗಿದೆ ನೋಡೋಣ..

ವಾತಾವರಣದಲ್ಲಿ ಬದಲಾವಣೆ ಆಗುತ್ತಿದ್ದಂತೆ ಪ್ರತಿ ವಯಸ್ಕರಲ್ಲಿ ಜ್ವರ ನೆಗಡಿ ಶುರುವಾಗುತ್ತದೆ. ಅದಕ್ಕೆ ಸುಲಭ ಪರಿಹಾರವಾಗಿ ತುಂಬೆ ಗಿಡದ ಎಲೆಯ ರಸದ ಜೊತೆಗೆ ಕಾಳು ಮೆಣಸಿನ ಬೆರೆಸಿ ಕುಡಿಯುವುದರಿಂದ ಜ್ವರ ಅಥವಾ ನೆಗಡಿ ಶಮನಗೊಳ್ಳುತ್ತದೆ.

ಮೈ ಕೈ ನೋವಿಗೆ ಪರಿಹಾರ ಕೆಲವೊಂದು ಬಾರಿ ತೀರ ದಣಿವಾದಾಗ ಕೈ ಕಾಲುಗಳ ಸಂಧಿಗಳಲ್ಲಿ ನೋವು ಕಾಣಿಸಿಕೊಳ್ಳುತ್ತದೆ. ಒಂದಷ್ಟು ತುಂಬೆ ಗಿಡದ ಕಾಂಡಗಳನ್ನು ನೀರಿನಲ್ಲಿ ಚೆನ್ನಾಗಿ ಕುದಿಸಿದ ನೀರಿನಿಂದ ನೋವು ಇರುವ ಜಾಗಕ್ಕೆ ಬಟ್ಟೆಯಿಂದ ಒತ್ತಿಕೊಳ್ಳುವುದರಿಂದ ಮೈ ಕೈ ನೋವು ನಿಯಂತ್ರಣಕ್ಕೆ ಬರುತ್ತದೆ.

ಕಣ್ಣಿನ ಸಮಸ್ಯೆಗೆ ಪರಿಹಾರ ಕೆಲಸದ ಒತ್ತಡ ಮನಸ್ಸಿಗೆ ಮಾತ್ರವಲ್ಲದೇ ಅದು ದೇಹದ ಮೇಲೂ ಪರಿಣಾಮ ಬೀರುತ್ತದೆ. ಅದರಲ್ಲೂ ಅದರ ಲಕ್ಷಣ ಹೆಚ್ಚಾಗಿ ಕಣ್ಣಿನ ಮೇಲೆ ಬ್ಲಾಕ್ ಸರ್ಕಲ್ ಆಗಿ ಮುಖದ ಸೌಂದರ್ಯ ಕಡೆಸುತ್ತದೆ.

ಅದಕ್ಕೆ ಪರಿಹಾರವಾಗಿ ಹಾಲಿನ ಜೊತೆ ತುಂಬೆ ರಸವನ್ನು ಪ್ರತಿ ನಿತ್ಯ ಹಚ್ಚುವುದರಿಂದ ಕಾಲ ಕ್ರಮೇಣ ಕಪ್ಪು ಕಲೆಗಳು ನಿಯಂತ್ರಣಕ್ಕೆ ಬರುತ್ತದೆ. ಜೀರ್ಣಕ್ರಿಯೆಗೆ ಸಹಾಕಾರಿ ಕೆಲವೊಂದು ಬಾರಿ ತಿಂದ ಊಟ ಜೀರ್ಣವಾಗದೇ ಇರಬಹುದು ಅದು ಆಗಾಗ ವಾಕರಿಗೆ, ಹೊಟ್ಟೆ ನೋವಿಗೆ ಕಾರಣವಾಗಬಹುದು. ಆ ಸಮಯದಲ್ಲಿ ತುಂಬೆ ಎಲೆಯ ಜೊತೆಗೆ ಸ್ವಲ್ಪ ಉಪ್ಪು ಹಾಕಿ ಕುದಿಸಿ ಕುಡಿಯುವುದರಿಂದ ಜೀರ್ಣಕ್ರಿಯೆ ಸುಲಭವಾಗುತ್ತದೆ.

ಜಂತುಹುಳು ಸಮಸ್ಯೆಗೆ ಮದ್ದು ಮಕ್ಕಳಲ್ಲಿ ಜಂತುಹುಳುವಿನ ಸಮಸ್ಯೆ ನಿವಾರಿಸಲು ಇದನ್ನು ಮನೆಮದ್ದಾಗಿ ಬಳಸಬಹುದು. ತುಂಬೆ ಹೂ ಹಾಗೂ ಎಲೆಯನ್ನು ಜಜ್ಜಿ ಅದರ ರಸಕ್ಕೆ 2 ಹನಿ ಜೇನುತುಪ್ಪ ಬೆರೆಸಿ ಕುಡಿಸಿದರೆ ಮಕ್ಕಳಿಗೆ ಹೊಟ್ಟೆ ಹುಳ ಸಂಪೂರ್ಣ ನಶಿಸುತ್ತದೆ.

ಹೃದಯಾಘಾತಕ್ಕೆ ಕಾರಣವಾಗಬಹುದು ನಾವು ಬಳಸುವ ಬೇಕಿಂಗ್ ಸೋಡಾ..!

ಬೇಕಿಂಗ್ ಸೋಡಾ ನಮ್ಮ ಆಹಾರದ ಪ್ರಮುಖ ಭಾಗವಾಗಿದೆ. ಏಕೆಂದರೆ ಇದನ್ನು ಅನೇಕ ವಿಧದ ಕೇಕ್‌ಗಳು, ಬ್ರೆಡ್ ಮತ್ತು ಇತರ ಬೇಕರಿ ಉತ್ಪನ್ನಗಳಲ್ಲಿ, ಹೋಟೆಲ್ ತಿನಿಸುಗಳಲ್ಲಿ ಬಳಸಲಾಗುತ್ತದೆ. ಬೇಕಿಂಗ್ ಸೋಡಾ ಬೆರೆಸುವುದರಿಂದ ಆಹಾರವನ್ನು ನಯಗೊಳಿಸುವುದು ಸುಲಭವಾಗುತ್ತದೆ. ಕೆಲವರು ಸೋಡಾ ಬೆರೆಸಿದ ನೀರನ್ನು ಕುಡಿಯಲು ಇಷ್ಟಪಡುತ್ತಾರೆ.

ಅಡುಗೆ ಸೋಡಾವನ್ನು ಸೀಮಿತ ಪ್ರಮಾಣದಲ್ಲಿ ಸೇವಿಸಿದರೆ ಅದು ಕೆಟ್ಟದ್ದಲ್ಲ. ಆದರೆ ಅದನ್ನು ಅತಿಯಾಗಿ ತಿನ್ನುವುದು ಹಾನಿಕಾರಕ. ಅಡುಗೆ ಸೋಡಾವನ್ನು ಅಧಿಕ ಪ್ರಮಾಣದಲ್ಲಿ ಸೇವನೆ ಮಾಡುವುದರಿಂದ ನಮ್ಮ ದೇಹದ ಮೇಲೆ ಅನೇಕ ರೀತಿಯ ದುಷ್ಪರಿಣಾಮಗಳಾಗುತ್ತವೆ.

ಗ್ಯಾಸ್ಟ್ರಿಕ್: ಹೆಚ್ಚು ಅಡುಗೆ ಸೋಡಾವನ್ನು ತಿನ್ನುವುದರಿಂದ ಹೊಟ್ಟೆಯಲ್ಲಿ ಗ್ಯಾಸ್ ಉಂಟಾಗುವ ಸಾಧ್ಯತೆ ಇರುತ್ತದೆ. ಇದು ವಾಯು ಅಥವಾ ಹೊಟ್ಟೆ ಉಬ್ಬರಿಸುವಿಕೆಗೆ ಕಾರಣವಾಗುತ್ತದೆ. ಸೋಡಾವನ್ನು ಸೇವಿಸಿದಾಗ, ಅದು ರಾಸಾಯನಿಕ ಪ್ರಕ್ರಿಯೆಯ ಅಡಿಯಲ್ಲಿ ಆಮ್ಲದೊಂದಿಗೆ ಬೆರೆಯುತ್ತದೆ. ಹಾಗಾಗಿ ಅಡುಗೆ ಸೋಡಾವನ್ನು ಸೀಮಿತ ಪ್ರಮಾಣದಲ್ಲಿ ಸೇವಿಸಿ.

ಹೃದಯಾಘಾತ: ಅಡುಗೆ ಸೋಡಾದಲ್ಲಿ ಬಹಳಷ್ಟು ಸೋಡಿಯಂ ಕಂಡುಬರುತ್ತದೆ. ಇದು ಆರೋಗ್ಯಕ್ಕೆ ತುಂಬಾ ಹಾನಿಕಾರಕವಾಗಿದೆ. ಈ ವಸ್ತುವಿನ ಕಾರಣದಿಂದಾಗಿ ನಮ್ಮ ಹೃದಯದ ಆರೋಗ್ಯದ ಮೇಲೆ ದುಷ್ಪರಿಣಾಮಗಳಾಗುತ್ತವೆ. ಬೇಕಿಂಗ್ ಸೋಡಾದ ಮಿತಿಮೀರಿದ ಸೇವನೆಯು ಹೃದಯಾಘಾತ ಅಥವಾ ಹೃದಯ ಸ್ತಂಭನಕ್ಕೆ ಕಾರಣವಾಗಬಹುದು. ಹೆಚ್ಚು ಅಡುಗೆ ಸೋಡಾ ತಿನ್ನುವವರು ಹೃದಯ ಸ್ತಂಭನಕ್ಕೆ ತುತ್ತಾದ ಅನೇಕ ಪ್ರಕರಣಗಳಿವೆ. ಅದಕ್ಕಾಗಿಯೇ ಅವುಗಳ ಸೇವನೆಯನ್ನು ಕಡಿಮೆ ಮಾಡುವುದು ಬಹಳ ಮುಖ್ಯ. ಅಡುಗೆ ಸೋಡಾವನ್ನು ಎಷ್ಟು ಪ್ರಮಾಣದಲ್ಲಿ ಸೇವಿಸಬೇಕು? ನಿಮಗೆ ಜೀರ್ಣಕ್ರಿಯೆಯ ಸಮಸ್ಯೆ ಇದ್ದರೆ ಅರ್ಧ ಚಮಚ ಅಡುಗೆ ಸೋಡಾವನ್ನು ಅರ್ಧ ಕಪ್ ನೀರಿನಲ್ಲಿ ಬೆರೆಸಿ ಕುಡಿಯಿರಿ. ವಾರದಲ್ಲಿ 2 ಬಾರಿ ಮಾತ್ರ ಇದನ್ನು ಸೇವನೆ ಮಾಡಿ.

ನಿರ್ಮೂಲನೆಗೆ ದುಬಾರಿ ಔಷಧಿಗಳು ಬೇಡ, ಈ ಗಿಡಮೂಲಿಕೆಗಳು ಸಾಕು!

ಕೊಲೆಸ್ಟ್ರಾಲ್ ಒಂದು ಮೇಣದಂಥ, ಕೊಬ್ಬಿನಂತಹ ಪದಾರ್ಥವಾಗಿದ್ದು, ಇದು ನಮ್ಮ ಯಕೃತ್ತಿನಲ್ಲಿ ಉತ್ಪತ್ತಿಯಾಗುತ್ತದೆ ಮತ್ತು ಕೆಲವು ಆಹಾರಗಳಲ್ಲಿ ಕಂಡುಬರುತ್ತದೆ. ಹಾರ್ಮೋನುಗಳು, ಜೀವಕೋಶ ಪೊರೆಗಳು ಮತ್ತು ಪಿತ್ತರಸ ಆಮ್ಲಗಳ ಉತ್ಪಾದನೆ ಸೇರಿದಂತೆ ದೇಹದ ಸಾಮಾನ್ಯ ಕಾರ್ಯನಿರ್ವಹಣೆಗೆ ಇದು ತುಂಬಾ ಮುಖ್ಯವಾಗಿದೆ.

ಕೊಲೆಸ್ಟ್ರಾಲ್‌ನಲ್ಲಿ ಎರಡು ವಿಧಗಳಿವೆ: ಎಲ್‌ಡಿಎಲ್ (ಕಡಿಮೆ ಸಾಂದ್ರತೆಯ ಲಿಪೊಪ್ರೋಟೀನ್) ಮತ್ತು ಎಚ್‌ಡಿಎಲ್ (ಹೆಚ್ಚಿನ ಸಾಂದ್ರತೆಯ ಲಿಪೊಪ್ರೋಟೀನ್). ಎಲ್ಡಿಎಲ್ ಕೊಲೆಸ್ಟ್ರಾಲ್ ಅನ್ನು ಸಾಮಾನ್ಯವಾಗಿ 'ಕೆಟ್ಟ' ಕೊಲೆಸ್ಟ್ರಾಲ್ ಎಂದು ಕರೆಯಲಾಗುತ್ತದೆ ಏಕೆಂದರೆ ಇದು ಅಪಧಮನಿಗಳ ಗೋಡೆಗಳಲ್ಲಿ ಸಂಗ್ರಹಣೆಯಾಗುತ್ತದೆ, ಅದು ನಂತರ ರಕ್ತದ ಹರಿವನ್ನು ಅಡ್ಡಿಪಡಿಸುತ್ತದೆ.

ಈ ಸಂದರ್ಭದಲ್ಲಿ, ಹೃದಯಾಘಾತ ಮತ್ತು ಪಾರ್ಶ್ವವಾಯು ಅಪಾಯವು ಹೆಚ್ಚಾಗುತ್ತದೆ. ಆದರೆ, ಎಚ್‌ಡಿಎಲ್ ಕೊಲೆಸ್ಟ್ರಾಲ್ ಅನ್ನು ಉತ್ತಮ ಕೊಲೆಸ್ಟ್ರಾಲ್ ಎಂದು ಕರೆಯಲಾಗುತ್ತದೆ ಏಕೆಂದರೆ ಇದು ರಕ್ತಪ್ರವಾಹದಿಂದ ಎಲ್‌ಡಿಎಲ್ ಕೊಲೆಸ್ಟ್ರಾಲ್ ಅನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ. ಅಧಿಕ ಕೊಲೆಸ್ಟ್ರಾಲ್‌ನಿಂದ ಏನಾಗುತ್ತದೆ? ರಕ್ತದಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಮಟ್ಟ ಹೆಚ್ಚಾದಾಗ, ಅದು ಹೈಪರ್ ಕೊಲೆಸ್ಟರಾಲ್ಮಿಯಾ ಎಂಬ ಸ್ಥಿತಿಗೆ ಕಾರಣವಾಗಬಹುದು. ಇದು ಹೃದಯಾಘಾತ ಮತ್ತು ಪಾರ್ಶ್ವವಾಯು ಸೇರಿದಂತೆ ಹೃದ್ರೋಗವನ್ನು ಅಪಾಯವನ್ನು ಹೆಚ್ಚಿಸುತ್ತದೆ. ಅಧಿಕ ಕೊಲೆಸ್ಟರಾಲ್ ಮಟ್ಟಗಳು ಸ್ಯಾಚುರೇಟೆಡ್ ಮತ್ತು ಟ್ರಾನ್ಸ್ ಫ್ಯಾಟಿ ಆಸಿಡ್ ಹೊಂದಿರುವ ಆಹಾರದಿಂದ, ವ್ಯಾಯಾಮದ ಕೊರತೆ, ಧೂಮಪಾನ, ಬೊಜ್ಜು, ಮಧುಮೇಹ ಮುಂತಾದ ಅಂಶಗಳಿಂದ ಉಂಟಾಗುತ್ತದೆ.

ಈ ಆಯುರ್ವೇದ ಗಿಡಮೂಲಿಕೆಗಳು ಕೆಟ್ಟ ಕೊಲೆಸ್ಟ್ರಾಲ್ ಅನ್ನು ನಿಯಂತ್ರಿಸುತ್ತವೆ ಗುಗ್ಗಳ ಗುಗ್ಗಳ ಪ್ರಾಚೀನ ಆಯುರ್ವೇದ ಔಷಧದಲ್ಲಿ ಬಳಸಲಾಗುವ ನೈಸರ್ಗಿಕ ಉತ್ಪನ್ನವಾಗಿದೆ. ಇದರಲ್ಲಿ ಎಂಬ ಸಂಯುಕ್ತವಿದ್ದು ಇದು ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಗುಗ್ಗುಲ್‌ಸ್ಟೆರಾನ್ ದೇಹದಲ್ಲಿ ಲಿಪಿಡ್ ಸಂಶ್ಲೇಷಣೆಯನ್ನು ಹೆಚ್ಚಿಸುತ್ತದೆ, ಇದು ಕೊಬ್ಬಿನ ಮೂಲಕ ಬರುವ ಕೊಲೆಸ್ಟ್ರಾಲ್ ಅನ್ನು ಒಡೆಯಲು ಸಹಾಯ ಮಾಡುತ್ತದೆ.



ಅರ್ಜುನ್ ಮರದ ತೊಗಟೆ ಅರ್ಜುನ ಸಾವಿರಾರು ವರ್ಷಗಳಿಂದ ಆಯುರ್ವೇದ ಔಷಧದಲ್ಲಿ ಬಳಕೆಯಾಗುತ್ತಿರುವ ಒಂದು ಪ್ರಕಾರದ ಮರದ ತೊಗಟೆಯಾಗಿದೆ. ಎಲ್ಡಿಎಲ್ ಕೊಲೆಸ್ಟ್ರಾಲ್ನ ಆಕ್ಸಿಡೀಕರಣವನ್ನು ಪ್ರತಿಬಂಧಿಸುವ ಮೂಲಕ ಎಲ್ಡಿಎಲ್ ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡಲು ಇದು ಸಹಾಯ ಮಾಡುತ್ತದೆ.

ತ್ರಿಫಲ ತ್ರಿಫಲವು ಮೂರು ಹಣ್ಣುಗಳ ಸಂಯೋಜನೆಯಾಗಿದೆ: ಆಮ್ಲಾ, ಹರಿತಕಿ ಮತ್ತು ಬಿಭಿಟಕಿ. ಕರುಳಿನಲ್ಲಿನ ಕೊಲೆಸ್ಟ್ರಾಲ್ ಹೀರಿಕೊಳ್ಳುವಿಕೆಯನ್ನು ಕಡಿಮೆ ಮಾಡುವ ಮೂಲಕ ಎಲ್ಡಿಎಲ್ ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡಲು ಇದು ಸಹಾಯ ಮಾಡುತ್ತದೆ ಎಂದು ಹೇಳಲಾಗುತ್ತದೆ. ಇದು ಉತ್ಕರ್ಷಣ ನಿರೋಧಕ ಗುಣಲಕ್ಷಣಗಳನ್ನು ಹೊಂದಿದೆ ಮಾತು ಇದು ಎಲ್ಡಿಎಲ್ ಕೊಲೆಸ್ಟ್ರಾಲ್ನ ಆಕ್ಸಿಡೀಕರಣವನ್ನು ತಡೆಯಲು ಸಹಾಯ ಮಾಡುತ್ತದೆ.

ಬ್ರಾಹ್ಮಿ ಬ್ರಾಹ್ಮಿಯು ಶತಮಾನಗಳಿಂದ ಆಯುರ್ವೇದ ಔಷಧದಲ್ಲಿ ಬಳಸಲ್ಪಡುವ ಒಂದು ಮೂಲಿಕೆಯಾಗಿದೆ. ಅಪಧಮನಿಗಳಲ್ಲಿನ ಉರಿಯೂತವನ್ನು ಕಡಿಮೆ ಮಾಡುವ ಮೂಲಕ ಎಲ್ಡಿಎಲ್ ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ ಎಂದು ಆಯುರ್ವೇದದಲ್ಲಿ ಹೇಳಲಾಗಿದೆ. ಇದು ಉತ್ಕರ್ಷಣ ನಿರೋಧಕ ಗುಣಲಕ್ಷಣಗಳನ್ನು ಹೊಂದಿದೆ, ಇದು ಎಲ್ಡಿಎಲ್ ಕೊಲೆಸ್ಟ್ರಾಲ್ನ ಆಕ್ಸಿಡೀಕರಣವನ್ನು ತಡೆಯಲು ಸಹಾಯ ಮಾಡುತ್ತದೆ.

ಅರಿಶಿನ ಒಂದು ರೀತಿಯ ಮಸಾಲೆ ಪದಾರ್ಥವಾಗಿದ್ದು, ಇದನ್ನು ಸಾವಿರಾರು ವರ್ಷಗಳಿಂದ ಆಯುರ್ವೇದ ಔಷಧಿಗಳಲ್ಲಿ ಬಳಸಲಾಗುತ್ತದೆ. ದೇಹದಲ್ಲಿನ ಉರಿಯೂತವನ್ನು ಕಡಿಮೆ ಮಾಡುವ ಮೂಲಕ ಎಲ್ಡಿಎಲ್ ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡಲು ಇದು ಸಹಾಯ ಮಾಡುತ್ತದೆ ಎಂದು ಹೇಳಲಾಗುತ್ತದೆ.

(ಹಕ್ಕುತ್ಯಾಗ– ಈ ಲೇಖನದಲ್ಲಿ ನೀಡಲಾಗಿರುವ ಮಾಹಿತಿ ಸಾಮಾನ್ಯ ಜ್ಞಾನ ಹಾಗೂ ಮನೆಮದ್ದು ಮಾಹಿತಿಯನ್ನು ಆಧರಿಸಿದೆ.

ಅಭಿನಂದನಾ ಗ್ರಂಥ ಎನ್ನುವುದು ಕೇವಲ ಒಂದು ಪುಸ್ತಕವಲ್ಲ

ಗೋಕಾಕ ಮಾ 24: ಅಭಿನಂದನಾ ಗ್ರಂಥ ಎನ್ನುವುದು ಕೇವಲ ಒಂದು ಪುಸ್ತಕವಲ್ಲ, ಗ್ರಂಥದಲ್ಲಿ ಚಿತ್ರಿತವಾಗಿರುವ ವ್ಯಕ್ತಿಯನ್ನು ಮುಟ್ಟುವ ಜೊತೆಗೆ ಆ ವ್ಯಕ್ತಿಯ ಸಮಗ್ರ ವ್ಯಕ್ತಿತ್ವವನ್ನು ಅರ್ಥ ಮಾಡಿಕೊಳ್ಳು ವ ಹೊತ್ತಿಗೆಯಾಗಿರುತ್ತದೆ.

ಇಂತಹ ಹೊತ್ತಿಗೆಗೆ ಗೋಕಾಕ ನಾಡಿನ ಹೆಸರಾಂತ ಜಾನಪದ ಸಾಹಿತಿ ಡಾ.ಸಿ.ಕೆ ನಾವಲಗಿ ಅವರು ಸಹ ಸೇರ್ಪಡೆಯಾಗುತ್ತಿರುವುದು ಹೆಮ್ಮೆಯ ಸಂಗತಿ. ಡಾ. ಸಿ.ಕೆ. ನಾವಲಗಿ ಎಂತಲೇ ಪರಿಚಿತರಾಗಿರುವ ಲೇಖಕ ಚೆನ್ನಬಸಪ್ಪ ಕಲ್ಲಪ್ಪ ನಾವಲಗಿ ಅವರು 1956 ಆಗಸ್ಟ್ 1ರಂದು ಬೆಳಗಾವಿ ಜಿಲ್ಲೆಯ ಕಿತ್ತೂರು ತಾಲ್ಲೂಕಿನ ಬಸರಕೋಡ ಗ್ರಾಮದಲ್ಲಿ ಜನಿಸಿದರು. ಕನ್ನಡ ಜಾನಪದ ಸಾಹಿತ್ಯದಲ್ಲಿ ಸ್ನಾತಕೋತ್ತರ ಪದವಿ ಪಡೆದ ಇವರು ಕನ್ನಡ ಪ್ರಾಧ್ಯಾಪಕರಾಗಿ ವೃತ್ತಿ ಆರಂಭಿಸಿ, ಪಾಚಾರ್ಯರಾಗಿ ನಿವೃತ್ತಿ ಹೊಂದಿದ್ದಾರೆ.

ಇವರು ರಚಿಸಿದ ಪ್ರಮುಖ ಕೃತಿಗಳೆಂದರೆ ಜಾನಪದ ಸ್ಪಂದನ, ಬೇಂದ್ರೆಯವರ ಕಾವ್ಯದ ಮೇಲೆ ಜಾನಪದ ಪ್ರಭಾವ, ಗಾದೆಗಳಲ್ಲಿ ಹಾಸ್ಯ, ಶರಣ ವಿಚಾರವಾಹಿನಿ, ವಚನ ಸಾಹಿತ್ಯ ಮತ್ತು ಜಾನಪದ, ದಿಕ್ಸೂಚಿ, ವಚನ ಸಾಹಿತ್ಯದಲ್ಲಿ ಜಾನಪದ ಅಂಶಗಳು, ಗ್ರಾಮೀಣ ಗ್ರಹಿಕೆ, ಕಥನ ಕವನ ಸಂಚಯ, ಜಾನಪದ ಚಿಂತನ, ಜಾನಪದ ಕಥನಗೀತ ಸಂಚಯ, ಶರಣ ಸಂಗಾತ, ಜಾನಪದ ಸಮಾಲೋಕ, ವಿಮರ್ಶನ ಗ್ರಹಿಕೆ, ಗೋಕಾವಿನಾಡಿನ ಹೊನ್ನ ಬೆಳೆ, ವಚನಕಾರ ಜೇಡರದಾಸಿಮಯ್ಯ, ಉತ್ತರ ಕರ್ನಾಟಕದ ಭಜನೆ ಹಾಡುಗಳು, ಸಹೃದಯ, ಬೆಳಗಲಿ ಶರಣ ಕಿರಣ, ಅಮೃತದುಂದುಭಿ, ಸಮೃದ್ಧಿ, ಸುವರ್ಣ ಸಂಪಿಗೆ, ಚಂದ್ರಶೇಖರ ಕಂಬಾರ, ಜನಪದ ತ್ರಿಪದಿಗಳು, ಅಂಬಿರ ಚೌಡಯ್ಯನವರ ವಚನಗಳು ಹಾಗೂ ಶರೀರ ಜಾನಪದ, ಉತ್ತರ ಕರ್ನಾಟಕದ ಕೃಷಿ ಜನಪದ ಸಾಹಿತ್ಯ, ಡಾ.ಬಿ.ಎಸ್. ಗದ್ದಗಿಮಠ, ಡಾ.ಆರ್.ಸಿ. ಹಿರೇಮಠ, ಡಾ.ಎಂ.ಎಸ್. ಸುಂಕಾಪುರ, ಬಸವ ಬೆಳಗು, ಜಂಗಮ ಜಾನಪದ, ನನ್ನೂರು, ರಸದಾಳಿ, ಜನಪದ ರಂಗಭೂಮಿ ಕಲಾವಿದ ಶ್ರೀ ನಿಮಗಯ್ಯಸ್ವಾಮಿ ಪೂಜಾರಿ, ಪ್ರೊ. ಜ್ಯೋತಿ ಹೊಸೂರ, ಆಧುನಿಕ ಕನ್ನಡ ಆತ್ಮಕತೆಗಳು, ಬೆಳಗಾವಿ ಜಿಲ್ಲೆ ಜನಪದ ಕಲಾವಿದರು, ಡಾ. ಬಸವರಾಜ ಮಲಶೆಟ್ಟಿ, ಶರಣ ಕ್ಷೇತ್ರಗಳು, ಜಾನಪದ ಸಂಭ್ರಮ, ಹತ್ತು ಮಂದ್ಯಾಗ ಹಾಡೇನ, ಜಾನಪದ ಸಡಗರ, ಸಾಹಿತ್ಯ ಸಂವಾದ–2, ಸೋಮಲಿಂಗ ಕವಿಯ ಲಾವಣಿಗಳು, ವಚನ ಸಂಪದ, ಶೂನ್ಯ ಸಂಪದ, ಸತ್ಯಾರ್ಥಿ, ಶತಾಯುಷಿ, ಲಾವಣಿ ಸಾಮ್ರಾಟ, ಸೋಲಿಂಗಪ್ಪ ದೊಡವಾಡ, ದೇಸೀ ಸಂಭ್ರಮ, ಸಾಹಿತ್ಯ ಸಂಕೀರ್ಣ, ಕುವೆಂಪು ಕಥನ ಕವನಗಳು, ನಿಜಗುಣ ಶಿವಯೋಗಿ ಮುಂತಾದವು.

ಇವರಿಗೆ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ಅಕ್ಕಮ್ಮ ಗಿರಿಗೌಡ ರುದ್ರಪ್ಪ ದತ್ತಿ ಪ್ರಶಸ್ತಿ, ಸಿರಿಗನ್ನಡ ಗೌರವ ಪ್ರಶಸ್ತಿ, ಡಾ.ಬಿ.ಎಸ್. ಗದ್ದಗಿಮಠ ಗೌರವ ಪ್ರಶಸ್ತಿ, ರಂಗ ಸಂಸ್ಥಾನ ಪ್ರಶಸ್ತಿ ಪುರಸ್ಕಾರ ಸೇರಿದಂತೆ ರಾಜ್ಯ ಮಟ್ಟದ ಅನೇಕ ಪ್ರಶಸ್ತಿ,ಪುರಸ್ಕಾರಗಳು ದೊರೆತಿವೆ. ಒಬ್ಬ ಪ್ರಾಧ್ಯಾಪಕನಾಗಿ ಜೀವನ ಪ್ರಾರಂಭಿಸಿ ಇಂದು ಇಡೀ ರಾಜ್ಯ ಮೆಚ್ಚುವಂತಹ ಸಾಧನೆ ಮಾಡಿ ಸಾಹಿತ್ಯಲೋಕದಲ್ಲಿ ಅತೀ ಎತ್ತರಕ್ಕೆ ಬೆಳೆದಿರುವ ಡಾ.ಸಿ.ಕೆ ನಾವಲಗಿ ಅವರು ಬೆಳಗಾವಿ ಜಿಲ್ಲೆಯಲ್ಲಿ ತನ್ನದೇ ಆದ ಛಾಪು ಮೂಡಿಸಿದ್ದಾರೆ.

ಜಾನಪದ ಸಾಹಿತ್ಯದಲ್ಲಿ ಪಾಂಡಿತ್ಯ ಪಡೆದಿರುವ ಇವರು ಜಾನಪದ ವಿಷಯಕ್ಕೆ ಸಂಬಂಧಿಸಿದಂತೆ 30ಕ್ಕೂ ಹೆಚ್ಚು ಸಂಶೋಧನಾತ್ಮಕ ಗ್ರಂಥಗಳನ್ನು ಬರೆದು ಸಾಹಿತ್ಯ ಲೋಕಕ್ಕೆ ಉಣಬಡಿಸಿದ್ದಾರೆ. ಇವರ ಈ ಸಾಹಿತ್ಯಕ ಸಾಧನೆಗಳನ್ನು ಗುರುತಿಸಿ ಗೋಕಾಕಕಿನ ಸಾಹಿತ್ಯ ಬಳಗವು ಇವರನ್ನು ಗೋಕಾಕ ತಾಲೂಕಿನ 5ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆ ಮಾಡಿದ್ದು ಹೆಮ್ಮೆಯ ಸಂಗತಿ.

ಇವರ ಸಾಹಿತ್ಯ ಸೇವೆಗೆ ಕರ್ನಾಟಕ ಸರಕಾರದ ಜಾನಪದ ತಜ್ಞ, ರಾಜ್ಯ ಮಟ್ಟದ ಅತ್ಯುತ್ತಮ ಪುಸ್ತಕ ಬಹುಮಾನ –ಪ್ರಶಸ್ತಿಗಳು, ಹಲವು ದತ್ತಿ ಪ್ರಶಸ್ತಿಗಳು, ಅತ್ತಿಮಬ್ಬೆ, ಜಾನಪದಸಿರಿ,ಸಾಹಿತ್ಯ ಭೂಷಣ ಮೊದಲಾದ ಹತ್ತಾರು ಪ್ರಶಸ್ತಿಗಳು ಡಾ.ಸಿ.ಕೆ ನಾವಲಗಿ ಅವರಿಗೆ ದೊರೆತಿವೆ. ಕರ್ನಾಟಕ ಜಾನಪದ ಪರಿಷತ್ತಿನ ಬೆಳಗಾವಿ ಜಿಲ್ಲಾ ಘಟಕದ ಅಧ್ಯಕ್ಷರಾಗಿ, ಕರ್ನಾಟಕ ಸರಕಾರದ ಡಾ.ಬೆಟಗೇರಿ ಕೃಷ್ಣಶರ್ಮ ಸ್ಮಾರಕ ಟ್ರಸ್ಟಿನ ಸಂಸ್ಥಾಪಕ ಸದಸ್ಯ ಸೇರಿದಂತೆ ಜಾನಪದ ವಿಷಯಕ್ಕೆ ಸಂಬಂಧಿಸಿದಂತೆ ಅನೇಕ ಸಂಸ್ಥೆಗಳಿಗೆ ಅಧ್ಯಕ್ಷರಾಗಿ, ಸಂಪಾದಕರಾಗಿ ಸೇವೆ ಸಲ್ಲಿಸಿದ್ದಾರೆ.

ಬೆಳಗಾವಿ ಜಿಲ್ಲೆಯ, ರಾಜ್ಯದ ಹಲವಾರು ಯುವ ಸಾಹಿತಿಗಳು ರಚಿಸಿದ ಗ್ರಂಥಗಳಿಗ ಮುನ್ನುಡಿಗಳನ್ನು ಬರೆದು ಯುವ ಸಾಹಿತಿಗಳನ್ನು ಪ್ರೋತ್ಸಾಹಿಸುವ ಮೂಲಕ ಸಾಹಿತ್ಯದ ತೇರನ್ನು ಎಳೆಯಲು ಸಜ್ಜಾಗಿರುವ ಯುವಕರನ್ನು ಸರಿಯಾದ ಮಾರ್ಗದರ್ಶನ ಮಾಡಿ ಅವರನ್ನು ಬೆಳೆಸುವ ಕಾರ್ಯವನ್ನು ಡಾ.ಸಿ.ಕೆ.ನಾವಲಗಿ ಅವರು ಮಾಡುತ್ತಿರುವುದು ಇತರ ದೈತ್ಯ ಸಾಹಿತಿಗಳಿಗೆ ಮಾದರಿಯಾಗಿದೆ. ಕನ್ನಡ ಜನಪದ ಸಾಹಿತ್ಯ– ಸಂಸ್ಕೃತಿ – ಅಧ್ಯಯನ, ಬರವಣಿಗೆಯ ಪ್ರವೃತ್ತಿಯನ್ನು ನಿವೃತ್ತಿ ನಂತರವೂ ಮುಂದೆವರಸಿರುವುದು ಸಿ.ಕೆ.ನಾವಲಗಿ ಅವರ ನಿರಂತರ ದುಡಿಮೆಯ ಗುಣಗ್ರಾಹಿ ವ್ಯಕ್ತಿತ್ವದ ಕನ್ನಡಿ ಎಂದರೆ ತಪ್ಪಾಗಲಿಕ್ಕಿಲ್ಲ. ಇವರ ಈ ಮಹಾನ್ ಸಾಹಿತ್ಯ – ಸಾಧನೆಯನ್ನು ಗುರುತಿಸಿ ನಗರದ ಶೂನ್ಯ ಸಂಪಾದನ ಮಠದ ಪೀಠಾಧಿಪತಿ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳವರ ನೇತೃತ್ವದಲ್ಲಿ ಅವರ ನೂರಾರು ಅಭಿಮಾನಿಗಳು ಷಷ್ಟಪೂರ್ತಿ ಅಭಿನಂದನ ಸಮಾರಂಭವನ್ನು ಬರುವ ಮಾರ್ಚ್ 26 ರವಿವಾರದಂದು ಹಮ್ಮಿಕೊಂಡು "ಎಸಳು ಯಾಲಕ್ಕಿ ಗೊನಿ"ಎಂಬ ಅಭಿನಂದನ ಗ್ರಂಥವನ್ನು ಸರ್ಮಪಿಸಿ ನಗರದ ನಾಗರಿಕರು ಡಾ.ಸಿ.ಕೆ ನಾವಲಗಿ ಅವರನ್ನು ಸತ್ಕರಿಸಿ ಗೌರವಿಸಲಿದ್ದಾರೆ. ಈ ಶುಭ ಸಂದರ್ಭದಲ್ಲಿ ಇವರ ಸಾಹಿತ್ಯ ಸೇವೆ ಹೀಗೆಯೇ ಮುಂದೆವರೆದು ಸಾಹಿತ್ಯ ಲೋಕಕ್ಕೆ ಇವರಿಂದ ಇನ್ನಷ್ಟು, ಮತ್ತಷ್ಟು ಮೌಲಿಕ ಗ್ರಂಥಗಳು ಹೊರಬರಲಿ ಎಂದು ಹಾರೈಸೋಣ.

ಲೇಖನ: ಸಾದಿಕ ಎಂ ಹಲ್ಯಾಳ

ಯಡೆಹಳ್ಳಿಯಲ್ಲಿ ಸಂವಿಧಾನ ಜಾಗೃತಿ ಜಾಥಾಕ್ಕೆ ಅದ್ದೂರಿ ಸ್ವಾಗತ

ಯಡೆಹಳ್ಳಿಯಲ್ಲಿ ಸಂವಿಧಾನ ಜಾಗೃತಿ ಜಾಥಾಕ್ಕೆ ಅದ್ದೂರಿ ಸ್ವಾಗತ

ಶಿವಮೊಗ್ಗ: ಸಾಗರ ತಾಲ್ಲೂಕಿನ ಯಡೆಹಳ್ಳಿ ಗ್ರಾಮ ಪಂಚಾಯಿತಿ ವತಿಯಿಂದ ಸಂವಿಧಾನ ಜಾಗೃತಿ ಜಾಥಾವನ್ನು ಅದ್ದೂರಿಯಾಗಿ ಬರಮಾಡಿಕೊಳ್ಳಲಾಯಿತು. ಹೊಂಬುಜ ಹೋಟೆಲ್ ವೃತ್ತದಿಂದ ಗ್ರಾಮಪಂಚಾಯಿತಿವರೆಗೆ ಜಾಥಾ ಸಾಗಿ ಬಂದಿತು. ಗ್ರಾಮ ಪಂಚಾಯಿತಿ ಅಧ್ಯಕ್ಷೆ ರೇಣುಕಾ ಅಧ್ಯಕ್ಷತೆ ವಹಿಸಿದ್ದರು. ಸರ್ಕಾರಿ ಕಾಲೇಜಿನ ಪ್ರಾಂಶುಪಾಲರಾದ ಚಂದ್ರಶೇಖರ್ ಉಪನ್ಯಾಸ ನೀಡಿದರು. ಪಿಡಿಓ ಸುರೇಶ್ ನಿರೂಪಿಸಿದರು. ಗ್ರಾ.ಪಂ ಉಪಾಧ್ಯಕ್ಷರು ಮತ್ತು ಸದಸ್ಯರು, ಸಾಗರ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು, ಶಿಕ್ಷಕರು, ವಿದ್ಯಾರ್ಥಿಗಳು, ಸಾರ್ವಜನಿಕರು ಹಾಜರಿದ್ದರು.

ಮೂಲಭೂತ ಸೌಕರ್ಯದೊಂದಿಗೆ ವಿದ್ಯಾರ್ಥಿಗಳ ಆರೋಗ್ಯ ಕಾಪಾಡುವುದು ಅತ್ಯಗತ್ಯ: ಸ್ನೇಹಲ್ ಸುಧಾಕರ್ ಲೋಖಂಡೆ

ಶಿವಮೊಗ್ಗ: ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯಗಳನ್ನು ನೀಡುವುದರ ಜೊತೆಗೆ ಅವರ ಆರೋಗ್ಯ ಕಾಪಾಡುವುದು ಅತಿ ಅವಶ್ಯಕವಾಗಿದೆ ಎಂದು ಜಿ.ಪಂ. ಸಿಇಓ ಸ್ನೇಹಲ್ ಸುಧಾಕರ ಲೋಖಂಡೆ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಇಂದು ನಗರದ ಡಾ.ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳ ಮೇಲ್ವಿಚಾಕರು ಮತ್ತು ಅಡುಗೆ ಸಿಬ್ಬಂದಿಗಳಿಗೆ ಹಾಗೂ ವಸತಿ ಶಾಲೆಗಳ ಪ್ರಾಂಶುಪಾಲರಿಗೆ ಏರ್ಪಡಿಸಲಾಗಿದ್ದ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಾಸ್ಟೆಲ್ ವಿದ್ಯಾರ್ಥಿಗಳು ತಂದೆ ತಾಯಿಗಳನ್ನು ಬಿಟ್ಟು ವಿದ್ಯಾರ್ಥಿನಿಲಯದ ಮೇಲ್ವಿಚಾರಕರು ಮತ್ತು ಅಲ್ಲಿನ ಸಿಬ್ಬಂದಿಗಳ ಮೇಲೆ ನಂಬಿಕೆ ಇಟ್ಟುಕೊಂಡು ಬಂದಿರುತ್ತಾರೆ. ಗ್ರಾಮೀಣ ಭಾಗದಲ್ಲಿ ಅವಕಾಶಗಳ ಕೊರತೆ ಮತ್ತು ಬಡತನದ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ವಿದ್ಯಾರ್ಥಿ ನಿಲಯಗಳಿಗೆ ಆಗಮಿಸುತ್ತಾರೆ. ಆದ್ದರಿಂದ ಮೇಲ್ವಿಚಾರಕರು ಅವರನ್ನು ಪ್ರೀತಿ ಮತ್ತು ಕಾಳಜಿ ಯಿಂದ ನೋಡಿಕೊಳ್ಳಬೇಕು. ಆಹಾರ ತಯಾರಿಯಲ್ಲಿ ಸ್ವಚ್ಛತೆ, ಗುಣಮಟ್ಟ ಕಾಪಾಡಿಕೊಂಡು ಬರಬೇಕು.

ಅಡುಗೆಯ ಸಿಬ್ಬಂದಿಗಳು ಮತ್ತು ಮೇಲ್ವಿಚಾರಕರು ನಡುವೆ ಹೊಂದಾಣಿಕೆ ಅಗತ್ಯವಾಗಿದ್ದು ಹಾಸ್ಟೆಲ್ ಗಳಲ್ಲಿ ಯಾವುದೇ ಸಮಸ್ಯೆಗಳು ನಿರ್ಮಾಣವಾಗದಂತೆ ಎಚ್ಚರ ವಹಿಸಬೇಕು. ಹಾಗೂ ವಿದ್ಯಾರ್ಥಿಗಳ ಆರೋಗ್ಯಕ್ಕೆ ಸಂಬಂಧಿಸಿದ ಸಮಸ್ಯೆಗಳು, ವ್ಯತ್ಯಾಸಗಳು ಕಂಡು ಬಂದಲ್ಲಿ ಸೂಕ್ತ ಚಿಕಿತ್ಸೆ ಕುರಿತು ಗಮನ ನೀಡುವುದು ನಿಮ್ಮ ಜವಬ್ದಾರಿ ಆಗಿದೆ ಎಂದು ಸೂಚಿಸಿದರು.

ಹಾಸ್ಟೆಲ್ ನಲ್ಲಿ ಸಿಬ್ಬಂದಿಗಳು ವಿದ್ಯಾರ್ಥಿಗಳನ್ನು ತಮ್ಮ ಮಕ್ಕಳಂತೆ ಕಾಣಬೇಕು. ಅಡುಗೆ ಸಿಬ್ಬಂದಿಗಳು ಅತಿ ಜಾಗರೂಕತೆಯಿಂದ ತಮ್ಮ ಕಾರ್ಯವನ್ನು ನಿರ್ವಹಿಸಬೇಕು. ಇಲಾಖೆಗೆ, ವಿದ್ಯಾರ್ಥಿಗಳಿಗೆ ಯಾವುದೇ ಸಮಸ್ಯೆಗಳು ಆಗದಂತೆ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಿ ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಆಹಾರ ನಿರೀಕ್ಷಕರದ ಸೋಮೇಶ್ವರ್ ವಿದ್ಯಾರ್ಥಿ ನಿಲಯಗಳಲ್ಲಿ ಆಹಾರ ಸಂರಕ್ಷಣೆ, ದಾಸ್ತಾನು ಕೊಠಡಿಯ ಕುರಿತು ಮಾಹಿತಿಯನ್ನು ನೀಡಿದರು.

ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮಲ್ಲೇಶಪ್ಪ, ಎಲ್ಲಾ ತಾಲೂಕಿನ ಸಹಾಯಕ ನಿರ್ದೇಶಕರುಗಳು, ಮೊರಾರ್ಜಿ ವಸತಿ ಶಾಲೆಗಳ ಪ್ರಾಂಶುಪಾರುಗಳು, ಅಧಿಕಾರಿಗಳು, ಸಿಬ್ಬಂದಿಗಳು ಅಡುಗೆ ಸಹಾಯಕರು ಪಾಲ್ಗೊಂಡಿದ್ದರು.

“ಓದೋಣ ಬನ್ನಿ ನಮ್ಮ ಸಂವಿಧಾನ”

GPS Map Camera

ಬೆಳಗಾವಿ: ಗಣರಾಜ್ಯೋತ್ಸವದ ದಿನದಂದು ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಮಾನ್ಯ ಶ್ರೀ ಸತೀಶ ಜಾರಕಿಹೊಳಿ ರವರಿಂದ ಚಾಲನೆ ಗೊಂಡ ಸ್ಥಬ್ದಚಿತ್ರದ ಮೆರವಣಿಗೆಯು ಜಿಲ್ಲಾದ್ಯಾಂತ ಎರಡು ಮಾರ್ಗದಲ್ಲಿ ಸ್ಥಬ್ದ ಚಿತ್ರಗಳ ಮೆರವಣಿಗೆಯು ಸಂಚರಿಸುತ್ತಿದೆ.

ದಿನಾಂಕ: 12/02/2024 ರಂದು ಮೊದಲ ಮಾರ್ಗದರಥವು ಚಿಕ್ಕೋಡಿ ತಾಲೂಕಿನ ಜೋಡಕುರುಳಿ, ಕೇರೂರ, ಕಾಡಾಪೂರ, ಅಂಕಲಿ, ಕಲ್ಲೋಳ, ಮಾಂಜರಿ, ಇಂಗಳಿ, ಯಡೂರ, ಚಂದೂರ ಹಾಗೂ ಕಾಗವಾಡತಾಲೂಕಿನ ಜುಗುಳ ಮತ್ತು ಶಿರಗುಪ್ಪಿಗ್ರಾಮ ಪಂಚಾಯತಿ ಮೂಲಕ ಸಂಚರಿಸಿ ದಿನಾಂಕ: 13/02/2024 ರಂದು ಕಾಗವಾಡ ತಾಲೂಕಿನ ಕಾಗವಾಡ, ಶೇಡಬಾಳ, ಉಗಾರ ಬಿ.ಕೆ, ಕುಸನಾಳ, ಉಗಾರಖುರ್ದ, ಐನಾಪೂರ, ಕೃಷ್ಣಾ ಕಿತ್ತೂರ, ಮೋಳೆ, ಮಂಗಸೂಳಿ, ಕೆಂಪವಾಡ ಮತ್ತು ಅಥಣಿ ತಾಲೂಕಿನ ಮುರಗುಂಡಿ ಗ್ರಾಮ ಪಂಚಾಯತಿಗಳಿಗೆ ತೆರಳಲಿದೆ.

ಅದೇರೀತಿಯಾಗಿಎರಡನೇ ಮಾರ್ಗದರಥವು ದಿನಾಂಕ: 12/02/2024 ರಂದು ಬೈಲಹೊಂಗಲ ತಾಲೂಕಿನ ಸಂಪಗಾಂವ, ಬಾವಿಹಾಳ, ಹನ್ನೀಕೇರಿ, ಮರಿಕಟ್ಟಿ, ತಿಗಡಿ, ಚಿಕ್ಕಬಾಗೇವಾಡಿ, ಎಮ್.ನಾಗಲೂರ, ಹೊಳಿ ಹುಸೂರ, ನೇಗಿನಾಳ ಮತ್ತುದೇವಲಾಪೂರಗ್ರಾಮ ಪಂಚಾಯತಿಗಳ ಮೂಲಕ ಸಂಚರಿಸಿ ದಿನಾಂಕ: 13/02/2024 ರಂದುಬೈಲಹೊಂಗಲ ತಾಲೂಕಿನ ಬೈಲಹೊಂಗಲ, ಅಮಟೂರು, ಅನಿಗೋಳ, ವಕ್ಕುಂದ, ಕೆಂಗನೂರ, ಸಂಗೊಳ್ಳಿ, ಎಚ್.ನಾಗಲಾಪೂರ ಮತ್ತು ಪಟ್ಟಿಹಾಳ ಕೆ.ಬಿಗ್ರಾಮ ಪಂಚಾಯತಿಗಳಿಗೆ ತೆರಳಲಿದೆ.

ಸಂವಿಧಾನದ ಮೌಲ್ಯ ಮತ್ತು ಆಶಯಗಳನ್ನು ಸಾರ್ವಜನಿಕರಲ್ಲಿಅರಿವು ಮೂಡಿಸುವಉದ್ದೇಶದಿಂದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮತ್ತು ಸಮಾಜ ಕಲ್ಯಾಣ ಇಲಾಖೆ ಬೆಳಗಾವಿ ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲೆಯ ಎಲ್ಲಗ್ರಾಮ ಪಂಚಾಯತಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಸ್ಥಬ್ದ ಚಿತ್ರಗಳನ್ನೊಳಗೊಂಡ ವಿಶೇಷ ರಥಗಳೆರೆಡು ಏಕ ಕಾಲಕ್ಕೆ ಎರಡು ಮಾರ್ಗದಲ್ಲಿ ಸಂಚರಿಸುವದರ ಮೂಲಕ ಸಂವಿಧಾನಜಾಗೃತಿಜಾಥಹಮ್ಮಿಕೊಳ್ಳಲಾಗಿದ್ದು, ಅಧಿಕ ಸಂಖ್ಯೆಯಲ್ಲಿ ಸಾರ್ವಜನಿಕರು, ಸ್ವ-ಸಹಾಚು ಸಂಘಗಳು, ಜನಪ್ರತಿನಿಧಿಗಳು, ವಿದ್ಯಾರ್ಥಿಗಳು ಭಾಗವಹಿಸಿ ಸಂವಿಧಾನ ಜಾಗೃತಿರಥವನ್ನು ಯಶಸ್ವಿಗೊಳಿಸಿ.

ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ವಾರ್ಷಿಕ ಸಭೆ; ಶಿಕ್ಷಕರ ಬೇಡಿಕೆ ಈಡೇರಿಸಲು ಸದಾ ಬದ್ಧ

ಬೆಳಗಾವಿ: ಹಳೆ ಪಿಂಚಣಿ ಅನುಷ್ಠಾನ, ಅನುದಾನಿತ ಶಾಲೆಗಳಲ್ಲಿ ಖಾಲಿ ಹುದ್ದೆ ಭರ್ತಿ, ಬಡ್ತಿಯಲ್ಲಾದ ದೋಷ ಸರಿಪಡಿಸುವದು ಸೇರಿದಂತೆ ಶಿಕ್ಷಕರ ಸರ್ವ ಸಮಸ್ಯೆಗಳನ್ನು ಪರಿಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ವಾಯುವ್ಯ ಪದವೀಧರ ಕ್ಷೇತ್ರದ ವಿಧಾನ ಪರಿಷತ್ ಸದಸ್ಯ ಹಣುಮಂತ ನಿರಾಣಿ ದಿ.12ರಂದು ಬೆಳಗಾವಿಯಲ್ಲಿ ಜರುಗಿದ ಬೆಳಗಾವಿ ಜಿಲ್ಲಾ ಘಟಕದ ಪ್ರೌಢಶಾಲಾ ಸಹಶಿಕ್ಷಕರ ಸಂಘದ ವಾರ್ಷಿಕ ಸಭೆ ಉದ್ಘಾಟಿಸಿ ಮಾತನಾಡಿದರು.

ಅತಿಥಿಗಳಾಗಿ ಆಗಮಿಸಿದ್ದ ಬೆಳಗಾವಿ ಉತ್ತರ ಮತ ಕ್ಷೇತ್ರದ ಶಾಸಕ ರಾಜು ಶೇಠ ಮಾತನಾಡಿ ಪ್ರಮುಖವಾಗಿ ಶಾಲೆಗಳ ಮೂಲಭೂತ ಸೌಕರ್ಯಗಳನ್ನು ಸರಿಪಡಿಸುವುದರ ಜೊತೆಗೆ ಬದಲಾಗುತ್ತಿರುವ ಪದ್ಧತಿಗಳಿಗೆ ಅನುಗುಣವಾಗಿ ಶಾಲೆಗಳಿಗೆ ಆಧುನಿಕ ವ್ಯವಸ್ಥೆಗಳ ಸ್ಪರ್ಶ ನೀಡಲು ಶ್ರಮಿಸುತ್ತಿರುವುದಾಗಿ ಹೇಳಿದ ಅವರು ತನ್ನ ಮೊದಲ ಆದ್ಯತೆ ಶಿಕ್ಷಣ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಘಟಕದ ಅಧ್ಯಕ್ಷ ಎಸ್‌ಎಂ ಪಾಟೀಲ ಮಾತನಾಡಿ ಸಂಘ ಶಿಕ್ಷಕರ ಬೇಕು ಬೇಡಿಕೆಗಳನ್ನು ಈಡೇರಿಸಲು ಶಕ್ತಿ ಒದಗಿಸುವದರ ಜೊತೆಗೆ ಎಲ್ಲಾ ಹಂತಗಳಲ್ಲೂ ಶಿಕ್ಷಣದ ಗುಣಮಟ್ಟ ಮತ್ತು ವ್ಯವಸ್ಥೆಗಳ ಉನ್ನತೀಕರಣಕ್ಕಾಗಿ ಶ್ರಮಿಸುತ್ತಿದೆ ಎಂದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ರಾಮು ಗುಗವಾಡ ಮಾತನಾಡಿ ಪದವೀಧರ ಮತ್ತು ಶಿಕ್ಷಕರ ಮತಕ್ಷೇತ್ರಗಳ ಜನಪ್ರತಿನಿಧಿಗಳು ಶಿಕ್ಷಣ, ಮತ್ತು ಶಿಕ್ಷಕರ ಅಶೋತ್ತರಗಳಿಗೆ ಸ್ಪಂದಿಸುತ್ತಿದ್ದಾರೆ ಅದೇ ರೀತಿ ಅತೀ ಅವಶ್ಯಕವಾದ ಹಳೆ ಪಿಂಚಣಿ ವ್ಯವಸ್ಥೆ ಜಾರಿ ಮತ್ತು ಖಾಲಿ ಹುದ್ದೆಗಳ ಭರ್ತಿಯತ್ತ ವಿಶೇಷ ಪ್ರಯತ್ನ ಮಾಡಬೇಕು ಎಂದು ಅಧಿಕಾರಿಗಳಿಗೆ ಮತ್ತು ಜನಪ್ರತಿನಿಧಿಗಳಿಗೆ ಮನವಿ ಮಾಡಿಕೊಂಡರು. ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಬೆಳಗಾವಿಯ ಉಪ ನಿರ್ದೇಶಕ ಮೋಹನಕುಮಾರ ಹಂಚಾಟಿ, ಬಿಇಓಗಳಾದ ಎಸ್ ಪಿ ದಾಸಪ್ಪನವರ, ಮೋಹನ ದಂಡಿನ, ಸಂಘದ ಸಂಘಟನಾ ಕಾರ್ಯದರ್ಶಿ ತುಕಾರಾಂ ಬಾಗೆನ್ನವರ, ಉಪಾಧ್ಯಕ್ಷ ಶಿವಾನಂದ ಮಳಗಲಿ, ಎಂ ಎಸ್ ತಲ್ಲೂರ, ಎಲ್‌ಎಸ್ ಬಹದ್ದೂರಿ, ಬಿಎಸ್ ಗಾಣಿಗೇರ, ಬಿ ಆರ್ ಸಿ ಎಂ.ಎಸ್. ಮೇದಾರ, ಪರಶುರಾಮ ಪಾಂಡವ ಸೇರಿದಂತೆ ಜಿಲ್ಲಾ ಮತ್ತು ತಾಲೂಕ ಘಟಕಗಳ ಸರ್ವ ಪದಾಧಿಕಾರಿಗಳು ಉಪಸ್ಥಿತರಿದ್ದರು ಕಾರ್ಯಕ್ರಮದ ಆರಂಭದಲ್ಲಿ ಕಾರ್ಯದರ್ಶಿ ಅಶೋಕ ಖೋತ ಸ್ವಾಗತಿಸಿದರು. ಸುಮಿತ್ರಾ ಕರವಿನಕೊಪ್ಪ ನಿರೂಪಿಸಿದರು. ಶಿವಾನಂದ ತಲ್ಲೂರ ನಿರ್ವಹಿಸಿದರು. ಕೊನೆಯಲ್ಲಿ ವೀರೇಶ ಗಣಾಚಾರಿ ವಂದಿಸಿದರು.

ಯುವಕ ಕಾಣೆ; ಪತ್ತೆಗೆ ಮನವಿ

ಬಳ್ಳಾರಿ: ಸಂಡೂರು ತಾಲ್ಲೂಕಿನ ಚೋರನೂರು ಪೊಲೀಸ್ ಠಾಣೆ ವ್ಯಾಪ್ತಿಯ ಯರ್ರಯ್ಯನಹಳ್ಳಿ ಗ್ರಾಮದ ಹನುಮಂತಪ್ಪ ಎನ್ನುವ 23 ವರ್ಷದ ಯುವಕ ಜ.20ರಂದು ಕಾಣೆಯಾಗಿದ್ದು,

ಪತ್ತೆಗೆ ಸಹಕರಿಸಬೇಕೆಂದು ಚೋರನೂರು ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ಮನವಿ ಮಾಡಿದ್ದಾರೆ.

ಕಾಣೆಯಾದ ಯುವಕನ ಚಹರೆ: ಎತ್ತರ 5.3 ಅಡಿ, ದುಂಡು ಮುಖ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಉಳ್ಳವನಾಗಿದ್ದು, ಕನ್ನಡ, ತೆಲುಗು ಭಾಷೆ ಮಾತನಾಡುತ್ತಾನೆ.

ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ಕಪ್ಪು ತುಂಬು ತೋಳಿನ ಟಿ-ಶರ್ಟ, ಕಪ್ಪು ಬಣ್ಣದ ನೈಟ್ ಪ್ಯಾಂಟ್ ಧರಿಸಿರುತ್ತಾನೆ.

ಮೇಲ್ಕಂಡ ಚಹರೆಯುಳ್ಳ ಯುವಕನ ಬಗ್ಗೆ ಮಾಹಿತಿ ಸಿಕ್ಕಲ್ಲಿ ಚೋರನೂರು ಪೊಲೀಸ್ ಠಾಣೆಯ ಪಿ.ಎಸ್.ಐ ಮೊ:9480803063 ಸಂಡೂರು ವೃತ್ತದ ಪಿ.ಎಸ್.ಐ ದೂ:08395260100, ಬಳ್ಳಾರಿ ಎಸ್.ಪಿ ದೂ:08392258400, ತೋರಣಗಲ್ಲು ಡಿ.ಎಸ್.ಪಿ ದೂ:08391220326, ಬಳ್ಳಾರಿ ಕಂಟ್ರೋಲ್ ರೂಂ ದೂ:08392279100ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರೇಕ್ಷಕರನ್ನು ರಂಜಿಸಿದ “ನಾಯಿ ಕಳೆದಿದೆ” ನಾಟಕ

ಬೆಳಗಾವಿ: ಇದೇ ದಿ. 11 ರಂದು ತಿಲಕಚೌಕ ಹತ್ತಿರವಿರುವ ಲೋಕಮಾನ್ಯ ರಂಗಮಂದಿರದಲ್ಲಿ ರಂಗಸಂಪದ ತಂಡದವರು ರಾಜೇಂದ್ರ ಕಾರಂತ ರಚನೆಯ ಡಾ. ಅರವಿಂದ ಕುಲಕರ್ಣಿ ನಿರ್ದೇಶನದ 'ನಾಯಿ ಕಳೆದಿದೆ' ಸಾಮಾಜಿಕ ನಾಟಕ ಪ್ರದರ್ಶನಗೊಂಡಿತು.

ಒಂದು ನಾಯಿಯ ಸುತ್ತ ಹೆಣೆಯಲಾಗಿರುವ ಈ ನಾಟಕ ಪ್ರೇಕ್ಷಕರ ಮನ ಗೆಲ್ಲುವಲ್ಲಿ ಯಶಸ್ವಿಯಾಯಿತು. ಸೊಸೆಗೆ ನಾಯಿಯೆಂದರೆ ಪಂಚಪ್ರಾಣ. ಅತ್ತೆ- ಮಾವನಿಗೆ ಅದೇ ನಾಯಿಯ ಕಂಡರೆ ತಿರಸ್ಕಾರ ಭಾವನೆ. ಹೀಗೆ ಕಥೆ ಮುಂದೆ ಸಾಗುತ್ತದೆ. ಪ್ರೇಕ್ಷಕರನ್ನ ಸೆರೆಹಿಡಿದಿಡುತ್ತದೆ. ಈ ನಾಟಕದಲ್ಲಿ 9 ಪಾತ್ರಧಾರಿಗಳು ಬರುತ್ತಿದ್ದು ಎಲ್ಲ ಕಲಾವಿದರೂ ತಮ್ಮ ತಮ್ಮ ಪಾತ್ರಗಳಿಗೆ ಜೀವ ತುಂಬಿದ್ದಾರೆ.

ಕಲಾವಿದರಾದ ಶ್ರೀಮತಿ ಪದ್ಮಾ ಕುಲಕರ್ಣಿ ಹಾಗೂ ಶ್ರೀಮತಿ ಸ್ನೇಹಾ ಜೋಶಿಯವರ ಅತ್ತೆ ಸೊಸೆಯ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದು ತಮ್ಮ ನೈಜ ಅಭಿನಯದಿಂದ ಪ್ರೇಕ್ಷಕರ ಚಪ್ಪಾಳೆ ಗಿಟ್ಟಿಸಿಕೊಂಡರು.

ಕಲಾವಿದರಾದ ನಿರ್ಮಲಾ ಬಟ್ಟಲ, ಸ್ನೇಹಾ ಕುಲಕರ್ಣಿ, ಪ್ರಸಾದ ಕಾರಜೋಳ, ವಿನೋದ ಸಪ್ಪಣ್ಣವರ, ಯೋಗೇಶ ದೇಶಪಾಂಡೆ, ಅಶೋಕ ಕುಲಕರ್ಣಿ, ಆರ್ವಿ. ಭಟ್, ರಮೇಶ ಬಡಿಗೇರ, ರಾಜವೀರ ಹಿರೇಮಠ ಬೇರೆ ಬೇರೆ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ.

ಡಾ. ಅರವಿಂದ ಕುಲಕರ್ಣಿ ಅಧ್ಯಕ್ಷತೆಯಲ್ಲಿ ತುಂಬ ಕ್ರಿಯಾಶೀಲವಾಗಿರುವ ರಂಗಸಂಪದ ತಂಡ, ವೈವಿಧ್ಯಮಯ ನಾಟಕಗಳನ್ನ ನೀಡುತ್ತಲಿದೆ. ಜನರಲ್ಲಿ ನಾಟಕದ ಅಭಿರುಚಿ ಮೂಡಿಸುವಲ್ಲಿ ಯಶಸ್ವಿಯಾಗಿದೆ.

ಶ್ರೀಮತಿ.ಶ್ವೇತಾ ನರಗುಂದ ದಂಪತಿಗಳು ಜಾಗಟೆ ಬಾರಿಸಿ ನಾಟಕದ ಉದ್ಘಾಟನೆ ನೆರವೇರಿಸಿದರು. ಅಧ್ಯಕ್ಷರಾದ. ಡಾ.ಅರವಿಂದ ಕುಲಕರ್ಣಿ ಮತ್ತು ಉಪಾಧ್ಯಕ್ಷರಾದ ಗುರುನಾಥ ಕುಲಕರ್ಣಿ ಮತ್ತು.ರಾಮಚಂದ್ರ ಕಟ್ಟಿ ಉದ್ಘಾಟನೆಯ ವೇಳೆ ಉಪಸ್ಥಿತರಿದ್ದರು.

ನೂತನ ಮಂದಿರ ಉದ್ಘಾಟಿಸಿದ ಚನ್ನರಾಜ ಹಟ್ಟಿಹೊಳಿ

ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದ ಸೋನೋಲಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಶ್ರೀ ಬ್ರಹ್ಮಲಿಂಗ ಮಂದಿರದ ಕಟ್ಟಡವನ್ನು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಸೋಮವಾರ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಇಡೀ ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಅವಕಾಶ ನಮಗೆ ಸಿಕ್ಕಿದೆ. ಸಹೋದರಿ ಲಕ್ಷ್ಮೀ ಹೆಬ್ಬಾಳಕರ್ ಅವರು ಶಾಸಕರಾದ ನಂತರ ಕ್ಷೇತ್ರದ ಅಭಿವೃದ್ಧಿಯ ದಿಕ್ಕು ಬದಲಾಗಿದೆ. ಈಗ ಅವರು ಸಚಿವರಾದ ನಂತರ ಎಲ್ಲರ ಸಹಕಾರದಿಂದ ಇನ್ನಷ್ಟು ಯೋಜನೆಗಳನ್ನು ತರುವ ಪ್ರಯತ್ನ ಮಾಡುತ್ತಿದ್ದಾರೆ. ಎಲ್ಲರೂ ಒಂದೇ ಕುಟುಂಬದಂತೆ ಇದ್ದು, ಮುಂದಿನ ದಿನಗಳಲ್ಲಿ ಸಚಿವರ ಕೈಯನ್ನು ಮತ್ತಷ್ಟು ಬಲಪಡಿಸೋಣ ಎಂದರು.

ಈ ಸಮಯದಲ್ಲಿ ಗ್ರಾಮದ ಹಿರಿಯರು, ಮನೋಹರ್ ಬೆಳಗಾಂವ್ಕರ್, ಮಾರುತಿ ಪಾಟೀಲ, ಗುರುನಾಥ್ ಪಾಟೀಲ, ಬಾಳು ಜಾಂಗ್ರೂಚೆ, ಶಿವಾಜಿ ಕೆ. ಗುರುನಾಥ್ ಜಾಂಗ್ರೂಚೆ, ನಾರಾಯಣ ಪಾಟೀಲ, ಮಾರುತಿ ಕನಗುಟ್ಕರ್, ಭರ್ಮಾ ಪಾಟೀಲ ಹಾಗೂ ಮಂದಿರ ಸಮಿತಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

ವೇದಾಂತ ರಿಸೋರ್ಸ್ ಮರುಪಾವತಿ ಪೂರ್ಣ

ಹುಬ್ಬಳ್ಳಿ: ವೇದಾಂತ ರಿಸೋರ್ಸಸ್ ಲಿಮಿಟೆಡ್ ಫೆಬ್ರವರಿ 7,2024 ರಂದು ತನ್ನ ಬಾಂಡ್ ಹೊಂದಿರುವವರಿಗೆ ಮರುಪಾವತಿಯನ್ನು ಪೂರ್ಣಗೊಳಿಸಿದೆ ಎಂದು ಘೋಷಿಸಿತು, ಈ ವರ್ಷದ ಆರಂಭದಲ್ಲಿ ಸ್ವೀಕರಿಸಿದ ಒಪ್ಪಿಗೆಗಳಿಗೆ ಅನುಗುಣವಾಗಿ $3.2 ಬಿಲಿಯನ್ ಮೌಲ್ಯದ ಬಾಂಡ್ ಗಳ ಮೆಚ್ಯೂರಿಟಿಗಳನ್ನು 2029 ಕ್ಕೆ ಯಶಸ್ವಿಯಾಗಿ ವಿಸ್ತರಿಸಲಾಗಿದೆ.

ಈ ಪ್ರಕ್ರಿಯೆಯು ಪೂರ್ಣಗೊಳ್ಳುವುದರೊಂದಿಗೆ, ವಿಆರ್‌ಎಲ್ ನಲ್ಲಿನ ಸಾಲದ ಮೆಚ್ಯೂರಿಟಿಗಳು ಹೆಚ್ಚು ಸಮವಾಗಿ ಹರಡುತ್ತಿವೆ ಎಂಬುದನ್ನು ತಿಳಿಸಲು ವಿಆರ್‌ಎಲ್ ಸಂತೋಷವಾಗಿದೆ, ಇದು ಈ ಪ್ರಕ್ರಿಯೆಯ ನಮ್ಮ ಮುಖ್ಯ ಉದ್ದೇಶವಾಗಿದೆ.

ನಿಮಗೆ ತಿಳಿದಿರುವಂತೆ, ವೇದಾಂತ ಸಮೂಹವು ಕಳೆದ ವರ್ಷ ಸೆಪ್ಟೆಂಬರ್ ನಲ್ಲಿ ಗಮನಾರ್ಹವಾದ ವಿಭಜನೆ ಮತ್ತು ಮರುಸಂಘಟನೆಯ ಯೋಜನೆಯನ್ನು ಘೋಷಿಸಿತು. ಇದು ವೇದಾಂತ ಸಮೂಹವನ್ನು 17 ಪ್ರಮುಖ ಉದ್ಯಮಗಳಲ್ಲಿ ಮರುಸಂಯೋಜಿಸಲಿದೆ.

ಪ್ರತಿಯೊಂದು ವ್ಯವಹಾರವು ವಿಶ್ವ ದರ್ಜೆಯ ನಿರ್ವಹಣಾ ನಾಯಕತ್ವವನ್ನುಹೊಂದಿದೆ,ಇತ್ತೀಚಿನಅತ್ಯಾಧುನಿಕತಂತ್ರಜ್ಞಾನಗಳನ್ನು ಬಳಸುವುದರಿಂದ ಆಮದು ಪರ್ಯಾಯ ಮತ್ತು ದೇಶೀಯ ಬೇಡಿಕೆಯನ್ನು ಪೂರೈಸುವುದು ಪ್ರಮುಖ ಪ್ರತಿಪಾದನೆಯಾಗಿದೆ. ಅವು ಸಾಂಸ್ಥಿಕ ಮತ್ತು ಚಿಲ್ಲರೆ ಹೂಡಿಕೆದಾರರಿಗೆ ಉತ್ತಮ ಗುಣಮಟ್ಟದ ಮತ್ತು ವೈವಿಧ್ಯಮಯ ಹೂಡಿಕೆ ಅವಕಾಶಗಳನ್ನು ಸಹ ನೀಡುತ್ತವೆ. ಅನುಷ್ಠಾನದ ಪ್ರಗತಿಯನ್ನು ನಾವು ಸಕಾಲದಲ್ಲಿ ನವೀಕರಿಸುತ್ತೇವೆ.

ಲಕ್ಷಕಿಂತ ಅಧಿಕ ಜಾನುವಾರುಗಳಿಗೆ ಚಿಕಿತ್ಸೆ

Uday
ಪಶು ವಿಕಾಸ
Uday
ಪಶು ವಿಕಾಸ ದಿನ पर
WORLD RECORDS UNION
10 February 2024

ಹುಬ್ಬಳ್ಳಿ: ಫೆಬ್ರವರಿ 12 2024ರಂದು ಆಯೋಜಿಸಿದ್ದ 6ನೇ ಪಶು ವಿಕಾಸ ದಿನ 14 ರಾಜ್ಯಗಳ 460 ಕ್ಕೂ ಹೆಚ್ಚು ಸ್ಥಳಗಳಲ್ಲಿ ಶಿಬಿರಗಳನ್ನು ಆಯೋಜಿಸಿ ಒಂದೇ ದಿನದಲ್ಲಿ ಒಂದು ಲಕ್ಷಕ್ಕೂ ಅಧಿಕ ಪಶುಗಳಿಗೆ ಅಗತ್ಯ ಚಿಕಿತ್ಸೆ ನೀಡುವುದರ ಮೂಲಕ ಭಾರತದ್ಯಂತ ಡೈರಿ ಕೃಷಿಯಲ್ಲಿ ಮಹಿಳೆಯರ ಸಹಭಾಗಿತ್ವವನ್ನು ಆಚರಿಸಿತ್ತು ಹಾಗೂ ಈ 6ನೇ ಪಶು ವಿಕಾಸ ದಿನದಂದು ಎಸ್ ಎಂ ಎಫ್ ಜಿ ಇಂಡಿಯಾ ಕ್ರೆಡಿಟ್ ಸಂಸ್ಥೆಯ 4000 ಸಿಬ್ಬಂದಿಗಳು ಸ್ವಯಂ ಸೇವಕರಾಗಿ ಸೇವೆ ಸಲ್ಲಿಸಿ ಪ್ರಮಾಣಪತ್ರ ಪಡೆದುಕೊಂಡಿದೆ. ವಿಶ್ವ ದಾಖಲೆಗಳ ಒಕ್ಕೂಟದಿಂದ ಫಬ್ರವರಿ 10- 2024 ರಂದು ಭಾರತದ ಪ್ರಮುಖ ಎನ್ ಬಿ ಎಫ್ ಸಿ ಗಳಲ್ಲಿ ಒಂದಾದ ಎಸ್ ಎಂ ಎಫ್ ಜಿ ಇಂಡಿಯಾ ಕ್ರೆಡಿಟ್ ಕಂ ಲಿಮಿಟೆಡ್ (ಫುಲ್ಲರ್‌ಟನ್ ಇಂಡಿಯಾ ಕ್ರೆಡಿಟ್. ಕಂ.ಲಿಮಿಟೆಡ್) 6ನೇ ಪಶು ವಿಕಾಸ ದಿನವನ್ನು ಮಾಡಲಾಯಿತ್ತು .

ಭಾರತದ 8 ಕೋಟಿಗೂ ಅಧಿಕ ಕುಟುಂಬಗಳು ಹಾಲು ಉತ್ಪಾದನಾ ವಲಯದೊಂದಿಗೆ ನೇರ ಸಂಬಂಧ ಹೊಂದಿದೆ ಹಾಗೂ ಈ ಕಾರ್ಯದಲ್ಲಿ ಮಹಿಳೆಯರ ಪಾಲು ಶೇ 70% ರಷ್ಟಿದೆ. ಹಾಗಾಗಿ 6ನೇ ಪಶು ವಿಕಾಸ ದಿನವನ್ನು ಮಹಿಳೆಯರ ಶ್ರಮವನ್ನು ಸ್ಮರಿಸುವುದಾಕ್ಕಾಗಿ “ಹೈನುಗಾರಿಕೆಯಲ್ಲಿ ಮಹಿಳೆಯರು” ಎಂದು ಆಚರಿಸಲಾಯಿತ್ತು. ಈ ಉಪಕ್ರಮವು ಇಎಸ್‌ಜಿ ಚೌಕಟ್ಟಿನೊಳಗೆ “ಸಾಮಾಜಿಕ ಅಂಶವನ್ನು ಪ್ರತಿಬಿಂಬಿಸುತ್ತದೆ, ಅಲ್ಲದೆ ಸಾಮಾಜಿಕ ಉನ್ನತಿಗೆ ಚಾಲನೆ ನೀಡುವ ಜೊತೆಗೆ ಲಿಂಗ ವೈವಿಧ್ಯತೆಯ ಮಹತ್ವ ಹೇಳುತ್ತದೆ.

ಜಾನುವಾರುಗಳ ಆರೈಕೆಯ ಹೊರತಾಗಿ, ಖಔಈಉ ಇಂಡಿಯಾ ಕ್ರೆಡಿಟ್ ದೇಶಾದ್ಯಂತ ಸಮುದಾಯಕ್ಕಾಗಿ 300 ಕ್ಕೂ ಹೆಚ್ಚು ಆರೋಗ್ಯ ಶಿಬಿರಗಳನ್ನು ಫೆಬ್ರವರಿ 4 ರಿಂದ ಫೆಬ್ರವರಿ 10 2024 ರವರೆಗೆ ಆಯೋಜಿಸಿದ್ದು, 30,000 ಕ್ಕೂ ಹೆಚ್ಚು ಜನರು ಪ್ರಯೋಜನ ಪಡೆದಿದ್ದಾರೆ. 6ನೇ ಪಶು ವಿಕಾಸ್ ದಿನವು ಸಂಪೂರ್ಣವಾಗಿ 1,25,000 ಕ್ಕೂ ಹೆಚ್ಚು ಜೀವಗಳನ್ನು ಮುಟ್ಟಿತು ಮತ್ತು ಪರಿಣಾಮ ಬೀರಿತು. ದೇಶದದ್ಯಾಂತ 600 ನಗರಗಳು 65 ಸಾವಿರಕ್ಕೂ ಹೆಚ್ಚು ಹಳ್ಳಿಗಳಲ್ಲಿ ಪ್ಯಾನ್ ಇಂಡಿಯಾ ಗ್ರಾಹಕರ ನೆಲೆಗಳನ್ನು ಹೊಂದುವ ಮೂಲಕ ಕಂಪನಿಯು ವೈವಿಧ್ಯಮಯವಾದ ಕಾರ್ಯತಂತ್ರವನ್ನು ಸಕ್ರಿಯಾಗೊಳಿಸಿದೆ ಅವರ ಕನಸು ನನಸು ಮಾಡಿಕೊಳ್ಳಲು ಸಾಲದ ಮೂಲಕ ನಿಧಿ ಅವರ ಉತ್ತಮ ಜೀವನೋಪಾಯಕ್ಕಾಗಿ ಗ್ರಾಮೀಣ ಭಾರತವನ್ನು ಉನ್ನತೀಕರಿಸುವ ಒಟ್ಟಾರೆ ಅಂತರ್ಗತ ವ್ಯವಸ್ಥೆಯನ್ನು ಖಚಿತಪಡಿಸಿಕೊಳ್ಳುವ ನಿಟ್ಟಿನಲ್ಲಿ ಗಮನಹರಿಸಿದೆ.

ಈ ಪಶು ವಿಕಾಸ ದಿನವು ಉಪಕ್ರಮವನ್ನು ನಿಭಾಯಿಸಲು ಒಂದೇ ದಿನದಲ್ಲಿ ಸ್ವಯಂ ಸೇವಕರಾಗಿ 4000 ಕ್ಕೂಹೆಚ್ಚು ಉದ್ಯೋಗಿಗಳು ಒಟ್ಟಾಗಿ ಭಾಗವಹಿಸಿದ್ದು ಸಾಕ್ಷಿಯಾಗಿದೆ. ಎಸ್ ಎಂ ಎಫ್ ಜಿ ಇಂಡಿಯಾ ಕ್ರೆಡಿಟ್ ಕಂ ಲಿಮಿಟೆಡ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ವ್ಯವಸ್ಥಾಪಕ ನಿರ್ದೇಶಕ ಶಾಂತನು ಮಿತ್ರ ಈ ಉಪಕ್ರಮದ ಬಗ್ಗೆ ಮಾತನಾಡಿ “ ನಮ್ಮ ಗ್ರಾಮೀಣ ಗ್ರಾಹಕರಲ್ಲಿ ಶೇ90 ಕ್ಕಿಂತ ಹೆಚ್ಚು ಮಂದಿ 66 ಮಹಿಳೆಯರಾಗಿದ್ದಾರೆ, ನಮ್ಮ ಬಹಳಷ್ಟು ಗ್ರಾಹಕರು ಅವರ ಆದಾಯದ ಪ್ರಮುಖ ಮೂಲವಾದ ಜಾನುವಾರುಗಳನ್ನು ಪಡೆದು ಕೊಳ್ಳುವುದಕ್ಕಾಗಿ ಸಾಲವನ್ನು ತೆಗೆದುಕೊಳ್ಳುತ್ತಾರೆ.ಈ ಬಲವರ್ಧಕವಾಗಿ ನಮ್ಮ ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು ಕಾರ್ಯನಿರ್ವಹಿಸುತ್ತವೆ ಮತ್ತು ಒಟ್ಟಾರೆ ಜೀವನದ ಗುಣಮಟ್ಟವನ್ನು ಹೆಚ್ಚಿಸಿ ಆದಾಯದ ಪ್ರವಹಿಸುವಿಕೆಯನ್ನು ಹೆಚ್ಚಿಸುತ್ತದೆ. ಜಾನುವಾರು ಕಲ್ಯಾಣದ ಹೊರತಾಗಿ ನಾವು ಸಕ್ರಿಯವಾಗಿ ಕೌಶಲ್ಯಾಭಿವೃದ್ಧಿ ಮತ್ತು ಆರ್ಥಿಕ ಸಾಕ್ಷರತೆಯನ್ನು ನಾವು ಸೇವೆ ಸಲ್ಲಿಸುತ್ತಿರುವ ಸಮುದಾಯಗಳಲ್ಲಿ ಅಂತರ್ಗತ ಬೆಳವಣಿಗೆಯನ್ನು ಉತ್ತೇಜಿಸುವ ಮೂಲಕ ನಮ್ಮ ಗ್ರಾಹಕರೊಂದಿಗೆ ಸಂಪರ್ಕವನ್ನು ಸ್ಥಾಪಿಸಲು ನಾವು ಸಮರ್ಪಿತರಾಗಿದ್ದೇವೆ ಎಂದು ಹೇಳಿದ್ದರು ಪಶು ವಿಕಾಸ ದಿನದ ಕುರಿತಾಗಿ ಎಸ್‌ಎಂಎಫ್‌ಜಿ ಇಂಡಿಯಾ ಕ್ರೆಡಿಟ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸ್ವಾಮಿನಾಥನ್ ಸುಬ್ರಮಣಿಯನ್ ಅವರು, 'ಎಸ್‌ಎಂಎಫ್ ಜಿ ಇಂಡಿಯಾಕ್ರೆಡಿಟ್‌ನಲ್ಲಿ, ನಾವು ಗ್ರಾಮೀಣಾಭಿವೃದ್ಧಿ ನೆರವಾಗುವಲ್ಲಿ ಮತ್ತು ದೃಢವಾದ ಸಾಮಾಜಿಕ ಉಪಕ್ರಮಗಳನ್ನು ಸಾಧಿಸುವ ನಮ್ಮ ಧ್ಯೇಯಕ್ಕೆ ಬದ್ಧರಾಗಿರುತ್ತೇವೆ.ಪ್ರಮುಖ ಸಾಲನೀಡಿಕೆದಾರರಾಗಿ, ಒಗ್ಗಟ್ಟಿನಿಂದ ಕೆಲಸ ಮಾಡುವ ವೈವಿಧ್ಯಮಯ ಉದ್ಯೋಗಿಗಳನ್ನು ಸಜ್ಜುಗೊಳಿಸಲು ನಾವು ಬಯಸುತ್ತೇವೆ. ಇದನ್ನು ಗಮನದಲ್ಲಿಟ್ಟುಕೊಂಡು, ಪಶು ವಿಕಾಸ ದಿನವನ್ನು ನಿರ್ದಿಷ್ಟವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಜಾನುವಾರುಗಳು ಮತ್ತು ಅವುಗಳ ಮಾಲೀಕರ ಆರೋಗ್ಯ ಅಗತ್ಯಗಳನ್ನು ಪರಿಹರಿಸಲು ಯೋಜನೆಯನ್ನು ವಿನ್ಯಾಸಗೊಳಿಸಲಾಗಿದೆ. ಇದು ಜಾನುವಾರು ಮತ್ತು ಮಾಲೀಕರ ಮಹತ್ವಾಕಾಂಕ್ಷೆಗಳಿಗೆ ಶಕ್ತಿ ನೀಡುತ್ತದೆ ಹಾಗೂ ಜಾನುವಾರು ಉತ್ಪಾದಕತೆಯನ್ನು ಹೆಚ್ಚಿಸುವುದರ ಮೇಲೆ ಗಮನವನ್ನು ಕೇಂದ್ರೀಕರಿಸುತ್ತದೆ. ತರುವಾಯ ಮನೆಯ ಆದಾಯವನ್ನು ಹೆಚ್ಚಿಸುತ್ತದೆ. ಹಿಂದುಳಿದವರಿಗೆ ಬೆಂಬಲವನ್ನು ನೀಡುವುದರ ಮೇಲೆ ನಮ್ಮ ಗಮನ ಕೇಂದ್ರೀಕೃತವಾಗಿದೆ' ಎಂದು ಹೇಳಿದರು.

ಕಾರ್ಯಾಲಯ ಸಹಾಯಕ ಹುದ್ದೆಗೆ ಅರ್ಜಿ ಅಹ್ವಾನ

ಬೆಳಗಾವಿ: ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆ ಗುತ್ತಿಗೆ ಆಧಾರದ ಮೇಲೆ ಕಾರ್ಯಾಲಯ ಸಹಾಯಕ (Office Assistant) ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಕಂಪ್ಯೂಟರ್ ಎಮ್ ಎಸ್ ಆಫೀಸ್, ಇಂಟರ್ನೆಟ್ ಜ್ಞಾನ ಹೊಂದಿರಬೇಕು. ಮತ್ತು ಕನ್ನಡ ಮತ್ತು ಇಂಗ್ಲಿಷ್ ಟೈಪಿಂಗ್ ಕಡ್ಡಾಯ. ಅಕೌಂಟಿಂಗ್ ಜ್ಞಾನ ಹೊಂದಿರಬೇಕು. ಉತ್ತಮ ಸಂವಹಣ ಕಲೆ ಹೊಂದಿರಬೇಕು ಕನ್ನಡ ಮತ್ತು ಇಂಗ್ಲಿಷ್ ಭಾಷೆಯನ್ನು ಓದಲು ಮತ್ತು ಬರೆಯಲು ಬರಬೇಕು. ಹಿಂದಿ ಭಾಷೆ ಹೆಚ್ಚಿನ ಜ್ಞಾನ ಹೊಂದಿರುವುದು. ಮತ್ತು ಆರ್‌ಸೆಟಿ/ರುಡಸೆಟಿಗಳಂಥ ಸಂಸ್ಥೆಗಳಲ್ಲಿ ಕೆಲಸ ಮಾಡಿದ ಅನುಭವವಿದ್ದಲ್ಲಿ ವಿಶೇಷ ಮನ್ನಣೆ ನೀಡಲಾಗುವುದು.

ಆಸಕ್ತ ಅಭ್ಯರ್ಥಿಗಳು ಸೂಕ್ತ ದಾಖಲೆಗಳ ಜೊತೆಗೆ ಒಂದು ಇತ್ತೀಚಿನ ಭಾವಚಿತ್ರದೊಂದಿಗೆ ತಮ್ಮ ಅರ್ಜಿಯನ್ನು ಸ್ವ ಅಕ್ಷರದಲ್ಲಿ ಬರೆದಿರಬೇಕು ಅಥವಾ ಟೈಪ್ ಮಾಡಿರಬೇಕು. ಅರ್ಜಿಯಲ್ಲಿ ಅನುಭವ ಮತ್ತು ಈಗ ಮಾಡುತ್ತಿರುವ ಉದ್ಯೋಗದ ವಿವರದೊಂದಿಗೆ ಅರ್ಜಿಯನ್ನು ತಮ್ಮ ಸ್ವ-ವಿಳಾಸ ಅಂಚೆ ಚೀಟಿ ಲಗತ್ತಿಸಿದ ಲಕೋಟೆಯೊಂದಿಗೆ ಫೆ.28ರ ಒಳಗಾಗಿ ಅರ್ಜಿಯನ್ನು ಸಲ್ಲಿಸಬೇಕು.

ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆ, ಪ್ಲಾಟ ನಂ ಸಿ ಎ-03 ಆಪ್ ಕಣಬರ್ಗಿ ಇಂಡಸ್ಟ್ರೀಯಲ್ ಏರಿಯಾ ಆಟೋ ನಗರ ಇಲ್ಲಿಗೆ ಅಥವಾ ದೂರವಾಣಿ 0831-2440644 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆ ಪ್ರಕಟಣೆಯಲ್ಲಿ ತಿಳಿಸಿದೆ.

ಸಂತ ಸೇವಾಲಾಲ್ ಜಯಂತಿ ಉತ್ಸವ ಫೆ. 15 ರಂದು

ಬೆಳಗಾವಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ಫೆ. 15 ರಂದು ಬೆಳಿಗ್ಗೆ 11 ಗಂಟೆಗೆ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಸಂತ ಸೇವಾಲಾಲ್ ಜಯಂತಿ ಉತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಬೆಳಗ್ಗೆ 9.30 ಗಂಟೆಗೆ ಅಶೋಕ ವೃತದಿಂದ ಕುಮಾರ ಗಂಧರ್ವ ಕಲಾ ಮಂದಿರದವರೆಗೆ ಭಾವಚಿತ್ರ ವೆರವಣಿಗೆ ಕಾರ್ಯಕ್ರಮ ನಡೆಯಲಿದೆ. ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಜಿಹೊಳಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕ ಸಬಲೀಕರಣ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ ಅವರು ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ. ಉತ್ತರ ವಿಧಾನಸಭೆ ಶಾಸಕರಾದ ಆಸೀಫ್ (ರಾಜು) ಸೇಠ್ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ವಿಧಾನಸಭೆ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ನವದೆಹಲಿಯ ವಿಶೇಷ ಪ್ರತಿನಿಧಿ-2 ಪ್ರಕಾಶ ಹುಕ್ಕೇರಿ, ವಾಯುವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರಾದ ಭರಮಗೌಡ ಕಾಗೆ, ರಾಜ್ಯ ಹಣಕಾಸು ಸಂಸ್ಥೆಯ ಅಧ್ಯಕ್ಷರು ಮಹಾಂತೇಶ ಕೌಜಲಗಿ ಅವರು ವಿಶೇಷ ಆಮಂತ್ರತರಾಗಿ ಆಗಮಿಸಲಿದ್ದಾರೆ. ಪ್ರಾದೇಶಿಕ ಆಯುಕ್ತರಾದ ಸಂಜಯ ಶೆಟ್ಟೆಣ್ಣವರ, ಉತ್ತರ ವಲಯ ಪೊಲೀಸ್ ಮಹಾನಿರೀಕ್ಷಕರಾದ ವಿಕಾಸ್ ಕುಮಾರ್ ವಿಕಾಶ್, ಜಿಲ್ಲಾಧಿಕಾರಿಗಳಾದ ನಿತೇಶ್ ಪಾಟೀಲ, ಬೆಳಗಾವಿ ಪೊಲೀಸ್ ಆಯುಕ್ತರಾದ ಎಸ್. ಎನ್ ಸಿದ್ಧರಾಮಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಬೀಮಾಶಂಕರ ಗುಳೇದ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕರಾದ ರಾಹುಲ್ ಶಿಂಧೆ, ಮಹಾನಗರ ಪಾಲಿಕೆ ಆಯುಕ್ತರಾದ ಅಶೋಕ ದುಡಗುಂಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಅವರು ಕಾರ್ಯಕ್ರಮದ ವೇದಿಕೆಯಲ್ಲಿ ಉಪಸ್ಥಿತ ಇರಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: ಪರಿಶಿಷ್ಟ ಜಾತಿಯ ಪತ್ರಕರ್ತರಿಗೆ ಎಲೆಕ್ಟ್ರಾನಿಕ್ ಹಾಗೂ ಡಿಜಿಟಲ್ ಮಾಧ್ಯಮದಲ್ಲಿ ಉದ್ದಿಮೆಯನ್ನು ಸ್ಥಾಪಿಸಲು ಸಹಾಯಧನಕ್ಕೆ ಅರ್ಜಿಯನ್ನು ಆಹ್ವಾನಿಸಲಾಗಿದ್ದು, ಫೆ.26 ರ ಸಂಜೆ 5.30 ಗಂಟೆ ಒಳಗಾಗಿ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಜಂಟಿ ನಿರ್ದೇಶಕರು ತಿಳಿಸಿದ್ದಾರೆ. ಕನಿಷ್ಠ 30 ವರ್ಷ ಗರಿಷ್ಠ 50ವರ್ಷ ವಯೋಮಿತಿ ಇರಬೇಕು. ವಾರ್ಷಿಕ ಆದಾಯ 10 ಲಕ್ಷ ಒಳಗಿರಬೇಕು.

ಕನಿಷ್ಟ 10 ವರ್ಷಗಳ ಕಾಲ ಸೇವಾನಭವ ಹೊಂದಿರಬೇಕು. ಬೆಳಗಾವಿ ನಗರ ವ್ಯಾಪ್ತಿಯಲ್ಲಿ ಅಭ್ಯರ್ಥಿಗಳು www.sw.kar.nic.in ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಡೌನ್‌ಲೋಡ್ ಮಾಡಿ, ಭರ್ತಿ ಮಾಡಿದ ಅರ್ಜಿಗಳನ್ನು ನೆಹರು ನಗರ ಸಮಾಜ ಕಲ್ಯಾಣ ಇಲಾಖೆ ಕಚೇರಿಗೆ ಸಲ್ಲಿಸಬೇಕು ಎಂದು ಸಮಾಜ ಕಲ್ಯಾಣಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶ್ರೀ ಸಿದ್ಧರಾಮೇಶ್ವರ ಆಂಗ್ಲ ಮಾಧ್ಯಮ ಶಾಲೆಯಲ್ಲಿ ವಾರ್ಷಿಕೋತ್ಸವ ಸಮಾರಂಭ

Shri Siddharameshwar Shikshan Samsthe's
SHRI SIDDHARAMESHWAR ENGLISH MEDIUM SCHOOL
Annual Day Celebration

ಬೆಳಗಾವಿ: ಜಾಗತೀಕರಣದ ಇಂದಿನ ಸಂದರ್ಭದಲ್ಲಿ ಆಂಗ್ಲ ಭಾಷಾ ಕಲಿಕೆಯು ಅವಶ್ಯ ಮಾತ್ರವಲ್ಲದೇ ಅನಿವಾರ್ಯವಾಗಿದೆ. ವಿವಿಧ ದೇಶಗಳಿಗೆ ಕೆಲಸವನ್ನು ಅರಸಿಕೊಂಡೋ, ವ್ಯಾಪಾವ-ಉದ್ದಿಮೆ ಮಾಡಲೆಂದೋ, ಉನ್ನತ ಶಿಕ್ಷಣ ಪಡೆಯಲೆಂದೋ ಹೋಗುತ್ತಿರುವ ನಮ್ಮ ಮಕ್ಕಳು ಆಂಗ್ಲ ಭಾಷಾ ಸಂವಹನ ಕೌಶಲ್ಯವನ್ನು ಪಡೆಯುವುದು ಅಪೇಕ್ಷಣಿಯ ಎಂದು ಶ್ರೀ ಸಿದ್ಧರಾಮೇಶ್ವರ ಆಂಗ್ಲ ಮಾಧ್ಯಮ ಶಾಲೆಯು ಆಂಗ್ಲ ಮಾಧ್ಯಮದಲ್ಲಿ ಉತ್ತಮ ಶಿಕ್ಷಣ ನೀಡುವುದರಲ್ಲಿ ಮುಂಚೂಣಿಯಲ್ಲಿದೆ ಎಂದು ಶ್ರೀ ಸಿದ್ಧರಾಮೇಶ್ವರ ಆಂಗ್ಲ ಮಾಧ್ಯಮ ಶಾಲೆಯ ವಾರ್ಷಿಕೋತ್ಸವ ಸಮಾರಂಭದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಸಾಹಿತಿಗಳು ಹಾಗೂ ವಿಶ್ರಾಂತ ಆಂಗ್ಲ ಪ್ರಾಧ್ಯಾಪಕಿಯರಾದ ಡಾ.ಗುರುದೇವಿ ಹುಲೆಪ್ಪನವರಮಠ ರವರು ಅಭಿಪ್ರಾಯಪಟ್ಟರು.

ಇನ್ನೋರ್ವ ಅತಿಥಿಗಳಾಗಿ ಆಗಮಿಸಿದ್ದ.ರಶ್ಮಿ ಜೈನ್ ಅವರು ಪ್ರತಿ ಮಗುವಿನಲ್ಲಿ ಅವರದೇ ಆದ ಪ್ರತಿಭೆ, ಸೃಜನಶೀಲತೆ ಇದೆ. ಅದನ್ನು ಪಾಲಕರು ಮತ್ತು ಶಿಕ್ಷಕರು ಗುರುತಿಸಿ ಪ್ರೋತ್ಸಾಹಿಸಬೇಕೇ ವಿನಃ ಒಂದು ಮಗುವಿನ ಕಲಿಕಾ ಸಾಮರ್ಥ್ಯವನ್ನು ಇನ್ನೊಂದು ಮಗುವಿನ ಸಾಮರ್ಥ್ಯದೊಂದಿಗೆ ಹೋಲಿಸಬಾರದು ಎಂದು ನುಡಿದರು.

ಸಮಾರಂಭದ ಅಧ್ಯಕ್ಷತೆಯನ್ನು ನಗರದ ಚಂದ್ರಗಿರಿ ಮಹಿಳಾ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ.ಎ. ಎಲ್.ಪಾಟೀಲ ರವರು ವಹಿಸಿದ್ದರು. ಅವರು ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡುವಲ್ಲಿ ಪಾಲಕರ ಪಾತ್ರ ಮಹತ್ವದ್ದು. ಪಾಲಕತ್ವವು ಒಂದು ದೊಡ್ಡ ಕಲೆ ಮತ್ತು ಸವಾಲಾಗಿದೆ ಹಾಗೂ ಪಾಲಕರು ತಮ್ಮ ದೈನಂದಿನ ಕೆಲಸ-ಕಾರ್ಯಗಳ ನಡುವೆ ಬಿಡುವು ಮಾಡಿಕೊಂಡು ಮಕ್ಕಳ ಚಲನ-ವಲನ, ಆಟ-ಪಾಠಗಳ ಮೇಲೆ ನಿಗಾ ಇಡುವುದು ಅತ್ಯವಶ್ಯವಾಗಿದೆ ಎಂದು ಸಲಹೆ ನೀಡಿದರು. ವಿದ್ಯಾರ್ಥಿಗಳ ಹಾಡು ಹಾಗೂ ನೃತ್ಯ ಪ್ರದರ್ಶನಗಳು ಎಲ್ಲಾ ಸಭಿಕರ ಕಣ್ಮನ ಸೆಳೆದವು.

ಇದೇ ಸಂದರ್ಭದಲ್ಲಿ ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳಲ್ಲಿ ಪ್ರತಿಭೆ ತೋರಿದ ವಿದ್ಯಾರ್ಥಿಗಳಿಗೆ ಅತಿಥಿ ಅಭ್ಯಾಗತರು ಬಹುಮಾನ ಹಾಗೂ ಪ್ರಶಸ್ತಿ ಪತ್ರಗಳನ್ನು ವಿತರಿಸಿದರು. ಶಾಲೆಯ ಪ್ರಾಚಾರ್ಯರಾದ ಡಾ.ಪ್ರೇಮಾನಂದ ಜಾಧವ ರವರು ಸ್ವಾಗತಿಸಿದರು, ಶಿಕ್ಷಕಿಯರಾದ .ಸುನೀತಾ ಚೌಗಲೆ ಸೀಮಾ ಚಿಟ್ನಿಸ್ ಪ್ರಾರ್ಥಿಸಿದರು. ಶಿಕ್ಷಕಿಂಯರಾದ.ಸ್ನೇಹಾ ಗುಂಡೆ ವಾರ್ಷಿಕ ವರದಿ ವಾಚನವನ್ನು ಮಂಡಿಸಿದರು. ಶಿಕ್ಷಕಿಯರಾದ .ಸರಿತಾ ಪಾಟೀಲ ಹಾಗೂ. ಸವಿತಾ ಇಳಿಗೇರ ರವರು ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು. ಶಿಕ್ಷಕಿಯರಾದ ಶ್ರೀಮತಿ.ಗೀತಾ ತಿಪ್ಪಿಮಠ, ಮೀನಾಕ್ಷಿ ಯರಗಾಂವಿ ಹಾಗೂ. ಅಮೃತಾ ಬೈಲೂರ ಬಹುಮಾನ ವಿತರಣಾ ಕಾರ್ಯಕ್ರಮವನ್ನು ನಡೆಸಿಕೊಟ್ಟರು.

ಸವಿತಾ ಮಹರ್ಷಿ ಜಯಂತಿ ಉತ್ಸವ ಫೆ. 16 ರಂದು

ಬೆಳಗಾವಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ಫೆ. 16 ರಂದು ಬೆಳಗ್ಗೆ 11 ಗಂಟೆಗೆ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಸವಿತಾ ಮಹರ್ಷಿ ಜಯಂತಿ ಉತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮನ್ನು ಉದ್ಘಾಟಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ ಅವರು ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ. ಉತ್ತರ ವಿಧಾನಸಭೆ ಶಾಸಕರಾದ ಆಸೀಫ್ (ರಾಜು) ಸೇಠ್ ಅವರು ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ವಿಧಾನಸಭೆ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ನವದೆಹಲಿಯ ವಿಶೇಷ ಪ್ರತಿನಿಧಿ-2 ಪ್ರಕಾಶ ಹುಕ್ಕೇರಿ, ವಾಯುವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರಾದ ಭರಮಗೌಡ ಕಾಗೆ, ರಾಜ್ಯ ಹಣಕಾಸು ಸಂಸ್ಥೆಯ ಅಧ್ಯಕ್ಷರು ಮಹಾಂತೇಶ ಕೌಜಲಗಿ ಅವರು ವಿಶೇಷ ಆಮಂತ್ರತರಾಗಿ ಆಗಮಿಸಲಿದ್ದಾರೆ. ಪ್ರಾದೇಶಿಕ ಆಯುಕ್ತರಾದ ಸಂಜಯ ಶೆಟ್ಟೆಣ್ಣವರ, ಉತ್ತರ ವಲಯ ಪೊಲೀಸ್ ಮಹಾನಿರೀಕ್ಷಕರಾದ ವಿಕಾಶ್ ಕುಮಾರ ವಿಕಾಶ್, ಜಿಲ್ಲಾಧಿಕಾರಿಗಳಾದ ನಿತೇಶ್ ಪಾಟೀಲ, ಬೆಳಗಾವಿ ಪೊಲೀಸ್ ಆಯುಕ್ತರಾದ ಎಸ್.ಎನ್. ಸಿದ್ಧರಾಮಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಳಾದ ಬೀಮಾಶಂಕರ ಗುಳೇದ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕರಾದ ರಾಹುಲ್ ಶಿಂಧೆ, ಮಹಾನಗರ ಪಾಲಿಕೆ ಆಯುಕ್ತರಾದ ಅಶೋಕ ದುಡಗುಂಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಅವರು ಕಾರ್ಯಕ್ರಮದ ವೇದಿಕೆಯಲ್ಲಿ ಉಪಸ್ಥಿತ ಇರಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಗೆಗೆ ಭಾಷೆಯೆಂಬುದಿಲ್ಲ: ಎಂ.ಎಸ್ ಇಂಚಲ

ಬೆಳಗಾವಿ: ಇಂದಿನ ಬಹುಭಾಷಾ ಹಾಸ್ಯಗೋಷ್ಠಿಯಲ್ಲಿ ಕನ್ನಡ, ಹಿಂದಿ, ಇಂಗ್ಲೀಷ, ಮರಾಠಿ, ಉರ್ದು ಐದು ಭಾಷೆಗಳಲ್ಲಿ ಜನರು ತಮ್ಮ ರಸಪ್ರಸಂಗಗಳನ್ನು ಹಂಚಿಕೊಂಡರು. ಎಲ್ಲ ಭಾಷೆಗಳಿಗೂ ಸಂತೋಷದಿಂದ ಕೇಕೆ ಹಾಕಿ ಪ್ರತಿಕ್ರಿಯೆ ನೀಡಿದ್ದು ಮಾತ್ರ ಒಂದೇ ಭಾಷೆಯಿಂದ ಅದು ನಗೆ. ನಗೆಗೆ ಭಾಷೆಯೆಂಬುದಿಲ್ಲ ಎಂದು ಹಿರಿಯ ಕವಿ ಪ್ರೊ. ಎಂ.ಎಸ್. ಇಂಚಲ ಇಂದಿಲ್ಲಿ ಹೇಳಿದರು.

ಮುಂದೆ ಮಾತನಾಡುತ್ತ ಪ್ರೊ. ಇಂಚಲ ಅವರು ಬಹುಭಾಷಾ ಕಾವ್ಯ ಗೋಷ್ಠಿಗಳು ಸರ್ವೇ ಸಾಮಾನ್ಯ ಆದರೆ ಬಹುಭಾಷಾ ಹಾಸ್ಯಗೋಷ್ಠಿ ಕೇಳಿರಲಿಲ್ಲ. ಗುಂಡೇನಟ್ಟಿ ಮಧುಕರಹಮ್ಮಿಕೊಂಡಿರುವ ಈ ವಿನೂತನ ಪ್ರಯೋಗ ತುಂಬ ಖುಷಿಕೊಟ್ಟಿತು ಎಂದು ಹೇಳಿದರು.

ನಗರದ ಹಾಸ್ಯಕೂಟ ಮತ್ತು ಸಾಹಿತ್ಯ ಭವನ ವಿಶ್ವಸ್ತ ಮಂಡಳಿ ಸಂಯುಕ್ತ ಆಶ್ರಯದಲ್ಲಿ ಪೆಬ್ರವರಿ 10, 2024 ರಂದು ಬೆಳಗಾವಿಯ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನ ಸಭಾಭವನದಲ್ಲಿ ಬಹುಭಾಷಾ ಹಾಸ್ಯಗೋಷ್ಠಿ ಹಮ್ಮಿಕೊಂಡಿದ್ದರು ಅಧ್ಯಕ್ಷತೆಯನ್ನು ವಹಿಸಿದ್ದ ಪ್ರೊ. ಇಂಚಲ ಅವರು ಮೇಲಿನಂತೆ ಅಭಿಪ್ರಾಯ ವ್ಯಕ್ತಪಡಿಸಿದರು.

ಹಾಸ್ಯಕೂಟ ಸಂಚಾಲಕ ಗುಂಡೇನಟ್ಟಿ ಮಧುಕರ ಮಾತನಾಡುತ್ತ ಬಹುಭಾಷಾ ಕವಿಗೋಷ್ಠಿ, ಹಾಸ್ಯಗೋಷ್ಠಿ, ಸಾಹಿತ್ಯಗೋಷ್ಠಿಗಳು ಎಲ್ಲ ಭಾಷಿಕರನ್ನು ಒಂದೆಡೆ ಸೇರಿಸುತ್ತವೆ. ಮಾತೃ ಭಾಷಾಭಿಮಾನವಿರಲಿ. ಬೇರೆ ಬೇರೆ ಭಾಷೆಗಳನ್ನು ಪ್ರೀತಿಸೋಣ, ಅಭ್ಯಾಸ ಮಾಡೋಣ ಎಂದು ಹೇಳಿದರು.

ಪ್ರಾಯೋಜಕತ್ವವನ್ನು ಕೆ.ಎಸ.ಆರ್.ಟಿ.ಸಿ.ಯಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿರುವ ಬಿ.ಎ. ಪಾಟೀಲ ವಹಿಸಿಕೊಂಡಿದ್ದರು. ಎಸ್. ವಿ. ದೀಕ್ಷಿತ(ಹಿಂದಿ), ಚಿದಂಬರ ಮುನವಳ್ಳಿ(ಇಂಗ್ಲೀಷ), ದೀಪಿಕಾ ಕುಲಕರ್ಣಿ (ಕನ್ನಡ) ವೃಂದಾ ಮುತಾಲಿಕ ದೇಸಾಯಿ(ಮರಾಠಿ), ಚಿನಗುಡಿ(ಕನ್ನಡ), ರಂಗಭೂಮಿ ಕಲಾವಿದರಾದ ಶ್ರೀಮತಿ ಭಾರತಿ ದಾವಣಗೇರೆ ಮತ್ತು ರೇಶ್ಮಾ ಇಳಕಲ್ಲ ನಾಟಕಗಳಲ್ಲಿಯ ಹಾಸ್ರ ಪ್ರಸಂಗಗಳನ್ನು ಹಂಚಿಕೊಂಡು ಜನರನ್ನು ರಂಜಿಸಿದರು. ಜಿ. ಎಸ್. ಸೋನಾರ ನಿರೂಪಿಸಿದರು.

ಹಲ್ಲುಗಳ ಶುಚಿತ್ವದಿಂದ ಆರೋಗ್ಯವಾಗಿರಲು ಸಾಧ್ಯ

ಹುಬ್ಬಳ್ಳಿ: ನಮ್ಮ ಆರೋಗ್ಯ ನಮ್ಮ ಕೈಯಲ್ಲಿದೆ. ಅಂದರೆ ಅರ್ಥಾತ ಹಲ್ಲುಗಳ ಶುಚಿತ್ವ ಮತ್ತು ಗಟ್ಟಿಯಾಗಿರಬೇಕು ಇದರಿಂದ ಆಯುಷ್ಯ ವೃದ್ದಿಯಾಗುತ್ತದೆ ಎಂದು ಮೂರುಸಾವಿರಮಠದ ಜಗದ್ಗುರು ಡಾ.ಗುರುಸಿದ್ಧರಾಜಯೋಗಿಂದ್ರ ಮಹಾಸ್ವಾಮೀಜಿ ಹೇಳಿದರು.

ನಗರದ ಮೂರುಸಾವಿರಮಠದ ಆವರಣದಲ್ಲಿ ರೋಟರಿ ಕ್ಲಬ್ ಆಫ್ ಹುಬ್ಬಳ್ಳಿ ವತಿಯಿಂದ ಆಯೋಜಿಸಿದ್ದ ಉಚಿತ ಬೃಹತ್ ಹಲ್ಲು ತಪಾಸಣಾ ಶಿಬಿರ ಕಾರ್ಯಕ್ರಮಕ್ಕೆ ಸಸಿಗೆ ನೀರು ಹಾಕುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ರೋಟರಿ ಕ್ಲಬ್ ಡಿಸ್ಟ್ರಿಕ್ಟ್ ಗವರ್ನರ್ ನಾಸಿರ್ ಬೋರ್ಸಡವಾಲ್, ಸಮೂಹ ಸೇವೆಗಳು ನಿರ್ದೇಶಕ ಸುರೇಂದ್ರ ಪೋರ್ವಾಲ್ ಮಾತನಾಡಿದರು. ರೋಟರಿ ಕ್ಲಬ್ ಆಫ್ ಹುಬ್ಬಳ್ಳಿ ಅಧ್ಯಕ್ಷ ಅರವಿಂದ ಕುಬಸದ ಸ್ವಾಗತಿಸಿದರು. ಎಸ್.ಸಿ.ಭೂಸನೂರ ಪ್ರಾರ್ಥಿಸಿದರು. ಗುರುರಾಜ ಭದ್ರಾಪೂರ ನಿರೂಪಿಸಿದರು. ವಸಂತ ಭಸ್ಮೆ ವಂದಿಸಿದರು.

ವೈದ್ಯರಾದ ಡಾ. ಬಸವರಾಜ ಕಲ್ಲಾಪೂರ. ಡಾ ಚೇತನ ಜಯದೆ, ಡಾ. ಕೇಶವ ಅಬ್ಬಯ್ಯ, ಡಾ. ಪೂಜಾ ಪಾಟೀಲ, ಡಾ. ಶಾರದಾ ಏಕಬೋಟೆ, ಡಾ. ಅಜಿತ ಸಮರ್ಥ, ಡಾ. ಶೌಕತ ಅಲಿಖಾನ, ಡಾ. ಸೋಮಶೇಖರ ಅಂಗಡಿ ಅವರು ಸುಮಾರು 450 ಜನರ ಆರೋಗ್ಯ ತಪಾಸಣೆ ನಡೆಸಿದರು. ಕಾರ್ಯಕ್ರಮದಲ್ಲಿ ಅಮರ ಸೂಜಿ, ಸೈಮನ ಡೀಸೊಜಾ, ದೀಪಕ ಪಾಟೀಲ, ಬಿ.ಬಿ.ಪಾಟೀಲ, ಈಶ್ವರ ಗಳಗಣ್ಣವರ, ಸಿದ್ಧೇಶ್ವರ ಕಮ್ಮಾರ, ಚನ್ನಬಸಪ್ಪ ಧಾರವಾಡಶೆಟ್ಟರ, ವಿಧ್ಯಾಧರ ಯಲಗತ್ತಿ, ಮಂಜುನಾಥ ಹೊಂಬಳ ಇದ್ದರು.

ಜಗದ್ಗುರು ಮೂರುಸಾವಿರಮಠ ವಿದ್ಯಾವರ್ಧಕ ಸಂಘ
ಹುಬ್ಬಳ್ಳಿ

ಶಿಕ್ಷಣದ ಜೊತೆಗೆ ಪಾಲಕರನ್ನು ಗೌರವಿಸುವ ಸಂಸ್ಕೃತಿ, ಸಂಸ್ಕಾರ ಕಲಿಸಿ

ಅಥಣಿ: ಮಕ್ಕಳಿಗೆ ಬಾಲ್ಯದಿಂದಲೇ ಶಿಕ್ಷಣದ ಜೊತೆಗೆ ಒಳ್ಳೆಯ ಸಂಸ್ಕಾರ ಕೊಡಬೇಕು. ಉತ್ತಮ ನಾಗರಿಕನಿಗೆ ಇರಬೇಕಾದ ಗುಣಗಳನ್ನು ಬೆಳೆಸಬೇಕು. ಮಕ್ಕಳು ನಿತ್ಯ ಪಾಲಕರನ್ನು ವಂದಿಸಿ, ಆಶೀರ್ವಾದ ಪಡೆದುಕೊಳ್ಳಬೇಕು. ಹಾಗಾದಲ್ಲಿ ಮಾತ್ರ ದೇಶದ ಶ್ರೇಷ್ಠ ಸಂಸ್ಕೃತಿಯನ್ನು ಉಳಿಸಿ ಬೆಳೆಸಲು ಸಾಧ್ಯವಿದೆ ಎಂದು ಕಾಂಗ್ರೆಸ್ ಯುವ ನಾಯಕ ಚಿದಾನಂದ ಸವದಿ ಹೇಳಿದರು.

ಅವರು ಮರುಳ ಶಂಕರ ದೇವರು ಶಾಲೆಯ 35ನೇ ವಾರ್ಷಿಕೋತ್ಸವ ನಿಮಿತ್ಯ ಹಮ್ಮಿಕೊಂಡಿದ್ದ ತಂದೆ ತಾಯಂದಿರ ಪಾದ ಪೂಜೆ ಮತ್ತು ಅಮ್ಮನ ಕೈತುತ್ತು ಕಾರ್ಯಕ್ರಮ ಹಾಗೂ ವಿಜ್ಞಾನ ವಸ್ತು ಪ್ರದರ್ಶನ ಕಾರ್ಯಕ್ರಮನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು,

ಇಂದಿನ ಕಾಲದಲ್ಲಿ ಮಕ್ಕಳಿಗೆ ಉತ್ತಮ ಶಿಕ್ಷಣದ ಜೊತೆಗೆ ಒಳ್ಳೆಯ ಸಂಸ್ಕಾರ ಕೊಡುವ ಕೆಲಸವನ್ನು ಶಾಲೆಗಳು ಮಾಡಬೇಕು, ಅಂತಹ ಕೆಲಸವನ್ನು ಮರುಳು ಶಂಕರ ದೇವರ ಶಾಲೆ ಮಾಡುತ್ತಿದೆ. ಈ ಶಾಲೆ ಉತ್ತರೋತ್ತರವಾಗಿ ಬೆಳೆಯಲಿ. ಇಂದು ಶಾಲೆಯ ವಾರ್ಷಿಕೋತ್ಸವ ನಿಮಿತ್ಯ ನಡೆಯುತ್ತಿರುವ ಈ ಕಾರ್ಯಕ್ರಮ ರಾಜ್ಯಕ್ಕೆ ಮಾದರಿ ಕಾರ್ಯಕ್ರಮವಾಗಿದೆ ರಾಜ್ಯದ ಪ್ರತಿಯೊಂದು ಶಾಲೆಯಲ್ಲಿ ತಂದೆ ತಾಯಿಗಳ ಮಹತ್ವ ತಿಳಿಸುವ ಕೊಡುವ ಇಂತಹ ಕಾರ್ಯಕ್ರಮಗಳ ನಡೆಯಬೇಕೆಂದು ಹೇಳಿ ಈ ಶಾಲೆಯಲ್ಲಿ ಕಲಿಯುತ್ತಿರುವ ಪ್ರತಿಯೊಂದು ಮಕ್ಕಳು ಯಶಸ್ಸು ಕಾಣಲಿ ಎಂದು ಶುಭ ಹಾರೈಸಿದರು.

ಈ ವೇಳೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಅಧ್ಯಕ್ಷ ಶಿವಾನಂದ ದಿವಾನಮಳ ಮಾತನಾಡಿ ಗಿಡ ಮರಗಳನ್ನು ಹೇಗೆ ಪೊ?ಷಿಸುತ್ತೇವೆ ಹಾಗೆಯೇ ಮಕ್ಕಳನ್ನು ಈಗಿನಿಂದಲೇ ತಿದ್ದಿ ತೀಡಿ ಬೆಳೆಸುವ ಪೊ?ಷಕರ ಕರ್ತವ್ಯವಾಗಿದೆ ಈಗಿನಿಂದಲೇ ಮಕ್ಕಳನ್ನು ಉತ್ತಮವಾಗಿ ಬೆಳೆಸದೆ ಹೊದರೆ ಮಕ್ಕಳು ಮುಂದೆ ದಾರಿ ತಪ್ಪಿ ತಂದೆ ತಾಯಿಗಳ ಮಹತ್ವ ತಿಳಿಯದೆ ಮುಂದೆ ವೃದ್ಧಾಶ್ರಮಗಳಲ್ಲಿ ಬಿಡುತ್ತಾರೆ ಅದಕ್ಕಾಗಿ ಚಿಕ್ಕವರಿದ್ದಾಗಲೇ ಮಕ್ಕಳಿಗೂ ಉತ್ತಮವಾದ ಸಂಸ್ಕಾರ ನೀಡಬೇಕು ಎಂದ ಅವರು ಹಿರಿಯರಿಗೆ ಗೌರವ ಕೊಡುವುದು, ಕಾಲಿಗೆ ನಮಸ್ಕರಿಸುವುದು ಭಾರತೀಯ ಸಂಸ್ಕೃತಿಯಲ್ಲಿ ಮಾತ್ರ. ಇಂತಹ ಸಂಸ್ಕಾರ, ಸೌಜನ್ಯತೆ ಇನ್ನಾವ ದೇಶದಲ್ಲಿ ಸಿಗುವುದಿಲ್ಲ. ಸಂಸ್ಕಾರದ ಜತೆ ಪಡೆದ ವಿದ್ಯೆಯಿಂದ ಮಗುವಿನ ಜೀವನ ಉಜ್ವಲವಾಗುತ್ತದೆ ಎಂದು ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಶೆಟ್ಟರ್ ಮಠದ ಮರುಳಸಿದ್ಧ ಮಹಾಸ್ವಾಮಿಗಳು ಆಶೀರ್ವಚನ ನೀಡಿ ತಂದೆ ತಾಯಿಗಳ ಋಣವನ್ನು ತೀರಿಸಲು ಯಾರಿಂದಲೂ ಸಾಧ್ಯವಿಲ್ಲ. ಮಕ್ಕಳಿಗೆ ಪೊ?ಷಕರು ಒಳ್ಳೆಯ ಆಹಾರ ನೀಡಿ ಮಕ್ಕಳನ್ನು ದೈಹಿಕವಾಗಿ ಮತ್ತು ಮಾನಸಿಕವಾಗಿ ಸಬಲರನ್ನಾಗಿ ಮಾಡಬೇಕು ಗುರುವಿನ ಗುಲಾಮನಾಗುವತನಕ ಯಾರಿಗೂ ಸಹ ಮುಕ್ತಿ ಒಲಿಯದು ತಂದೆ ತಾಯಿ ಮತ್ತು ಗುರುಗಳು ನಮ್ಮ ಕಣ್ಣಿಗೆ ಕಾಣುವ ನಿಜವಾದ ದೇವರು ಆಧುನಿಕ ಯುಗದಲ್ಲಿ ತಂದೆ,ತಾಯಿ, ಗುರುಗಳು ಎಂಬ ಗೌರವ ಇಂದಿನ ಮಕ್ಕಳಲ್ಲಿ ಕಡಿಮೆಯಾಗುತ್ತಿರುವ ಸಂದರ್ಭದಲ್ಲಿ ಭಾರತೀಯ ಸಂಸ್ಕಾರ ಕಲಿಸುವ ಶಿಕ್ಷಣಕ್ಕೆ ಈ ಶಾಲೆ ಒತ್ತು ನೀಡುತ್ತಿರುವುದು ಹೆಮ್ಮೆಯ ವಿಷಯ ಅವರಿಗೆ ಮರುಳ ಶಂಕರ ಅಜ್ಜನವರ ಆಶೀರ್ವಾದ ಸದಾ ಇರಲಿ ಎಂದು ತುಂಬು ಹೃದಯದಿಂದ ಹರಿಸಿದರು.

ಸಿಕ್ಯಾಬ್ ಸಂಸ್ಥೆಯ ಲುಕ್ಮಾನ್ ಯುನಾನಿ ಮೆಡಿಕಲ್ ಕಾಲೇಜಿಗೆ ನಾಲ್ಕು ಯಾರ್‌ಂಕುಗಳ ಗರಿ

ವಿಜಯಪುರ: ಬೆಂಗಳೂರಿನ ರಾಜೀವ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವ ವಿದ್ಯಾಲಯವು ಶನಿವಾರ ಬಿಯುಎಂಎಸ್ ಪದವಿ ಕೋರ್ಸಿನ ಅಂತಿಮ ವರ್ಷದ ಫಲಿತಾಂಶವನ್ನು ಪ್ರಕಟಿಸಿದ್ದು, ವಿಜಯಪುರದ ಸಿಕ್ಯಾಬ್ ಸಂಸ್ಥೆಯ ಲುಕ್ಮಾನ ಯುನಾನಿ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆಯು ಒಟ್ಟು ನಾಲ್ಕು ಯಾರ್‌ಂಕುಗಳ ಗರಿ ಪಡೆದಿರುವುದು ವಿಶೇಷವಾಗಿದೆ. ವಿ.ವಿ ಪ್ರಕಟಿಸಿದ ಹತ್ತು ಯಾರ್‌ಂಕುಗಳಲ್ಲಿ ನಾಲ್ಕು ಯಾರ್‌ಂಕುಗಳನ್ನು ವಿಜಯಪುರ ಲುಕ್ಮಾನ್ ಯುನಾನಿ ಕಾಲೇಜು ಬಾಚಿಕೊಂಡಿದೆ.

ಸುಮ್ಮೈಯಾ ಮುಲ್ಲಾ ಶೇ.82.41 ಅಂಕ ಗಳಿಸಿ ಪ್ರಥಮ ಯಾರ್‌ಂಕ್ ಮತ್ತು ಚಿನ್ನದ ಪದಕ ಪಡೆದಿದ್ದಾರೆ. ಖತಿಜತ ಉಲ್ ಕುಬ್ರಾ ಶೇ.80.57ರಷ್ಟು ಅಂಕ ಗಳಿಸಿ ದ್ವಿತೀಯ ಯಾರ್‌ಂಕ್ ಪಡೆದಿದ್ದಾರೆ, ತಬಸ್ಸುಮ್ ಕುಡಚಿ ಶೇ.80.52ರಷ್ಟು ಅಂಕ ಗಳಿಸಿ ತೃತೀಯ ಯಾರ್‌ಂಕ್ ಪಡೆದಿದ್ದಾರೆ. ಸಯ್ಯದ್ ಅಬ್ದುಲ್ ರಶೀದ್ ಶೇ.79.13 ರಷ್ಟು ಅಂಕ ಗಳಿಸಿ ಏಳನೆಯ ಯಾರ್‌ಂಕ್ ಪಡೆದುಕೊಂಡು ಯುನಾನಿ ಕಾಲೇಜಿನ ಕೀರ್ತಿ ಹೆಚ್ಚಿಸಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ಎಸ್.ಎ. ಪುಣೇಕರ, ಪ್ರಧಾನ ಕಾರ್ಯದರ್ಶಿ ಎ.ಎಸ್. ಪಾಟೀಲ, ನಿರ್ದೇಶಕ ಸಲಾಹುದ್ದೀನ್ ಅಯೂಬಿ, ಡೀನ್ ಡಾ. ಅಕೀಲ್ ಖಾದ್ರಿ, ಪ್ರಾಚಾರ್ಯೆ ಡಾ.ಶಹನಾಜ್ ಬಾನು ಮತ್ತು ಕಾಲೇಜಿನ ಸಮಸ್ತ ಬೋಧಕ ಬೋಧಕೇತರ ಸಿಬ್ಬಂದಿಯವರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

24ಕ್ಕೆ ನವಲಗುಂದಕ್ಕೆ ಸಿಎಂ ಭೇಟಿ: ಸ್ಥಳ ಪರಿಶೀಲನೆ

ನವಲಗುಂದ: ಪಟ್ಟಣಕ್ಕೆ ಫೆ. 24ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು, ಶಾಸಕ ಎನ್. ಎಚ್.ಕೋನರಡ್ಡಿ ಅವರು ಶನಿವಾರ ವಿವಿಧ ಕಾಮಗಾರಿಗಳ ಸ್ಥಳ ಪರಿಶೀಲನೆ ನಡೆಸಿದರು.

ನಂತರ ಕಾರ್ಯಕ್ರಮ ನಡೆಯುವ ಮಾಡೆಲ್ ಹೈಸ್ಕೂಲ್ ಮೈದಾನ ವೀಕ್ಷಿಸಿದರು. ಪುರಸಭೆ ಮುಖ್ಯಾಧಿಕಾರಿ ವೆಂಕಟೇಶ ನಾಗನೂರ ಅವರು ಅಣ್ಣಿಗೇರಿ ರಸ್ತೆಯ ಲ್ಲಿರುವ ನೂತನ ಆಶ್ರಯ ನಿವೇಶನಗಳ ಕುರಿತು ಜಿಲ್ಲಾಧಿಕಾರಿಗೆ ಮಾಹಿತಿ ನೀಡಿದರು.

ತಾಲ್ಲೂಕು ಪಂಚಾಯಿತಿ ಸಭಾ ಭವನದಲ್ಲಿ ಶಾಸಕ ಕೋನರಡ್ಡಿ ನೇತೃತ್ವದಲ್ಲಿ ಅಧಿಕಾರಿಗಳ ಸಭೆ ನಡೆಸಿದ ಜಿಲ್ಲಾಧಿಕಾರಿ, 'ಅಧಿಕಾರಿಗಳು ಕಾರ್ಯಕ್ರಮಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಬೇಕು. ಪೊಲೀಸ್ ಇಲಾಖೆಯವರು ಸುಗಮ ಸಂಚಾರಕ್ಕೆ ವ್ಯವಸ್ಥೆ ಮಾಡಬೇಕು. ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಬೇಕು' ಎಂದು ಸೂಚನೆ ನೀಡಿದರು.

ಇದಕ್ಕೂ ಮುನ್ನ ಮೊರಬ ಹೋಬಳಿಯ ತಿರ್ಲಾಪುರ ಗ್ರಾಮದ ಚಕ್ಕಡಿ ರಸ್ತೆ ವೀಕ್ಷಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗೋಪಾಲ ಬ್ಯಾಕೋಡ, ಉಪವಿಭಾಗಾಧಿಕಾರಿ ಶಾಲಂ ಪಾಷಾ, ತಹಶೀಲ್ದಾರ್ ಸುಧೀರ್ ಸಾಹುಕಾರ್, ಲೋಕೋಪಯೋಗಿ ಇಲಾಖೆ ಎಂಜಿನಿಯರ್ ನಿಖಿಲ್ ಭರಡಿಶೆಟ್ಟರ್, ಸಿಪಿಐ ರವಿ ಕಪ್ಪತ್ತನವರ, ಪಿಎಸ್‌ಐ ಜನಾರ್ಧನ್ ಭಟ್ರಳ್ಳಿ, ಪುರಸಭೆ ಸದಸ್ಯರಾದ ಪ್ರಕಾಶ್ ಶಿಗ್ಲಿ, ಜೀವನ ಪವಾರ, ಮಾಂತೇಶ ಭೋವಿ, ಮಂಜು ಜಾಧವ, ಮೋದಿನ ಶಿರೂರು, ಪದ್ಮಾವತಿ ಪೂಜಾರ, ಹುಸೇನಬಿ ಧಾರವಾಡ, ಅನ್ನಪೂರ್ಣ ಸುಣಗಾರ, ಹನಮಂತ ತಳವಾರ ಇದ್ದರು.

18 ವರ್ಷದ ಬಳಿಕ ಗ್ರಾಮದೇವಿ ಜಾತ್ರೆ: ವ್ಯವಸ್ಥೆಯ ಉಸ್ತುವಾರಿ ಹೊತ್ತ ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ: 18 ವರ್ಷದ ಬಳಿಕ ಬಸರಿಕಟ್ಟಿ ಗ್ರಾಮದ ಗ್ರಾಮ ದೇವತೆ ಶ್ರೀ ಲಕ್ಷ್ಮೀ ದೇವಿಯ ಜಾತ್ರೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಕ್ಷೇತ್ರದ ಶಾಸಕರೂ ಆಗಿರುವ, ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಮ್ಮದೇ ಮನೆಯ ಕಾರ್ಯಕ್ರಮವೆನ್ನುವಂತೆ ಸಮಗ್ರ ವ್ಯವಸ್ಥೆಯ ಹೊಣೆ ನಿರ್ವಹಿಸುತ್ತಿದ್ದಾರೆ.

ಜಾತ್ರೆಯ ದಿನ ನಿರ್ಣಯವಾಗುತ್ತಿದ್ದಂತೆ ಗ್ರಾಮದ ಪ್ರಮುಖರೊಂದಿಗೆ ಚರ್ಚಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಆಗಬೇಕಿರುವ ಕೆಲಸಗಳ ಸಂಪೂರ್ಣ ವಿವರ ಪಡೆದರು. ಗ್ರಾಮದ ಸಮಗ್ರ ಅಭಿವೃದ್ಧಿ ಮತ್ತು ಜಾತ್ರೆಯ ವೇಳೆ ಸೇರುವ ಭಕ್ತರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ವ್ಯವಸ್ಥೆ ಕಲ್ಪಿಸಲು ತಮ್ಮ ಸಿಬ್ಬಂದಿಗೆ ಸೂಚನೆ ನೀಡಿದ ಸಚಿವರು, ತಾವು ಸ್ವತಃ ಮತ್ತು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಯುವ ಮುಖಂಡ ಮೃಣಾಲ ಹೆಬ್ಬಾಳಕರ್ ಅವರ ಮೂಲಕ ಪ್ರತಿಯೊಂದು ಕೆಲಸದ ಪ್ರಗತಿಯನ್ನು ಪರಿಶೀಲಿಸುತ್ತಿದ್ದಾರೆ.

ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗೂ ಅಗತ್ಯ ವ್ಯವಸ್ಥೆ ಮಾಡುವಂತೆ ಸಚಿವರು ಸೂಚನೆ ನೀಡಿದ್ದಾರೆ. ಗ್ರಾಮದಲ್ಲಿ ಈಗಾಗಲೇ ಪೇವರ್ಸ್ ಅಳವಡಿಕೆ, ಕಾಂಕ್ರೀಟ್ ರಸ್ತೆಗಳ ನಿರ್ಮಾಣ, ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಹೊರವಲಯದ ರಸ್ತೆಗಳ ಡಾಂಬರೀಕರಣ, ವಿದ್ಯುತ್ ಕಂಬಗಳ ಅಳವಡಿಕೆ, ವಿದ್ಯುತ್ ವಿತರಕಗಳ ಸ್ಥಳಾಂತರ, ನಿರಂತರ ನೀರಿನ ವ್ಯವಸ್ಥೆ ಸೇರಿದಂತೆ ಎಲ್ಲ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ.

ಜಾತ್ರೆಗೆ ಬರುವ ಭಕ್ತರಿಗೆ ಸಕಲ ವ್ಯವಸ್ಥೆಗಳಾಗಬೇಕು, ಜಾತ್ರೆ ಸಂಪೂರ್ಣ ನಿರ್ವಿಘ್ನವಾಗಿ ನಡೆಯಬೇಕು, ದೇವರ ಕೆಲಸದಲ್ಲಿ ಸ್ವಲ್ಪವೂ ಲೋಪವಾಗಬಾರದೆನ್ನುವ ಉದ್ದೇಶವಿಟ್ಟುಕೊಂಡು ಮನೆಯ ಮಗಳಂತೆ ಲಕ್ಷ್ಮೀ ಹೆಬ್ಬಾಳಕರ್ ಕಾಳಜಿ ವಹಿಸುತ್ತಿದ್ದಾರೆ.

ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಅತ್ಯಂತ ಕಾಳಜಿ ತೆಗೆದುಕೊಂಡು ನಮ್ಮೂರ ಜಾತ್ರೆಗೆ ವ್ಯವಸ್ಥೆ ಮಾಡುತ್ತಿದ್ದಾರೆ. ಅವರಿರುವುದರಿಂದ ಗ್ರಾಮಸ್ಥರಿಗೆ ಹೆಚ್ಚಿನ ಭಾರವಾಗಿಲ್ಲ. ಈ ಬಾರಿಯ ಜಾತ್ರೆಯನ್ನು ಅತ್ಯಂತ ವಿಜ್ರಂಭಣೆಯಿಂದ ನಡೆಸಲು ಎಲ್ಲ ರೀತಿಯಿಂದ ಅವರು ಸಹಕರಿಸುತ್ತಿದ್ದಾರೆ ಎಂದು ಜಾತ್ರಾ ಸಮಿತಿಯವರು ಹಾಗೂ ಗ್ರಾಮಸ್ಥರು ತಿಳಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka. Printed At LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089